ಸಂಪುಟ: 14 Volume | ಸಂಚಿಕೆ: 105 Issue | ಪುಟಗಳು 08 Pages | ಗುರುವಾರ 30 ಜುಲೈ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೆಂಗಳೂರು | ಹುಬ್ಬಳ್ಳಿ | ಬೀದರ ಆವೃತ್ತಿ: ಕಲ್ಬುರ್ಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ, ಬಾಗಲಕೋಟೆ, ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಯಾವ ಸರ್ಕಾರಕ್ಕೆ ಜನರನ್ನು ಸುಖಿಗಳನ್ನಾಗಿಸಬೇಕೆಂಬ ಅಪೇಕ್ಷೆ ಇದೆಯೋ, ಯಾವ ಸರ್ಕಾರಕ್ಕೆ ಅದನ್ನು ಸಾಧಿಸುವ ರೀತಿ ತಿಳಿದಿದೆಯೋ ಅದೇ ಶ್ರೇಷ್ಠ ಸರ್ಕಾರ. –ಮೆಕಾಲೆ



ಬೀದರ್: ಗುರು ಪೂರ್ಣಿಮ ನಿಮಿತ್ಯ ಮಾಜಿ ಸಚಿವ ರಾಜಶೇಖರ ಬಿ.ಪಾಟೀಲರವರು ಕುಟುಂಬ ಸಮೇತ ಶ್ರೀ ಶ್ರೀ ಹವಾ ಮಲ್ಲಿನಾಥ ಮಹಾರಾಜರ ದರ್ಶನ ಪಡೆದರು.

## ಹೆಚ್ಚುವರಿ ವರದಿಗಾರರಾಗಿ ಪರಮೇಶ ರಾಂಪುರೆ ನೇಮಕ



**ಬೀದರ್:** 'ಮಲ್ಲಮ್ಮ ನುಡಿ' ಪ್ರಾದೇಶಿಕ ಕನ್ನಡ ದಿನಪತ್ರಿಕೆಯ ಬೀದರ ಜಿಲ್ಲೆಯ ಕಮಲನಗರ ತಾಲೂಕು ವರದಿಗಾರರಾಗಿ ಕಾರ್ಯನಿರ್ವಹಿಸುತ್ತಿರುವ ಪರಮೇಶ ತಂದೆ ಶಿವರಾಜ ರಾಂಪುರೆ ಇವರನ್ನು ಔರಾದ ತಾಲೂಕಿನ ಹೆಚ್ಚುವರಿ ವರದಿಗಾರರನ್ನಾಗಿ ನೇಮಕ ಮಾಡಿ ಪತ್ರಿಕೆಯ ಸಂಪಾದಕರು ಆದೇಶ ಹೊರಡಿಸಿದ್ದಾರೆ. ಇನ್ನುಮುಂದೆ ಔರಾದ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಒಳಪಡುವ ಎಲ್ಲಾ ರೀತಿಯ ಸುದ್ದಿ ಹಾಗೂ ಜಾಹೀರಾತುಗಳಿಗಾಗಿ ಸಾರ್ವಜನಿಕರು ಮತ್ತು ಸಂಸ್ಥೆಗಳು ಪರಮೇಶ ರಾಂಪುರೆ (ಮೊಬೈಲ್ ಸಂಖ್ಯೆ: 9980209238) ಅವರನ್ನು ಸಂಪರ್ಕಿಸಬಹುದಾಗಿದೆ ಎಂದು ಪತ್ರಿಕೆಯ ಸಂಪಾದಕರಾದ ರಮೇಶ ರೆಡ್ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಧಾನಸಭೆಯ ಸ್ಪೀಕರ್ ಸ್ಥಾನಕ್ಕೆ ಯಾರು..?

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಮುಂದಿನ ವಿಧಾನಸಭೆಯ ಸ್ಪೀಕರ್ ಸ್ಥಾನಕ್ಕೆ ಮೂವರು ಹೆಸರು ಮಂಚೂಣಿಯಲ್ಲಿ ಕೇಳಿ ಬರುತ್ತಿದೆ. ಮೂವರಿಗೂ ಸಭಾಪತಿ ಹುದ್ದೆ ಅಲಂಕರಿಸಲು ಇಷ್ಟವಿಲ್ಲದಿದ್ದರೂ, ಅನಿವಾರ್ಯತೆ ಎದುರಾಗಿದೆ ಎಂದು ಹೇಳಲಾಗುತ್ತಿದೆ. ಮುಂದಿನ ಅಧಿವೇಶನಗಳನ್ನು ಸರಿಯಾದ ನಿಟ್ಟಿನಲ್ಲಿ ನಡೆಸಬೇಕಾದ ಗುರುತರ ಜವಾಬ್ದಾರಿಯನ್ನು ಕಾಂಗ್ರೆಸ್ ಹೈಕಮಾಂಡ್ ಯಾರಿಗೆ ನೀಡಲಿದೆ ಎನ್ನುವುದು ಕುತೂಹಲಕ್ಕೆ ಕಾರಣವಾಗಿದೆ.

**ಯುಟಿ ಖಾದರ್ ಅವರು ಸಚಿವರಾಗಿರುವ ಹಿನ್ನಲೆಯಲ್ಲಿ ನೂತನ ಸ್ಪೀಕರ್ ಆಯ್ಕೆ:** ಕಳೆದ ಸಿದ್ದರಾಮಯ್ಯನವರ ಸರ್ಕಾರದಲ್ಲಿ ಸ್ಪೀಕರ್ ಆಗಿದ್ದ ಯುಟಿ ಖಾದರ್ ಅವರು, ಡಿಕೆ ಶಿವಕುಮಾರ್ ಸರ್ಕಾರದಲ್ಲಿ ಆರೋಗ್ಯ ಸಚಿವರಾಗಿ ಕೆಲಸ ನಿರ್ವಹಿಸುತ್ತಿದ್ದಾರೆ. ಸದ್ಯ, ಮೂವರು ಹಿರಿಯ ನಾಯಕರ ಹೆಸರು ಮಂಚೂಣಿಯಲ್ಲಿ ಕೇಳಿ ಬರುತ್ತಿದೆ.

ಗದಗ ಕ್ಷೇತ್ರದ ಹಿರಿಯ ಶಾಸಕ ಎಚ್.ಕೆ.ಪಾಟೀಲ್ ಹೆಸರು ಮಂಚೂಣಿಯಲಿದೆ. ಬೆಂಗಳೂರು ಗಾಂಧಿನಗರ ಕ್ಷೇತ್ರದ ಶಾಸಕ ದಿನೇಶ್ ಗುಂಡೂರಾವ್ ಅವರಿಗೆ ಪಟ್ಟ? ಎಂಬ ಪ್ರಶ್ನೆ ಹುಟ್ಟುಹಾಕಿದೆ. ಸಿದ್ದರಾಮಯ್ಯನವರ ಎರಡನೇ ಕ್ಯಾಬಿನೆಟ್'ನಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಚಿವರಾಗಿದ್ದ ದಿನೇಶ್ ಗುಂಡೂರಾವ್ ಅವರ ಹೆಸರೂ ಸಭಾಪತಿ ಸ್ಥಾನಕ್ಕೆ ಕೇಳಿ ಬರುತ್ತಿದೆ. ಆಳಂದದ ಹಿರಿಯ ಶಾಸಕ ಬಿ.ಆರ್.ಪಾಟೀಲ್ ಹೆಸರೂ ಕೇಳಿ ಬರುತ್ತಿದೆ. ಭೋಜರಾಜ್ ರಾಮಚಂದ್ರಪ್ಪ ಪಾಟೀಲ್ ಇವರ ಹೆಸರೂ ಸಭಾಪತಿ ಸ್ಥಾನಕ್ಕೆ ಕೇಳಿ ಬರುತ್ತಿದೆ. ಜೆಡಿಎಸ್, ಕೆಜೆಪಿ ಪಾರ್ಟಿಯ ಜೊತೆಗೂ ಪಾಟೀಲ್ ಗುರುತಿಸಿಕೊಂಡಿದ್ದರು. ಮಂತ್ರಿ ಸ್ಥಾನ ಕೇಳುವುದು ನನ್ನ ಹಕ್ಕು, ಕೊಡಿಸುವುದು ಸಿದ್ದರಾಮಯ್ಯನವರ ಜವಾಬ್ದಾರಿ ಎಂದು ಪಾಟೀಲ್, ಕಳೆದ ತಿಂಗಳು ಹೇಳಿದ್ದರು. ಇವರ ಹೆಸರೂ, ಸ್ಪೀಕರ್ ಹುದ್ದೆಗೆ ಕೇಳಿ ಬರುತ್ತಿದೆ. ಒಂದೆರಡು ದಿನಗಳಲ್ಲಿ ಮುಂದಿನ ಸಭಾಪತಿ ಯಾರು ಎನ್ನುವ ಕುತೂಹಲಕ್ಕೆ ತೆರೆಬೀಳುವ ಸಾಧ್ಯತೆಯಿದೆ.

## ಯೋಜನೆ ಕುರಿತು ಜಾಗೃತಿ ಅಭಿಯಾನಕ್ಕೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



2026–27ನೇ ಸಾಲಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ ಬಿಮಾ (ವಿಮಾ) ಯೋಜನೆ (PMFBY)(ಪಿ.ಎಮ್.ಎಫ್.ಬಿ.ವೈ.) ಕುರಿತು ಕಲಬುರಗಿ ಜಿಲ್ಲೆಯ ಗ್ರಾಮವಾರು ವಾಹನಗಳ ಮೂಲಕ ಸಾರ್ವಜನಿಕರಿಗೆ ಮಾಹಿತಿ ತಲುಪಿಸುವ ಜಾಗೃತಿ ಅಭಿಯಾನಕ್ಕೆ ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಬುಧವಾರ ಕಲಬುರಗಿ ಜಿಲ್ಲಾಧಿಕಾರಿಗಳಾದ ಇಕ್ರಂ ಶರೀಫ್ ಅವರು ಚಾಲನೆ ನೀಡಿದರು.

ರೈತ ಭಾಂದವರು ಬಿತ್ತನೆ ಕಾರ್ಯಕೈಗೊಳ್ಳುವುದಷ್ಟೇ ಅಲ್ಲದೆ, ಬಿತ್ತಿದ ಬೆಳೆಯ ಕ್ಷೇತ್ರವನ್ನು ಬೆಳೆವಿಮೆಗೆ ನೊಂದಾಯಿಸುವುದು ಸಹ ಪ್ರಮುಖವಾಗಿದೆ. ಕೃಷಿ ಇಲಾಖೆಯ ಹಾಗೂ ಬೆಳೆವಿಮಾ ಸಂಸ್ಥೆಯ ವತಿಯಿಂದ ಜಿಲ್ಲೆಯಾದ್ಯಂತ ವಾಹನಗಳ ಮೂಲಕ ವಿಶೇಷ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಆದ್ದರಿಂದ ಜಿಲ್ಲೆಯ ರೈತರು ಕೊನೆಯ ದಿನಾಂಕದವರೆಗೆ ಕಾಯದೇ, ಮುಂಚಿತವಾಗಿ ತಮ್ಮ ಬೆಳೆವಿಮೆ ನೋಂದಣಿ ಮಾಡಿಸಿಕೊಳ್ಳುವಂತೆ ತಿಳಿಸಲಾಗಿದೆ.

ಈ ಸಂದರ್ಭದಲ್ಲಿ ಕಲಬುರಗಿ ಜಂಟಿ ಕೃಷಿ ನಿರ್ದೇಶಕ ಸಮದ ಪಟೇಲ್ ಸೇರಿದಂತೆ ಕಲಬುರಗಿ ಮತ್ತು ಸೇಡಂ ತಾಲೂಕುಗಳ ಉಪ ಕೃಷಿ ನಿರ್ದೇಶಕರು ಹಾಗೂ ಇಂಡಸ್ ಇಂಡ್ ಜನರಲ್ ಇನ್ಸೂರೆನ್ಸ್ ವಿಮಾ ಕಂಪನಿಯ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಸಂಪುಟ ವಿಸ್ತರಣೆ ಸರ್ಕಸ್

### ಬಹುತೇಕ 14 ಸ್ಥಾನ ಭರ್ತಿ ಖಚಿತ | ಉಳಿದ ಸ್ಥಾನ ಯಾರಿಗೆ ಎನ್ನುವ ತರ್ಕ | ರಾಜಕೀಯ ಜೋರು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಸಂಪುಟ ವಿಸ್ತರಣೆಗೆ ಎಲ್ಲಾ ಸಿದ್ಧತೆ ಪೂರ್ಣಗೊಂಡಿದೆ. ಮೂಲಗಳ ಪ್ರಕಾರ, (ಜುಲೈ 29) ಫೈನಲ್ ಪಟ್ಟಿಗೆ ಅಂತಿಮ ಮೊಹರು, ಲೋಕಸಭೆಯಲ್ಲಿ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿಯವರಿಂದ ಬೀಳಲಿದೆ. ಬಹುತೇಕ 14 ಸ್ಥಾನ ಖಚಿತವಾಗಿದೆ. ಉಳಿದ ಸ್ಥಾನ ಯಾರಿಗೆ ಎನ್ನುವುದರ ಕುರಿತು ತರ್ಕ ನಡೆಯತ್ತಿದೆ. ಎಲ್ಲಾ ಸುಗಮವಾಗಿ ನಡೆದರೆ ಇನ್ನೆರಡು ದಿನಗಳಲ್ಲಿ ಅಂತಿಮ ಪಟ್ಟಿ ದೆಹಲಿ ಎಐಸಿಸಿ ಕಚೇರಿಯಿಂದ ಹೊರಬರಲಿದೆ.

**ಹೈಕಮಾಂಡ್ ಎಂಟ್ರಿ:** ಸಂಪುಟದಲ್ಲಿ 60:40 ಸೂತ್ರ ಅನುಸರಿಸುತ್ತಿದ್ದು, ಹಿರಿಯರಿಗೂ ಅವಕಾಶದ ಜೊತೆಗೆ ಹೊಸಬರಿಗೂ ಎಂಟ್ರಿ ನೀಡಲು ಹೈಕಮಾಂಡ್ ನಾಯಕರು ಮುಂದಾಗಿದ್ದಾರೆ.ಸಂಪುಟ ವಿಸ್ತರಣೆಯಲ್ಲಿ ಶೇ 75 ರಷ್ಟು ಹೊಸಬರಿಗೆ ಅವಕಾಶ ಸಿಗಬೇಕು ಎಂಬುವುದು ಸಿಎಂ ಡಿಕೆ ಶಿವಕುಮಾರ್ ಲೆಕ್ಕಾಚಾರವಾಗಿದೆ.

**ಯಾರ ಬಣ ಮೇಲುಗೈ?:** ಹೊಸಬರಿಗೆ ಅವಕಾಶ ನೀಡಿದರೆ ಡಿಕೆ ಶಿವಕುಮಾರ್ ಬಣದ ಕೈಮೇಲಾಗಲಿದೆ. ಆದರೆ ಮಾಜಿ ಸಿಎಂ ಸಿದ್ದರಾಮಯ್ಯ ಬಣಕ್ಕೂ ಹೆಚ್ಚಿನ ಅವಕಾಶ ಸಿಗಬೇಕು ಎಂಬ ಲೆಕ್ಕಾಚಾರಗಳು ನಡೆಯುತ್ತಿದೆ. ಸಿದ್ದರಾಮಯ್ಯ ಪಟ್ಟನ್ನು ಅಷ್ಟೊಂದು ಸುಲಭವಾಗಿ ಕಡೆಗಣಿಸುವಂತಿಲ್ಲ. ಸಿದ್ದು ವಾದಕ್ಕೆ ಬಿಕೆ ಹರಿಪ್ರಸಾದ್ ಕೂಡಾ ಸಹಮತ ವ್ಯಕ್ತ ಪಡಿಸಿದ್ದಾರೆ ಎನ್ನಲಾಗಿದೆ.

### ಒಂದೇ ಹಂತಕ್ಕೆ 20..!

ಸಂಪುಟ ವಿಸ್ತರಣೆ ಒಂದೇ ಹಂತದಲ್ಲಿ ಪೂರ್ಣಗೊಳಿಸು ಲೆಕ್ಕಾಚಾರವಿದೆ. ವಿಧಾನಸಭೆ ಚುನಾವಣೆಗೆ ಇನ್ನು ಒಂದೂವರೆ ವರ್ಷ ಉಳಿದಿದೆ. ಹೀಗಾಗಿ ಪೂರ್ಣ ಪ್ರಮಾಣದಲ್ಲಿ ಸಂಪುಟ ವಿಸ್ತರಣೆ ನಡೆದರೆ ಅದರಿಂದ ಅನುಕೂಲ ಆಗಲಿದೆ. ಖಾತೆ ಹಂಚಿಕೆ ಮಾಡಿ ಎಲ್ಲ ಸಚಿವರೂ ಸಕ್ರಿಯವಾಗಿ ತೊಡಗಿಸಿಕೊಳ್ಳುವಂತೆ ನೋಡಿಕೊಳ್ಳುವುದು ಅಗತ್ಯವಾಗಿದೆ.



### ಎರಡ್ಮೂರು ಸ್ಥಾನ ಖಾಲಿ?

ಸದ್ಯಕ್ಕೆ 20 ಸ್ಥಾನ ಭರ್ತಿ ಮಾಡದೆ ಎರಡರಿಂದ ಮೂರು ಸ್ಥಾನಗಳನ್ನು ಖಾಲಿ ಇಡುವ ಬಗ್ಗೆ ವರಿಷ್ಠರ ತರ್ಕವಿದೆ. ಸಚಿವ ಸ್ಥಾನದ ಆಕಾಂಕ್ಷಿಗಳು ಗದ್ದಲ ಉಂಟು ಮಾಡಿದರೆ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಹಿನ್ನಡೆ ಉಂಟಾಗಬಹುದು. ಆದ್ದರಿಂದ ಸ್ಥಾನ ಭರ್ತಿ ಮಾಡದೆ ಎರಡದಿಂದ ಮೂರು ಸ್ಥಾನ ಖಾಲಿ ಇಟ್ಟುಕೊಂಡರೆ ಒಳಿತು ಎಂಬ ಅಭಿಪ್ರಾಯಗಳು ವ್ಯಕ್ತವಾಗಿವೆ.

### ರಾಜ್ಯದಲ್ಲಿ ಆಡಳಿತಕ್ಕೂ ಚುರುಕು

ಈ ಮೂಲಕ ರಾಜ್ಯದಲ್ಲಿ ಆಡಳಿತಕ್ಕೆ ಚುರುಕು ನೀಡುವ ಉದ್ದೇಶವೂ ಇದೆ. ಸಂಪುಟದಲ್ಲಿ ಕೆಲವು ಸ್ಥಾನಗಳನ್ನು ಉಳಿಸಿಕೊಂಡರೆ ಮತ್ತಷ್ಟು ಗೊಂದಲಕ್ಕೆ ಅದು ಎಡೆ ಮಾಡಿಕೊಡಲಿದೆ. ಪದೇ ಪದೇ ಆಕಾಂಕ್ಷಿಗಳು ಈ ಬಗ್ಗೆ ತಗಾದೆ ಎತ್ತಿದರೆ ವಿನಾ ಕಾರಣ ಗೊಂದಲಕ್ಕೆ ಅವಕಾಶ ನೀಡಿದಂತಾಗುತ್ತದೆ. ಹಾಗಾಗಿ ಏಕಕಾಲಕ್ಕೆ 20 ಸ್ಥಾನಗಳನ್ನು ಅಂತಿಮಗೊಳಿಸಲು ಪ್ರಯತ್ನ ನಡೆಸುತ್ತಿದೆ.

### ಡಿಸಿಎಂ ಹುದ್ದೆ ಲೆಕ್ಕಾಚಾರ

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ಕೆಸಿ ವೇಣುಗೋಪಾಲ್ ಹಾಗೂ ರಣದೀಪ್ ಸಿಂಗ್ ಸುರ್ಜೇವಾಲ ಅವರು ಅಂತಿಮ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ. ಈ ನಡುವೆ ಹೆಚ್ಚುವರಿ ಉಪಮುಖ್ಯಮಂತ್ರಿ ಸ್ಥಾನ ಸೃಷ್ಟಿಗೆ ವಿರೋಧಗಳು ವ್ಯಕ್ತವಾಗುತ್ತಿದೆ. ಸದ್ಯಕ್ಕೆ ಅಹಿಂದ ವರ್ಗಕ್ಕೆ ಎರಡು ಸ್ಥಾನ ನೀಡಬೇಕು ಎಂಬುವುದು ಲೆಕ್ಕಾಚಾರವಾಗಿದೆ.

## ಬೃಹತ್ ಉದ್ಯೋಗ ಮೇಳಕ್ಕೆ ಚಾಲನೆ



**ಕಲಬುರಗಿ:** ದೇಶದಲ್ಲಿ ನಿರುದ್ಯೋಗ ಪ್ರಮುಖ ಸಮಸ್ಯೆಯಾಗಿದ್ದು, ಉದ್ಯೋಗಾವಕಾಶಗಳಿದ್ದರೂ ಸೂಕ್ತ ಕೌಶಲ್ಯದ ಕೊರತೆಯಿಂದ ಯುವಜನರು ಹಿಂದುಳಿಯುತ್ತಿದ್ದಾರೆ. ಆದ್ದರಿಂದ ಲಭ್ಯವಿರುವ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ಸ್ವಂತ ಕಾಲಿನ ಮೇಲೆ ನಿಲ್ಲಲು ಯುವಕರು ಮುಂದಾಗಬೇಕು ಎಂದು ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಹೇಳಿದರು. ಬುಧವಾರ ಕಲಬುರಗಿಯ ಪಿ.ಡಿ.ಎ ಕಾಲೇಜಿನ ಆವರಣದಲ್ಲಿ ಕೌಶಲ್ಯಾಭಿವೃದ್ಧಿ ಇಲಾಖೆ ಹಾಗೂ ಎಕ್ಸಲರೇಟರ್ ಸಂಸ್ಥೆಯ ಸಹಯೋಗದೊಂದಿಗೆ ಆಯೋಜಿಸಿದ ಬೃಹತ್ ಉದ್ಯೋಗ ಮೇಳ ಉದ್ಘಾಟಿಸಿ ಮಾತನಾಡಿದ ಅವರು, ದೇಶಕ್ಕೆ ಹೋಲಿಸಿದಲ್ಲೆ ಕರ್ನಾಟಕದಲ್ಲಿ ಅಷ್ಟೊಂದು ಸಮಸ್ಯೆಯಿಲ್ಲ. ಹಾಗಂತ ನಿರುದ್ಯೋಗಿಗಲು ಇಲ್ಲಂತಲ್ಲ, ಬದಲಾಗಿ ಉದ್ಯೋಗ ಪಡೆಯುವ ಕೌಶಲ್ಯದ ಕೊರತೆ ಇದೆ. ಅದನ್ನು ನಮ್ಮ ಸರ್ಕಾರ ಸ್ಕಿಲ್ ಕನೆಕ್ಟ್ ಮೂಲಕ ಉದದ್ಯೋಗಾಧಾರಿತ ಕೌಶಲ್ಯ ನೀಡುತ್ತಿದ್ದೆ ಎಂದರು. ಕಾರ್ಯಕ್ರಮದಲ್ಲಿ ಶಾಸಕ ಅಲ್ಲಮಪ್ರಭು ಪಾಟೀಲ, ಜಿಲ್ಲಾ ಪಂಚಾಯತ್ ಸಿ.ಇ.ಓ ರಾಹುಲ ಸಂಕನೂರ್, ಹಿರಿಯ ಸಹಾಯಕ ಆಯುಕ್ತರಾದ ಸಾಹಿತ್ಯ ಅಲದಕಟ್ಟಿ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ನಾಗುಬಾಯಿ ಸೂರ್ಯವಂಶಿ, ಹೆಚ್.ಕೆ.ಇ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷ ರಾಜಾ ಭೀಮಳ್ಳಿ, ಕಾರ್ಯದರ್ಶಿ ಉದಯಕುಮಾರ, ಸೇರಿದಂತೆ ವಿವಿಧ ಭಾಗಗಳಿಂದ ಬಂದ ಸಾವಿರಾರು ಸಂಖ್ಯೆಯಲ್ಲಿ ಉದ್ಯೋಗಕಾಂಕ್ಷಿಗಳು ಭಾಗವಹಿಸಿದ್ದರು.

## ಪರೀಕ್ಷಾ ಅಕ್ರಮ ತಡೆ ವಿಧೇಯಕ: ಲೋಕಸಭೆಯಲ್ಲಿ ಧ್ವನಿ ಮತದ ಮೂಲಕ ಅಂಗೀಕಾರ

• ಮಲ್ಲಮ್ಮ ನುಡಿ ವಾರ್ತೆ ಹೊಸದಿಲ್ಲಿ

ಸಂಸತ್ತಿನ ಮುಂಗಾರು ಅಧಿವೇಶನದಲ್ಲಿ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಮತ್ತು ಆಡಳಿತಾರೂಢ ಬಿಜೆಪಿ ನಾಯಕರ ನಡುವೆ ನಡೆದ ತೀವ್ರ ವಾಗ್ವಾದ ಹಾಗೂ ಭಾರಿ ಗದ್ದಲದ ನಡುವೆಯೇ, ಪರೀಕ್ಷಾ ಅಕ್ರಮ ತಡೆ ವಿಧೇಯಕವನ್ನು (Public Examinations Amendment Bill, 2026) ಲೋಕಸಭೆಯಲ್ಲಿ ಧ್ವನಿ ಮತದ ಮೂಲಕ ಅಂಗೀಕರಿಸಲಾಗಿದೆ. ಪರೀಕ್ಷಾ ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಅಕ್ರಮಗಳನ್ನು ತಡೆಯುವ ನಿಟ್ಟಿನಲ್ಲಿ ಸರ್ಕಾರ ತಂದಿರುವ ಪರಿಷ್ಕೃತ ವಿಧೇಯಕದ ಮೇಲಿನ ಚರ್ಚೆಯ ವೇಳೆ, ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಗಂಭೀರ ಆರೋಪಗಳನ್ನು ಮಾಡಿದ್ದರಿಂದ ಲೋಕಸಭೆಯಲ್ಲಿ ತೀವ್ರ ಕೋಲಾಹಲ ಸೃಷ್ಟಿಯಾಯಿತು.ಹೀಗಾಗಿ ವಿಧೇಯಕ ಅಂಗೀಕಾರವಾದೊಡನೆ ಲೋಕಸಭೆ ಕಲಾಪವನ್ನು ಮುಂದೂಡಲಾಯಿತು. ಮುಂದಿನ ಕಲಾಪ ಜುಲೈ 30ರ ಗುರುವಾರ ಬೆಳಗ್ಗೆ 11 ಗಂಟೆಗೆ ನಡೆಯಲಿದೆ.

**ಸಂಸತ್ತಿನಲ್ಲಿ ಭಾರಿ ಗದ್ದಲ–ಆಡಳಿತ ಪಕ್ಷದ ಆಕ್ಷೇಪ:** ರಾಹುಲ್ ಗಾಂಧಿ ಅವರ ಈ ಆರೋಪಗಳಿಗೆ ಬಿಜೆಪಿ ಸಂಸದರು ಹಾಗೂ ಸಚಿವರು ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ರಾಹುಲ್ ಗಾಂಧಿ ತಮ್ಮ ಆರೋಪಕ್ಕೆ ಪುರಾವೆ ನೀಡಬೇಕು ಅಥವಾ ದೇಶದ ಕ್ಷಮೆ ಕೇಳಬೇಕು ಎಂದು ಪಟ್ಟು ಹಿಡಿದರು. ಪರಿಸ್ಥಿತಿ ಕೈಮೀರುತ್ತಿದ್ದಂತೆ ಸ್ಪೀಕರ್ ಓಂ ಬಿರ್ಲಾ ಅವರು ರಾಹುಲ್ ಗಾಂಧಿ ಅವರ ಕೆಲವು ವಿವಾದಾತ್ಮಕ ಹೇಳಿಕೆಗಳನ್ನು ಸಂಸತ್ತಿನ ನಡಾವಳಿಯಿಂದ ತೆರವುಗೊಳಿಸಿದರು.

**ವಿಧೇಯಕ ಅಂಗೀಕಾರ:** ವಿರೋಧ ಪಕ್ಷಗಳ ತೀವ್ರ ಗದ್ದಲ ಮತ್ತು ಸಭಾತ್ಯಾಗದ ನಡುವೆಯೂ, ಪರೀಕ್ಷಾ ಅಕ್ರಮ ಎಸಗುವವರ ವಿರುದ್ಧ ಕಠಿಣ ಶಿಕ್ಷೆ ಮತ್ತು ದಂಡ ವಿಧಿಸುವ ನಿಬಂಧನೆಗಳನ್ನು ಹೊಂದಿರುವ 'ಸಾರ್ವಜನಿಕ ಪರೀಕ್ಷೆಗಳ ತಿದ್ದುಪಡಿ ವಿಧೇಯಕ'ವನ್ನು ಲೋಕಸಭೆಯಲ್ಲಿ ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು. ಈ ವೇಳೆ ಪ್ರತಿಪಕ್ಷದ ಸದಸ್ಯರು ಗದ್ದಲ ಮುಂದುವರಿಸಿದ್ದರಿಂದ ಸಭಾಧ್ಯಕ್ಷರು ಕಲಾಪವನ್ನು ಗುರುವಾರಕ್ಕೆ ಮುಂದೂಡಿದರು.

## ರೈತರ 2 ಲಕ್ಷ ಸಾಲ ಮನ್ನಾ ಮಾಡಿ: ಖಂಡ್ರೆ

• ಪರಶುರಾಮ ಕರಣಂ, ಭಾಲ್ಕಿ

**ಸರ್ಕಾರದ ನಿರ್ಲಕ್ಷ್ಯದ ವಿರುದ್ಧ ಮಾಜಿ ಶಾಸಕ ವಾಗ್ದಾಳಿ**

ಮಳೆಯ ಅಭಾವದಿಂದ ತಾಲೂಕಿನ ಕೃಷಿ ಸಂಪೂರ್ಣವಾಗಿ ಸಂಕಷ್ಟಕ್ಕೆ ಸಿಲುಕಿದೆ. ರೈತರು ಬದುಕು–ಬವಣೆಯ ನಡುವೆ ಹೋರಾಟ ನಡೆಸುವ ಪರಿಸ್ಥಿತಿ ನಿರ್ಮಾಣವಾಗಿದೆ. ರಾಜ್ಯ ಸರ್ಕಾರ ಕೂಡಲೇ ತಾಲೂಕನ್ನು ಬರಪೀಡಿತ ತಾಲೂಕು ಎಂದು ಘೋಷಿಸಿ, ರೈತರ 2 ಲಕ್ಷದವರೆಗಿನ ಸಾಲ ಮನ್ನಾ ಮಾಡಬೇಕು ಹಾಗೂ ಪ್ರತಿ ಹೆಕ್ಟೇರಿಗೆ 50 ಸಾವಿರ ಪರಿಹಾರ ಘೋಷಿಸಿ ರೈತರ ನೆರವಿಗೆ ಬರಬೇಕು ಎಂದು ಮಾಜಿ ಶಾಸಕ ಪ್ರಕಾಶ ಖಂಡ್ರೆ ಒತ್ತಾಯಿಸಿದ್ದಾರೆ.

**ಬರ ಪರಿಸ್ಥಿತಿ ಪರಿಶೀಲನೆ:** ಭಾರತೀಯ ಜನತಾ ಪಕ್ಷದ ಮಂಡಲದ ವತಿಯಿಂದ ಬುಧವಾರ ಶಿವಣಿ ಹಾಗೂ ಲಖಣಗಾಂವ ಗ್ರಾಮಗಳಿಗೆ ಭೇಟಿ ನೀಡಿ ರೈತರ ಜಮೀನುಗಳಲ್ಲಿ ಬೆಳೆ ಹಾನಿ ಮತ್ತು ಬರ ಪರಿಸ್ಥಿತಿಯನ್ನು ಪರಿಶೀಲಿಸಿದ ಬಳಿಕ ಮಾತನಾಡಿದ್ದಾರೆ.

**ಭವಿಷ್ಯದ ಬಗ್ಗೆ ಆತಂಕ:** ಭಾಲ್ಕಿ ತಾಲೂಕಿನ ಸುಮಾರು 70 ಶೇಕಡಾ ಪ್ರದೇಶದಲ್ಲಿ ಇನ್ನೂ ಬಿತ್ತನೆಯೇ ಆಗಿಲ್ಲ. ಬಿತ್ತನೆ ಮಾಡಿದ ಬೆಳೆಗಳು ಸಹ ಮಳೆಯ ಕೊರತೆಯಿಂದ ಬೆಳವಣಿಗೆ ಕಾಣದೆ ಒಣಗುತ್ತಿವೆ. ರೈತರು ಆರ್ಥಿಕವಾಗಿ ಕುಸಿದು, ಭವಿಷ್ಯದ ಬಗ್ಗೆ ಆತಂಕದಲ್ಲಿದ್ದಾರೆ. ಇಂತಹ ಗಂಭೀರ ಪರಿಸ್ಥಿತಿಯಲ್ಲೂ ಸರ್ಕಾರ ರೈತರ ನೆರವಿಗೆ ಯಾವುದೇ ಪರಿಣಾಮಕಾರಿ ಕ್ರಮ ಕೈಗೊಂಡಿಲ್ಲ, ಎಂದು ಆರೋಪಿಸಿದ್ದಾರೆ. ಬಿಜೆಪಿ ತಾಲೂಕಿನ ಮಂಡಲ ಅಧ್ಯಕ್ಷ ವೀರಣ್ಣ ಕಾರಬಾರಿ, ಜಿಲ್ಲಾ ಉಪಾಧ್ಯಕ್ಷ ಸುಭಾಷ್ ಬಿರಾದಾರ, ಜಿಲ್ಲಾ ರೈತ ಮೋರ್ಚಾ ಉಪಾಧ್ಯಕ್ಷ ಜಗನ್ನಾಥ ಬಿರಾದಾರ, ಖಜಾಂಚಿ ಬಾಬುರಾವ್ ಧೂಪೆ, ಮಂಡಲ ಪ್ರಧಾನ ಕಾರ್ಯದರ್ಶಿ ರೇವಣಸಿದ್ದ ಜಾಡರ್, ಮಂಡಲ ರೈತ ಮೋರ್ಚಾ ಅಧ್ಯಕ್ಷ ಶಿವಕುಮಾರ್ ಅಣದುರೆ, ಪ್ರಧಾನ ಕಾರ್ಯದರ್ಶಿ ಜಗದೀಶ ಕನ್ನಳೆ, ಯುವ ಮೋರ್ಚಾ ಅಧ್ಯಕ್ಷ ಡಾ. ಜಗದೀಶ ಭುರೆ, ಮಹಾಶಕ್ತಿ ಕೇಂದ್ರದ ಅಧ್ಯಕ್ಷ ರಾಜಕುಮಾರ್ ಸೂರ್ಯವಂಶಿ, ಮುಖಂಡರಾದ ಬಿ.ಎನ್. ಸೂರ್ಯವಂಶಿ, ವಿಜಯಕುಮಾರ್ ಕೋಳಿ, ಕೈಲಾಸ ಪಾಟೀಲ, ವೀರಶೆಟ್ಟಿ ಪಾಟೀಲ, ಗೋವಿಂದ ಪಾಟೀಲ, ವೆಂಕಟರಾವ್ ಕಾರಬಾರಿ, ಉದಯ್ ಪಟ್ನೆ, ಸತೀಶ್ ಚಾಂದೀವಾಲೆ, ಸಿದ್ರಾಮ ಶೆಟ್ಕಾರ್, ರಾಜಕುಮಾರ್ ಸೋನಾಳೆ, ಬಲಭೀಮ್ ಬಾವಗೆ, ಉಮಕಾಂತ್ ಪಾಟೀಲ ಸೇರಿದಂತೆ ಬಿಜೆಪಿ ಮುಖಂಡರು ಹಾಗೂ ರೈತರು ಉಪಸ್ಥಿತರಿದ್ದರು.

ರೈತರು ಯಾವುದೇ ಕಾರಣಕ್ಕೂ ಆತ್ಮವಿಶ್ವಾಸ ಕಳೆದುಕೊಳ್ಳಬಾರದು. ನಿಮ್ಮ ಹಕ್ಕುಗಳಿಗಾಗಿ ನಾನು ಹಾಗೂ ಭಾರತೀಯ ಜನತಾ ಪಕ್ಷ ನಿರಂತರವಾಗಿ ನಿಮ್ಮೊಂದಿಗೆ ನಿಲ್ಲುತ್ತೇವೆ. ರೈತರಿಗೆ ನ್ಯಾಯ ದೊರಕಿಸುವವರೆಗೆ ನಮ್ಮ ಹೋರಾಟ ನಿಲ್ಲುವುದಿಲ್ಲ. ರೈತರು ಧೈರ್ಯದಿಂದಿರಿ, ನೆಮ್ಮದಿಯಾಗಿರಿ. –ಪ್ರಕಾಶ ಖಂಡ್ರೆ, ಮಾಜಿ ಶಾಸಕ



### ಪ್ರತಿ ಹೆಕ್ಟೇರಿಗೆ 50 ಸಾವಿರ ಪರಿಹಾರ ಕೊಡಿ

ಪಕ್ಕದ ಮಹಾರಾಷ್ಟ್ರದಲ್ಲಿ ಬಿಜೆಪಿ ಸರ್ಕಾರ ರೈತರ ?2 ಲಕ್ಷದವರೆಗಿನ ಸಾಲ ಮನ್ನಾ ಮಾಡಿರುವುದನ್ನು ಉದಾಹರಿಸಿದ ಅವರು, ಅದೇ ಮಾದರಿಯನ್ನು ಕರ್ನಾಟಕ ಸರ್ಕಾರವೂ ಅನುಸರಿಸಬೇಕು. ಜೊತೆಗೆ ಬೆಳೆ ನಷ್ಟ ಅನುಭವಿಸಿದ ರೈತರಿಗೆ ಪ್ರತಿ ಹೆಕ್ಟೇರಿಗೆ 50 ಸಾವಿರ ಪರಿಹಾರ ನೀಡಿ, ರೈತರ ಬದುಕಿಗೆ ಆಸರೆಯಾಗಬೇಕು ಎಂದು ಆಗ್ರಹಿಸಿದ್ದಾರೆ.

**ಸಂಸತ್ತಿನಲ್ಲಿ ವಿದ್ಯಾರ್ಥಿಗಳ ಮೇಲಿನ ಲಾಠಿಚಾರ್ಜ್ ಕುರಿತು ಮಾತನಾಡಲು ಬಿಜೆಪಿ ಅವಕಾಶ ನೀಡಲಿಲ್ಲ: ಮೈಕ್ ಸ್ವಿಚ್ ಆಫ್ ಆಗಿತ್ತು! ರಾಹುಲ್ ಆರೋಪ**

## ರೈತರ ನೆರವಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರ ಮುಂದಾಗಲಿ

ಭಾರತ ಕೃಷಿ ಪ್ರಧಾನ ದೇಶ. ದೇಶದ ಆರ್ಥಿಕತೆ, ಆಹಾರ ಭದ್ರತೆ ಮತ್ತು ಗ್ರಾಮೀಣ ಜೀವನದ ಆಧಾರವೇ ರೈತ. ಆದರೆ ಇಂದು ರೈತರು ಅನಿಶ್ಚಿತ ಮಳೆ, ಬರ ಪರಿಸ್ಥಿತಿ, ಬೆಳೆ ನಷ್ಟ, ಹೆಚ್ಚುತ್ತಿರುವ ಕೃಷಿ ವೆಚ್ಚ, ಮಾರುಕಟ್ಟೆಯಲ್ಲಿ ಸೂಕ್ತ ಬೆಲೆ ಸಿಗದಿರುವುದು ಹಾಗೂ ಸಾಲದ ಹೊರೆಗಳಿಂದ ತೀವ್ರ ಸಂಕಷ್ಟದಲ್ಲಿದ್ದಾರೆ.

### ಸಂಪಾದಕೀಯ

**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**



ಇಂತಹ ಸಂದರ್ಭದಲ್ಲಿ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ರಾಜಕೀಯ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ರೈತರ ನೆರವಿಗೆ ತಕ್ಷಣ ಮುಂದಾಗಬೇಕು. ಬೆಳೆ ಹಾನಿಗೊಳಗಾದ ರೈತರಿಗೆ ಸಮರ್ಪಕ ಪರಿಹಾರ, ಬಡ್ಡಿರಹಿತ ಸಾಲ, ಬೆಳೆ ವಿಮೆ ಪರಿಹಾರವನ್ನು ಶೀಘ್ರವಾಗಿ ವಿತರಿಸುವುದು, ನೀರಾವರಿ ಯೋಜನೆಗಳನ್ನು ವೇಗಗೊಳಿಸುವುದು ಹಾಗೂ ಕೃಷಿ ಉತ್ಪನ್ನಗಳಿಗೆ ನ್ಯಾಯಯುತ ಬೆಲೆ ಖಚಿತಪಡಿಸುವುದು ಅತ್ಯಗತ್ಯ.

ರೈತರಿಗೆ ಅಗತ್ಯವಾದ ಬೀಜ, ರಸಗೊಬ್ಬರ ಮತ್ತು ಕೃಷಿ ಉಪಕರಣಗಳನ್ನು ಸಬ್ಸಿಡಿ ದರದಲ್ಲಿ ಒದಗಿಸುವ ಜೊತೆಗೆ, ಕೃಷಿ ತಜ್ಞರ ಸಲಹೆಗಳನ್ನು ಗ್ರಾಮ ಮಟ್ಟದಲ್ಲೇ ತಲುಪಿಸುವ ವ್ಯವಸ್ಥೆಯೂ ಬಲಪಡಿಸಬೇಕು. ಕೃಷಿ ಕ್ಷೇತ್ರವನ್ನು ಉಳಿಸುವುದು ಎಂದರೆ ದೇಶದ ಭವಿಷ್ಯವನ್ನು ಉಳಿಸುವಂತೆಯೇ ಆಗಿದೆ.

"ಉತ್ತಮ ರೈತ–ಸಮೃದ್ಧ ದೇಶ" ಎಂಬ ಧ್ಯೇಯದೊಂದಿಗೆ ಸರ್ಕಾರಗಳು ರೈತರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು. ರೈತರ ಕಣ್ಣೀರನ್ನು ಒರೆಸಿ ಅವರ ಬದುಕಿಗೆ ಹೊಸ ಆಶಾಕಿರಣ ನೀಡುವುದು ಪ್ರತಿಯೊಂದು ಸರ್ಕಾರದ ಆದ್ಯ ಕರ್ತವ್ಯವಾಗಿದೆ.

## ಗುರು ಸಿದ್ದೇಶ್ವರ ಚಿಕ್ಕಮಠದಲ್ಲಿ ಗುರುಪೂರ್ಣಿಮೆ ಆಚರಣೆ




**ಬೀದರ್:** ಹಳ್ಳಿಖೇಡ ಗುರು ಸಿದ್ದೇಶ್ವರ ಚಿಕ್ಕಮಠದಲ್ಲಿ ಬುದುವಾರ ಸಾವಿರಾರು ಭಕ್ತರು ಭಕ್ತಿ ಪೂರ್ವಕವಾಗಿ ಹಮ್ಮಿಕೊಂಡಿದ್ದ ಗುರು ಸಿದ್ದೇಶ್ವರ ಪೂಜೆಯನ್ನು ಮಠದ ಪಂಡಿತಾರಾಧ್ಯ ಶಿವಾಚಾರ್ಯ ಮತ್ತು ಬಾವಗಿ ಭದ್ರೇಶ್ವರ ಮಠದ ಶಿವುಕುಮಾರ ಸ್ವಾಮೀಜಿ ಸಾನ್ನಿಧ್ಯದಲ್ಲಿ ನೆರವೇರಿತು. ಈ ವೇಳೆ ಸೇರಿದ ಅಪಾರ ಭಕ್ತರನ್ನು ಉದ್ದೇಶಿಸಿ ಮಾತನಾಡಿದ ಪಂಡಿತರಧ್ಯ ಶಿವಾಚಾರ್ಯ ಶ್ರೀಗಳು, ಗುರುವಿನ ಕರಣೆಯೊಂದೇ ಪ್ರತಿಯೊಬ್ಬರು ಬದುಕಿನ ದಡ ಸೇರಲು ಕಾರಣವಾಗುತ್ತದೆ.

ಗುರು ಸಿದ್ದೇಶ್ವರ ಮಹಾಗುರುವನ್ನು ನಂಬಿ ನಡೆದುಕೊಂಡವರು ಜೀವನದಲ್ಲಿ ನೆಲಕಚ್ಚಿದ ಉದಾಹರಣೆಯೇ ಇಲ್ಲ. ಆದರೆ, ಬೇಡುವ ಭಕ್ತಿ, ಭಾವ ಶುದ್ಧವಾಗಿರಬೇಕು. ಅಂದಾಗ ಅದು ಫಲ ನೀಡುತ್ತದೆ ಎಂದರು. ಈ ಸಂದರ್ಭದಲ್ಲಿ ಭದ್ರೇಶ್ವರ ಮಠದ ಶಿವಕುಮಾರ್ ಸ್ವಾಮಿ ಬಸವರಾಜು ಪೆದ್ದಪೂರಿ ವೀರಯ್ಯಸ್ವಾಮಿ ದತ್ತುಮುಡುವಿ ಬಸಯ್ಯಸ್ವಾಮಿ ಓಂಕಾರ್ ಸ್ವಾಮೀ ಶ್ರೀಶೈಲ್ ಸ್ವಾಮಿ ಶಾಂತಕುಮಾರ್ ಶಾಲೆ ನಾಗು ಚಂದನಕೇರಿ ಆನಂದ್ ಹಳ್ಳಿಖೇಡ ಗುರು ಸಿದ್ದೇಶ್ವರ ವಿದ್ಯಾ ಸಂಸ್ಥೆಯ ಮುಖ್ಯ ಶಿಕ್ಷಕರು ಶಾಲೆಯ ಮಕ್ಕಳು ಅಪಾರಭಕ್ತರು ಭಾಗವಹಿಸಿದರು.

## ಶ್ರದ್ಧಾ ಭಕ್ತಿಯಿಂದ ಗುರು ಪೂರ್ಣಿಮೆ



**ಹಗರಿಬೊಮ್ಮನಹಳ್ಳಿ:** ರಾಷ್ಟ್ರೋತ್ಥಾನ ವಿದ್ಯಾ ಕೇಂದ್ರ ಸಿಬಿಎಸ್‌ಸಿ ಶಾಲೆಯಲ್ಲಿ ದಿನಾಂಕ ಇಂದು ಗುರುಪೂರ್ಣಿಮೆಯನ್ನು ಅತ್ಯಂತ ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು. ಮಹರ್ಷಿ ವೇದವ್ಯಾಸರ ಭಾವಚಿತ್ರಕ್ಕೆ ಪ್ರಧಾನಾಚಾರ್ಯರಾದ ರಂಗನಾಥ ಗುರೂಜಿಯವರು ಪುಷ್ಪಾರ್ಚನೆ ಸಲ್ಲಿಸುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಎರಡನೇ ಸ್ತರದ ವಿದ್ಯಾರ್ಥಿನಿಯರು ಗುರುವಿನ ಮಹತ್ವದ ಕುರಿತು ಸುಶ್ರಾವ್ಯವಾಗಿ ಹಾಡಿದರು.

ಕಾರ್ಯಕ್ರಮದ ಮುಖ್ಯ ವಕ್ತಾರರಾದ ಶಾಲೆಯ ಕನ್ನಡ ಶಿಕ್ಷಕಿಂ–ಯಾದ ಕೊಟ್ಟೂರೇಶ್ವರಿ ಅವರು ಮಾತನಾಡಿ "ಹಿಂದೂ, ಬೌದ್ಧ ಮತ್ತು ಜೈನ ಸಂಪ್ರದಾಯಗಳಲ್ಲಿ ಗುರು ಪೂರ್ಣಿಮೆ ಅತ್ಯಂತ ಪವಿತ್ರವಾದ ಮತ್ತು ಗೌರವಾನ್ವಿತವಾದ ಹಬ್ಬವಾಗಿದೆ. 'ಗು' ಎಂದರೆ ಅಜ್ಞಾನ (ಕತ್ತಲೆ), 'ರು' ಎಂದರೆ ಅದನ್ನು ನಿವಾರಿಸುವವ (ಬೆಳಕು). ಅಜ್ಞಾನವೆಂಬ ಕತ್ತಲೆಯನ್ನು ನೀಗಿ ಜ್ಞಾನವೆಂಬ ಬೆಳಕಿನತ್ತ ನಡೆಸುವ ಮಹಾನ್ ಮಾರ್ಗದರ್ಶಕರಿಗೆ ಕೃತಜ್ಞತೆ ಸಲ್ಲಿಸುವುದೇ ಈ ದಿನದ ವಿಶೇಷತೆಯಾಗಿದೆ ಎಂದು ಹೇಳಿದರು.

ಗುರು ಪೂರ್ಣಿಮೆಯ ಮಹತ್ವ ತಿಳಿಸುತ್ತಾ "ಹಿಂದೂ ಸಂಸ್ಕೃತಿಯಲ್ಲಿ ಈ ದಿನವನ್ನು ಮಹರ್ಷಿ ವೇದವ್ಯಾಸರ ಜನ್ಮದಿನವನ್ನಾಗಿ ಆಚರಿಸಲಾಗುತ್ತದೆ. ನಾಲ್ಕು ವೇದಗಳನ್ನು ವಿಂಗಡಿಸಿ, ಮಹಾಭಾರತ, ಅಷ್ಟಾದಶ ಪುರಾಣಗಳು ಹಾಗೂ ಬ್ರಹ್ಮಸೂತ್ರಗಳನ್ನು ಜಗತ್ತಿಗೆ ನೀಡಿದ ಜ್ಞಾನನಿಧಿ ವೇದವ್ಯಾಸರು. ಆದ್ದರಿಂದ ಇವರನ್ನು 'ಜಗದ್ಗುರು' ಎಂದು ಪರಿಗಣಿಸಲಾಗುತ್ತದೆ. ಅಷ್ಟೇ ಅಲ್ಲದೆ ನಮ್ಮ ಜೀವನಕ್ಕೆ ನೈತಿಕ, ಬೌದ್ಧಿಕ ಮತ್ತು ಆಧ್ಯಾತ್ಮಿಕ ಅಡಿಪಾಯ ಹಾಕಿಕೊಟ್ಟ ಶಿಕ್ಷಕರು, ತಾಯಿ–ತಂದೆ ಹಾಗೂ ಆಧ್ಯಾತ್ಮಿಕ ಗುರುಗಳನ್ನು ಸ್ಮರಿಸಿ, ಅವರಿಗೆ ಶ್ರದ್ಧಾಪೂರ್ವಕ ಪ್ರಣಾಮಗಳನ್ನು ಸಲ್ಲಿಸಲು ಈ ದಿನ ಶ್ರೇಷ್ಠವಾದುದು" ಎಂದರು.

ಕಾರ್ಯಕ್ರಮವನ್ನು ಶಾಲೆಯ ಸಮಾಜ ವಿಜ್ಞಾನ ಶಿಕ್ಷಕಿಯಾದ ಕು.ಐಶ್ವರ್ಯರವರು ನಿರೂಪಿಸಿದರು. ಈ ಸಂದರ್ಭದಲ್ಲಿ ಶಾಲೆಯ ಪ್ರಧಾನಾಚಾರ್ಯರು, ಎಲ್ಲ ಶಿಕ್ಷಕ ವೃಂದದವರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮ ಶಾಂತಿಮಂತ್ರದೊಂದಿಗೆ ಸಂಪನ್ನವಾಯಿತು.

# ಗುರುಪೂರ್ಣಿಮೆ ಸಂಭ್ರಮ–ದರ್ಶನಕ್ಕೆ ಭಕ್ತರ ದಂಡು

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ಇಲ್ಲಿಯ ಹಿರೇಮಠ ಸಂಸ್ಥಾನದಲ್ಲಿ ಗುರುಪೂರ್ಣಿಮೆ ಸಂಭ್ರಮ ಮನೆ ಮಾಡಿತು. ಬುಧವಾರ ದಿನವೀಡಿ ಶ್ರೀಮಠಕ್ಕೆ ಭಕ್ತರ ದಂಡು ಹರಿದು ಬಂತು. ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರ ದಿವ್ಯ ಸಾನ್ನಿಧ್ಯದಲ್ಲಿ ಧಾರ್ಮಿಕ ಕಾರ್ಯಕ್ರಮಗಳು ಸಂಭ್ರಮದಿಂದ ನೆರವೇರಿದವು. ಘಟ್‌ಸ್ಥಲ ಧ್ವಜರೋಹಣ, ಪರಮ ಪೂಜ್ಯರ ಪಾದೋದಕ ಸೇರಿ ಇಷ್ಟಲಿಂಗ ಪೂಜೆ ಅಸಂಖ್ಯಾತ ಭಕ್ತರ ಮಧ್ಯೆ ಶ್ರದ್ಧೆ, ಭಕ್ತಿಯಿಂದ ಜರುಗಿದವು. ಕರ್ನಾಟಕ ಅಲ್ಲದೇ ಮಹಾರಾಷ್ಟ್ರ, ತೆಲಂಗಾಣ ರಾಜ್ಯದ ವಿವಿಧ ಭಾಗಗಳಿಂದ ಸಾವಿರಾರೂ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ಪರಮ ಪೂಜ್ಯರಿಗೆ ಗೌರವ ಸಲ್ಲಿಸಿ, ಆಶೀರ್ವಾದ ಪಡೆದು ಕೊಂಡರು.

ಗುರುಪೂರ್ಣಿಮೆಯ ದಿವ್ಯ ಸಾನ್ನಿಧ್ಯ ವಹಿಸಿದ್ದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ನಾವೆಲ್ಲರೂ ಬಸವಗುರುವಿನ ಮಾರ್ಗದಲ್ಲಿ ಮುಂದೆ ಸಾಗಬೇಕು. ಪ್ರತಿನಿತ್ಯ ಲಿಂಗಪೂಜೆ, ವಚನಪಠಣ, ಅನುಭಾವ ಮತ್ತು ಸತ್ಯಶುದ್ಧ ಕಾಯಕ–ದಾಸೋಹ ಈ ಮೌಲ್ಯಗಳನ್ನು ಅಳವಡಿಸಿಕೊಂಡರೆ ನಮ್ಮ ಜೀವನ ಸಂತೃಪ್ತ ಜೀವನವಾಗುತ್ತದೆ ಎಂದು ನುಡಿದರು.





ಗುರುಕೃಪೆಯಿಂದ ಅಸಾಧ್ಯವೂ ಸಾಧ್ಯವಾಗುತ್ತದೆ. ಗುರು ನಮ್ಮನ್ನು ಅಜ್ಞಾನದ ಕತ್ತಲೆಯಿಂದ ಜ್ಞಾನದ ಬೆಳಕಿನ ಕಡೆ ಕರೆದುಕೊಂಡು ಹೋಗುತ್ತಾನೆ. ಅದಕ್ಕಾಗಿ ಶರಣರು, ಸಂತರು, ಗುರುವಿನ ಮಹಿಮೆ ಕೊಂಡಾಡಿದ್ದಾರೆ. ನಾನು ಒಬ್ಬ ಸಾಮಾನ್ಯ ವಿದ್ಯಾರ್ಥಿಯಾಗಿ ಶ್ರೀಮಠಕ್ಕೆ ಆಗಮಿಸಿದೆ, ಆದರೆ ಪರಮಪೂಜ್ಯ ಡಾ.ಬಸವಲಿಂಗ ಪಟ್ಟದ್ದೇವರ ದಿವ್ಯ ಕರುಣೆಯಿಂದ ನನ್ನ ಜೀವನ ಬದಲಾವಣೆಯಾಯಿತು. ಇಂದು ನಾನು ಈ ಸ್ಥಾನಕ್ಕೆ ಬರಬೇಕಾದರೆ ಅವೆಲ್ಲವೂ ಪರಮಪೂಜ್ಯ ನನ್ನ ಗುರುದೇವರಿಗೆ ಸಲ್ಲುತ್ತದೆ. ಗುರು ನಮ್ಮಲ್ಲಿದ್ದ ಅವಗುಣಗಳು ಹೋಗಲಾಡಿಸಿ, ಸದ್ಗುಣಗಳನ್ನು ಬಿತ್ತುತ್ತಾನೆ. ಅರಲುಗೊಂಡ ಕೆರೆಗೆ ತೊರೆಬಂದು ಹಾಯ್ದಂತಾಯಿತ್ತು, ಬರಲುಗೊಂಡ ಸಸಿಗೆ ಮಳೆ ಸುರಿದಂತಾಯಿತ್ತು ನೋಡಾ ಇಂದೆನೆಗೆ. ಇಹದ ಸುಖ, ಪರದ ಗತಿ ನಡೆದು ಬಂದಂತಾಯಿತ್ತು ನೋಡಾ ಎನಗೆ. ಚೆನ್ನಮಲ್ಲಿಕಾರ್ಜುನಯ್ಯಾ ಗುರುಪಾದವ ಕಂಡು ಧನ್ಯಳಾದೆ ನೋಡಾ ಎಂದು ಹೇಳುವ ಮೂಲಕ ಅಕ್ಕಮಹಾದೇವಿತಾಯಿಯ ಗುರುಮಹಿಮೆ ವರ್ಣಿಸಿದರು.

ಸಮ್ಮುಖ ವಹಿಸಿದ್ದ ಬಸವಲಿಂಗ ಸ್ವಾಮೀಜಿ ಮಾತನಾಡಿ, ಭಾಲ್ಕಿಯ ಶ್ರೀಗಳು ಮಾಡುತ್ತಿರುವ ಸಮಾಜೋದ್ಧಾರ್ಮಿಕ ಸೇವಾ ಕಾರ್ಯಗಳು ನಿಜಕ್ಕೂ ಬಸವಾದಿ ಶರಣರ ತತ್ವಾಚರಣೆಗಳೇ ಆಗಿವೆ. ಈ ಭಾಗದ ಸಮಗ್ರ ಅಭಿವೃದ್ಧಿಗೆ ಪೂಜ್ಯರ ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಅವರ ಸಂಕಲ್ಪಗಳನ್ನು ಸಾಕಾರಗೊಳಿಸಲು ಪರಮ ಪೂಜ್ಯ ಗುರುಬಸವ ಪಟ್ಟದ್ದೇವರು ಅವಿಶ್ರಾಂತವಾಗಿ ದುಡಿಯುತ್ತಿದ್ದಾರೆ. ಇಂತಹ ಪೂಜ್ಯರು ದೊರೆತಿರುವುದು ಶ್ರೀಮಠದ ಸದ್ಭಕ್ತರ ಭಾಗ್ಯವಾಗಿದೆ ಎಂದು ನುಡಿದರು.

ಮಹಾರಾಷ್ಟ್ರ ಸದ್ಭಕ್ತರಾದ ಕಾಳೆ ಪರಿವಾರದ ವತಿಯಿಂದ ಧರ್ಮಗುರು ಬಸವಣ್ಣನವರ ಪೂಜೆ ನಡೆಯಿತು. ಹಿರಿಯ ಸಾಹಿತಿ ರಾಜು ಜುಬರೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಹಾರಾಷ್ಟ್ರದ ಶಿವಾನಂದ ಹೈಬತಪುರೆ ಅವರು ಅನುಭಾವ ನಡೆಸಿಕೊಟ್ಟರು. ನೂರಾರು ಜನ ಸದ್ಭಕ್ತರು ಇಷ್ಟಲಿಂಗ ಪಡೆದುಕೊಂಡರು. ಆಗಮಿಸಿದ ಭಕ್ತರಿಗೆ ಶ್ರೀಮಠದಲ್ಲಿ ಪ್ರಸಾದ ವ್ಯವಸ್ಥೆ ಕೈಗೊಳ್ಳಲಾಗಿತ್ತು.

# ಹಡಪದ ಅಪ್ಪಣ್ಣ ಜಯಂತಿ: ರೋಗಿಗಳಿಗೆ ಬ್ರೆಡ್–ಹಣ್ಣು ವಿತರಣೆ

• **ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ**

ಸಮಾಜ ಸೇವೆಯ ಮೂಲಕವೇ ಮಹನೀಯರ ಆದರ್ಶಗಳನ್ನು ಜೀವಂತವಾಗಿರಿಸಬಹುದು ಎಂಬ ಸಂದೇಶದೊಂದಿಗೆ 892ನೇ ಶ್ರೀ ಹಡಪದ ಅಪ್ಪಣ್ಣ ಜಯಂತಿಯನ್ನು ಗಂಗಾವತಿ ಶ್ರೀ ಹಡಪದ ಅಪ್ಪಣ್ಣ ಸಮಾಜದ ವತಿಯಿಂದ ಅರ್ಥಪೂರ್ಣವಾಗಿ ಆಚರಿಸಲಾಯಿತು. ಜಯಂತಿಯ ಅಂಗವಾಗಿ ಗಂಗಾವತಿ ಉಪವಿಭಾಗ ಸರ್ಕಾರಿ ಆಸ್ಪತ್ರೆಯಲ್ಲಿನ ಒಳರೋಗಿಗಳಿಗೆ ಬ್ರೆಡ್, ಬಾಳೆಹಣ್ಣು ಸೇರಿದಂತೆ ವಿವಿಧ ಹಣ್ಣುಗಳನ್ನು ವಿತರಿಸಿ ಮಾನವೀಯ ಸೇವೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಸಮಾಜದ ಗೌರವಾಧ್ಯಕ್ಷ ಹನುಮಂತಪ್ಪ ಸರಿಗಮ ಮಾತನಾಡಿ, ಶ್ರೀ ಹಡಪದ ಅಪ್ಪಣ್ಣ ಅವರು ಸಮಾನತೆ, ಶ್ರಮದ ಗೌರವ, ದಯೆ ಹಾಗೂ ಮಾನವೀಯ ಮೌಲ್ಯಗಳನ್ನು ಸಾರಿದ ಮಹಾನ್ ಸಂತರು. ಅವರ ತತ್ವ–ಆದರ್ಶಗಳು ಇಂದಿನ ಸಮಾಜಕ್ಕೂ ದಾರಿದೀಪವಾಗಿದ್ದು, ಯುವಜನತೆ ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಸಮಾಜದ ಏಳಿಗೆಗಾಗಿ ಎಲ್ಲರೂ ಜಾತಿ–ಮತ ಭೇದ ಮರೆತು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.




ಮುಖ್ಯ ಅತಿಥಿಯಾಗಿ ಮಾತನಾಡಿದ ಎಚ್. ಮಂಜುನಾಥ (ಕನಕಗಿರಿ), ಶ್ರೀ ಹಡಪದ ಅಪ್ಪಣ್ಣ ಅವರ ಸಂದೇಶಗಳು ಇಂದಿಗೂ ಪ್ರಸ್ತುತವಾಗಿವೆ. ಬಡವರು, ಶ್ರಮಿಕರು ಹಾಗೂ ನಿರ್ಗತಿಕರ ಸೇವೆ ಮಾಡುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವವಾಗಿದೆ. ಜಯಂತಿಗಳನ್ನು ಕೇವಲ ಆಚರಣೆಗೆ ಸೀಮಿತಗೊಳಿಸದೆ, ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಆಚರಿಸಿದಾಗ ಮಾನವೀಯ ಮೌಲ್ಯಗಳು ಮತ್ತಷ್ಟು ಬಲಗೊಳ್ಳುತ್ತವೆ ಎಂದು ತಿಳಿಸಿದರು.

ಆಸ್ಪತ್ರೆಯ ರೋಗಿಗಳಿಗೆ ಆಹಾರ ಮತ್ತು ಹಣ್ಣುಗಳನ್ನು ವಿತರಿಸಿದ ಸಮಾಜದ ಪದಾಧಿಕಾರಿಗಳು ಶೀಘ್ರ ಗುಣಮುಖರಾಗುವಂತೆ ಹಾರೈಸಿದರು. ಈ ಸೇವಾ ಕಾರ್ಯಕ್ರಮವು ಆಸ್ಪತ್ರೆಯಲ್ಲಿದ್ದ ರೋಗಿಗಳು ಹಾಗೂ ಅವರ ಕುಟುಂಬಸ್ಥರಿಂದ ಮೆಚ್ಚುಗೆಗೆ ಪಾತ್ರವಾಯಿತು. ಕಾರ್ಯಕ್ರಮದಲ್ಲಿ ಗಂಗಾವತಿ ತಾಲೂಕು ಅಧ್ಯಕ್ಷ ನಿರುಪಾದಿ ಕೆಸರಟ್ಟಿ, ಶಿವಣ್ಣ, ಕಾರ್ಯದರ್ಶಿ ನೀಲಕಮಲ್, ಉಪಾಧ್ಯಕ್ಷ ಭೀಮನಗೌಡ, ಯುವ ಘಟಕದ ಅಧ್ಯಕ್ಷ ವಿಕ್ರಂ ಪಾಟೀಲ್, ಶರಣಬಸವ, ಶರಣು ಡಿಸ್ಕೋ (ಕನಕಗಿರಿ), ಕಲ್ಲೇಶ್, ಕಳಕಪ್ಪ, ಕೊಟ್ರೇಶ್, ರುದ್ರೇಶ್, ಶರಣ ಬಸವನಗೌಡ, ಚಂದ್ರಶೇಖರ್ (ಕನಕಗಿರಿ), ಎಚ್. ಸುರೇಶ್ (ಕನಕಗಿರಿ) ಸೇರಿದಂತೆ ಸಮಾಜದ ಮುಖಂಡರು, ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

# ಗುರುಜ್ಞಾನವೇ ಅಜ್ಞಾನದ ಕತ್ತಲೆಯನ್ನು ದೂರ ಮಾಡುವ ದಿವ್ಯಶಕ್ತಿ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ಮನುಷ್ಯನೊಳಗಿನ ಅಜ್ಞಾನ ಮತ್ತು ಅಂಧಕಾರವನ್ನು ದೂರ ಮಾಡಿ ಜ್ಞಾನದ ಬೆಳಕಿನೆಡೆಗೆ ಕೊಂಡೊಯ್ಯುವ ಶಕ್ತಿ ಸದ್ಗುರುಗಳಿಗಿದೆ. ಗುರುಜ್ಞಾನವಿಲ್ಲದೆ ಆತ್ಮೋನ್ನತಿ ಸಾಧ್ಯವಿಲ್ಲ ಎಂದು ಹಲಬರ್ಗ ಗ್ರಾಮದ ಶ್ರೀ ರಾಚೋಟೇಶ್ವರ ಸಂಸ್ಥಾನ ಮಠದ ಡಾ. ಹಾವಗಿಲಿಂಗೇಶ್ವರ ಶಿವಾಚಾರ್ಯರು ಹೇಳಿದರು.

ತಾಲ್ಲೂಕಿನ ಹಲಬರ್ಗ ಗ್ರಾಮದ ಶ್ರೀ ರಾಚೋಟೇಶ್ವರ ಸಂಸ್ಥಾನ ಮಠದಲ್ಲಿ ಗುರುಪೂರ್ಣಿಮೆಯ ಅಂಗವಾಗಿ ಆಯೋಜಿಸಿದ್ದ ಗುರು ವಂದನಾ ಕಾರ್ಯಕ್ರಮ ಹಾಗೂ ನಮ್ಮ ಕರ್ನಾಟಕ ಸೇನೆ ವತಿಯಿಂದ ನಡೆದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.



"ಮನೆಯ ಕತ್ತಲೆಯನ್ನು ದೂರ ಮಾಡಲು ದೀಪ ಹಚ್ಚುತ್ತೇವೆ. ಜಗತ್ತಿನ ಅಂಧಕಾರವನ್ನು ಹೋಗಲಾಡಿಸಲು ಸೂರ್ಯೋದಯವಾಗುತ್ತದೆ. ಅದೇ ರೀತಿ ನಮ್ಮೊಳಗಿನ ಅಜ್ಞಾನವನ್ನು ನಿವಾರಿಸಲು ಸದ್ಗುರುಗಳ ಜ್ಞಾನ ಅತ್ಯಗತ್ಯ. ಶ್ರದ್ಧೆ, ಭಕ್ತಿ ಮತ್ತು ಸೇವಾಭಾವದಿಂದ ಗುರುಗಳ ಮಾರ್ಗದರ್ಶನವನ್ನು ಅನುಸರಿಸಿದಾಗ ಮಾತ್ರ ಜೀವನದಲ್ಲಿ ನಿಜವಾದ ಜ್ಞಾನೋದಯ ಸಾಧ್ಯವಾಗುತ್ತದೆ. ಗುರು ಎಂದರೆ ವ್ಯಕ್ತಿಯಲ್ಲ, ದಿವ್ಯಶಕ್ತಿ," ಎಂದು ಅವರು ತಿಳಿಸಿದರು.

ಧನ್ನೂರ (ಎಚ್) ಪೊಲೀಸ್ ಠಾಣೆಯ ಪಿಎಸ್‌ಐ ರಾಜಕುಮಾರ ಜಟಗೊಂಡ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಶ್ರೀಮಠದ ಭಕ್ತರಾದ ಗುಂಡಯ್ಯ ಸ್ವಾಮಿ ಅವರ ನೇತೃತ್ವದಲ್ಲಿ ಪಾದಪೂಜೆ ಹಾಗೂ ಪ್ರಸಾದ ಸೇವೆ ನಡೆಯಿತು.

ನಮ್ಮ ಕರ್ನಾಟಕ ಸೇನೆಯ ಜಿಲ್ಲಾ ಅಧ್ಯಕ್ಷ ಗಣೇಶ ಪಾಟೀಲ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಯುವ ಘಟಕದ ಅಧ್ಯಕ್ಷ ಸುದೀಪ್, ಗಿರೀಶ್ ಬಿರಾದಾರ, ಬಸವರಾಜ ಕಾರಬಾರಿ, ಅನೀಲ ರಾಜಗೀರ, ಕಾಶೀನಾಥ ಚಳಕಾಪೂರೆ, ಸಂಗಮೇಶ್ ಮಾಗರೆ, ಸಂಗಮೇಶ್ ಬಿರಾದಾರ, ಸಂತೋಷ ಪಾಟೀಲ, ಅನೀಲ ರೆಡ್ಡಿ, ರಾಜು ಕುಂಬಾರ, ಮಹಾರುದ್ರ, ವಿಜಯಕುಮಾರ ಪಾಂಚಾಳ, ರಮೇಶ್ ಸುತಾರ, ಡಾ. ಪ್ರವೀಣ್, ಡಾ. ಸುಶೀಲಕುಮಾರ, ಮಹೇಶ್ ಮಠಪತಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಶೋಕ್ ರಾಜೋಳೆ, ಸಂತೋಷ ಬಿಜಿಪಾಟೀಲ, ದಿಲೀಪ್ ಶೆರಿಕಾರ್, ಇಂದ್ರಜಿತ್ ಪಾಂಚಾಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮೂರು ತಿಂಗಳಲ್ಲಿ 120 ಹೊಸ ಬಸ್ ಸೇರ್ಪಡೆ..!

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಕಲ್ಯಾಣ ಕರ್ನಾಟಕ ಭಾಗದಲ್ಲಿ ಉತ್ತಮ ಸಾರಿಗೆ ಸಂಪರ್ಕ ಕಲ್ಪಿಸಲು ಸಂಸ್ಥೆಗೆ ಇನ್ನು 750 ಬಸ್ ಅವಶ್ಯಕತೆ ಇದ್ದು, ಇದನ್ನು ನೀಗಿಸಲು ಪ್ರಸ್ತುತ ಕೆ.ಕೆ.ಅರ್.ಡಿ.ಬಿ. ಮಂಡಳಿಯ 45 ಕೋಟಿ ರೂ. ಅನುದಾನದಲ್ಲಿ 120 ಬಸ್ ಖರೀದಿಸಲಾಗುತ್ತಿದೆ ಎಂದು ಕೆ.ಕೆ.ಆರ್.ಟಿ.ಸಿ. ಅಧ್ಯಕ್ಷ ಅರುಣಕುಮಾರ ಪಾಟೀಲ ಹೇಳಿದರು.

ಬುಧವಾರ ಕಲಬುರಗಿ ಕೇಂದ್ರ ಬಸ್ ನಿಲ್ದಾಣದಲ್ಲಿ ಕಲಬುರಗಿ–ಮೈಸೂರು ನಾನ್ ಎಸಿ ಸ್ಲೀಪರ್ ಹಾಗೂ ಕಲಬುರಗಿ–ಶಿವಮೊಗ್ಗ ಎಸಿ ಸ್ಲೀಪರ್ ಬಸ್ ಕಾರ್ಯಾಚರಣೆಗೆ ಚಾಲನೆ ನೀಡಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 120 ಬಸ್ ಗಳ ಖರೀದಿಗೆ ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿದೆ. ಮುಂದಿನ 3 ತಿಂಗಳಲ್ಲಿ ಈ ಬಸ್ ಸಂಸ್ಥೆಗೆ ಸೇರ್ಪಡೆಯಾಗಿ ಸಾರಿಗೆ ಸಂಪರ್ಕಕ್ಕೆ ಬಲ ನೀಡಲಿದೆ. ಸಂಸ್ಥೆಗೆ ಕೊರತೆ ಇರುವ ಬಸ್ ಗಳನ್ನು ಪೂರೈಸಲು ಸಿ.ಎಂ. ಅವರು ಸಹ ಅಭಯ ನೀಡಿದ್ದು, ಮುಂದಿನ ದಿನದಲ್ಲಿ ಪ್ರಯಾಣಿಕರಿಗೆ ಮತ್ತಷ್ಟು ಗುಣಮಟ್ಟದ ಸೇವೆ ನೀಡಲು ಸಾಧ್ಯವಾಗಲಿದೆ ಎಂದರು.

ಇಂದಿಲ್ಲಿ ಸಂಸ್ಥೆ ಅನುದಾನದಲ್ಲಿ ಖರೀದಿಸಿದ 56 ಬಸ್ ಗಳ ಪೈಕಿ ಕಲಬುರಗಿ, ಬಳ್ಳಾರಿ, ವಿಜಯಪುರದಲ್ಲಿ 12 ಬಸ್ ಗಳ ಟ್ರಯಲ್ ರನ್ ಮಾಡಲಾಗುತ್ತಿದೆ. ಅದರಂತೆ ಪ್ರಸ್ತುತ ಮಾರ್ಗದ ಕಲಬುರಗಿ–ಮೈಸೂರು ನಡುವೆ 2 ನಾನ್ ಎಸಿ ಸ್ಲೀಪರ್ ಬಸ್ ಹಾಗೂ ಕಲಬುರಗಿ–ಶಿವಮೊಗ್ಗ ನಡುವೆ 2 ಎಸಿ ಸ್ಲೀಪರ್ ಹೊಸ ಬಸ್ ಗಳ ಕಾರ್ಯಾಚರಣೆಗೆ ಚಾಲನೆ ನೀಡಲಾಗಿದೆ. ಈ ನೂತನ ವಾಹನಗಳು ಅತ್ಯಾಧುನಿಕ ಸೌಲಭ್ಯಗಳನ್ನು ಹೊಂದಿದ್ದು, ದೂರ ಪ್ರಯಾಣ ಮಾಡುವ ಸಾರ್ವಜನಿಕರಿಗೆ ಇನ್ನಷ್ಟು ಸುರಕ್ಷಿತ, ಸುಗಮ ಹಾಗೂ ಆರಾಮದಾಯಕ ಅನುಭವವನ್ನು ಒದಗಿಸಲಿವೆ ಎಂದರು.



ಕಲಬುರಗಿ ನಗರದಲ್ಲಿ ಬಸ್ ಶೆಲ್ಟರ್ ನಿರ್ಮಾಣ ಸಂಬಂಧ ಡಿ.ಪಿ.ಆರ್ ತಯಾರಿಸಲಾಗುತ್ತಿದೆ. ಬಸ್ ನಲ್ಲಿ ಚಿಲ್ಲರೆ ಸಮಸ್ಯೆ ಪರಿಹಾರಕ್ಕೆ ಕ್ಯೂರ್ ಕೋಡ್ ವ್ಯವಸ್ಥೆ ಜಾರಿಗೆ ತರಲಾಗಿದೆ. ಮುಂದಿನ ದಿನದಲ್ಲಿ ಕಲಬುರಗಿಯಲ್ಲಿ 100 ಮತ್ತು ವಿಜಯಪುರ–ಬಳ್ಳಾರಿ ವಿಭಾಗದಲ್ಲಿ 100 ಎಲೆಕ್ಟ್ರಿಕ್ ಬಸ್ ಕಾರ್ಯಾಚರಣೆಗೂ ಚಿಂತನೆ ನಡೆದಿದೆ ಎಂದು ಅಧ್ಯಕ್ಷ ಅರುಣಕುಮಾರ ಪಾಟೀಲ ತಿಳಿಸಿದರು.

**ಸ್ಯಾಟಲೈಟ್ ಬಸ್ ನಿಲ್ದಾಣ ನಿರ್ಮಾಣ**

ಕಲಬುರಗಿ ನಗರದಲ್ಲಿ ಸಂಚಾರ ದಟ್ಟಣೆ ನಿಯಂತ್ರಿಸಲು ನಗರದ ನಾಲ್ಕು ದಿಕ್ಕಿನಲ್ಲಿ ಸ್ಯಾಟಲೈಟ್ ಬಸ್ ನಿಲ್ದಾಣ ನಿರ್ಮಾಣ ಮಾಡಲಾಗುತ್ತಿದೆ. ಇಂದಿಲ್ಲಿ ಕಲಬುರಗಿ–ಮೈಸೂರು ನಡುವೆ ನಾನ್ ಎಸಿ ಸ್ಲೀಪರ್ 667 ಕಿ.ಮೀ. ಉದ್ದದ ಪ್ರಯಾಣಕ್ಕೆ 1,262 ರೂ. ಹಾಗೂ ಕಲಬುರಗಿ–ಶಿವಮೊಗ್ಗ ನಡುವೆ ಎಸಿ ಸ್ಲೀಪರ್ 547 ಕಿ.ಮೀ ಉದ್ದದ ಪ್ರಯಾಣಕ್ಕೆ ಕೇವಲ 1,195 ರೂ. ಕೈಗೆಟಕುವ ದರ ನಿಗದಿ ಮಾಡಿದ್ದು, ಪ್ರಯಾಣಿಕರು ಅರಾಮದಾಯಕವಾಗಿ ಪ್ರಯಟಣಿಸಬಹುದಾಗಿದೆ ಎಂದು ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ತಿಳಿಸಿದರು.

**ಶಕ್ತಿ ಯೋಜನೆ ಸಮರ್ಪಕ ಅನುಷ್ಠಾನ**

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಸೋಮಶೇಖರ ಹಿರೇಮಠ ಮಾತನಾಡಿ, ಶಕ್ತಿ ಯೋಜನೆಯಿಂದ ಮಹಿಳೆಯರ ಸಂಚಾರ ಹೆಚ್ಚಾಗಿದೆ. ಇದನ್ನು ಮನಗಂಡು ಕೆ.ಕೆ.ಅರ್.ಟಿ.ಸಿ. ಸಂಸ್ಥೆಯ ಅಧ್ಯಕ್ಷರಾಗಿರುವ ಅರುಣಕುಮಾರ ಪಾಟೀಲ ಅವರು ಹೆಚ್ಚಿನ ಬಸ್ ಗಳ ಕಾರ್ಯಾಚರಣೆ ಮಾಡುವ ಮೂಲಕ ಯೋಜನೆ ಸಮರ್ಪಕ ಅನುಷ್ಠಾನಕ್ಕೆ ಮುಂದಾಗಿರುವುದು ಸಂತಸ ತಂದಿದೆ ಎಂದು ಸಂಸ್ಥೆಯ ಅಧ್ಯಕ್ಷರ ಕಾರ್ಯವೈಖರಿಯನ್ನು ಶ್ಲಾಘಿಸಿದರು.

**ನೂತನ ಬಸ್ ಗಳ ಕಾರ್ಯಾಚರಣೆ ವಿವರ**

ಕಲಬುರ್ಗಿ–ಮೈಸೂರು (ನಾನ್ ಎಸಿ ಸ್ಲೀಪರ್) ಬಸ್ ಕಲಬುರಗಿ ಕೇಂದ್ರ ಬಸ್ ನಿಲ್ದಾಣದಿಂದ ಸಂಜೆ 06.00 ಗಂಟೆಗೆ ಹೊರಟು ಶಹಾಪುರ–ಲಿಂಗಸೂರು– ಸಿಂಧನೂರು–ಬಳ್ಳಾರಿ–ಚಳ್ಳಿಕೇರೆ–ಹಿರಿಯೂರು–ತುರುವೇಕೇರೆ ಮಾರ್ಗವಾಗಿ ಮೈಸೂರಿಗೆ ಮರುದಿನ ಬೆಳಿಗ್ಗೆ 08:00 ಗಂಟೆಗೆ ತಲುಪಲಿದೆ. ಇದೇ ಮಾರ್ಗದಲ್ಲಿ ಮೈಸೂರು–ಕಲಬುರ್ಗಿ (ನಾನ್ ಎಸಿ ಸ್ಲೀಪರ್) ಬಸ್ ಮೈಸೂರಿನಿಂದ ಸಂಜೆ 07.00 ಗಂಟೆಗೆ ಹೊರಟು ಕಲಬುರಗಿ ಕೇಂದ್ರ ಬಸ್ ನಿಲ್ದಾಣಕ್ಕೆ ಮರು ದಿನ ಬೆಳಿಗ್ಗೆ 09:00 ಗಂಟೆಗೆ ತಲುಪಲಿದೆ.

ಅದೇ ರೀತಿ ಕಲಬುರ್ಗಿ–ಶಿವಮೊಗ್ಗ (ಎಸಿ ಸ್ಲೀಪರ್–ಮಿನಿ ಕಲ್ಯಾಣರಥ) ಬಸ್ ಕಲಬುರ್ಗಿ ಕೇಂದ್ರ ಬಸ್ ನಿಲ್ದಾಣದಿಂದ ರಾತ್ರಿ 08:30 ಗಂಟೆಗೆ ಹೊರಟು ಶಹಾಪುರ–ಲಿಂಗಸೂರು–ಸಿಂಧನೂರು–ಗಂಗಾವತಿ ಹೊಸಪೇಟೆ–ಕುಡ್ಲಗಿ–ಚಿತ್ರದುರ್ಗ–ಚನ್ನಗಿರಿ ಮಾರ್ಗವಾಗಿ ಮರುದಿನ ಶಿವಮೊಗ್ಗಕ್ಕೆ ಬೆಳಿಗ್ಗೆ 07:15 ಗಂಟೆಗೆ ತಲುಪಲಿದೆ. ಇದೇ ಮಾರ್ಗದಲ್ಲಿ ಶಿವಮೊಗ್ಗ–ಕಲಬುರಗಿ (ಎಸಿ ಸ್ಲೀಪರ್–ಮಿನಿ ಕಲ್ಯಾಣರಥ) ಬಸ್ ಶಿವಮೊಗ್ಗದಿಂದ ಸಂಜೆ 07.00 ಗಂಟೆಗೆ ಹೊರಟು ಮರುದಿನ ಕಲಬುರಗಿ ಕೇಂದ್ರ ಬಸ್ ನಿಲ್ದಾಣಕ್ಕೆ ಬೆಳಿಗ್ಗೆ 05:45 ಗಂಟೆಗೆ ಬಂದು ತಲುಪಲಿದೆ.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ವಿಜಯಕುಮಾರ್ ಕಟ್ಟಿಮನಿ, ನಿರ್ಮಲಾ ಬರ್ಗಲಿ, ಸುರೇಶ ತಿಬ್ಬಶೆಟ್ಟಿ, ಕೆ.ಕೆ.ಆರ್.ಟಿ.ಸಿ ವ್ಯವಸ್ಥಾಪಕ ನಿರ್ದೇಶಕರಾದ ಡಾ.ಬಿ.ಸುಶೀಲಾ, ಮುಖ್ಯ ಸಂಚಾರ ವ್ಯವಸ್ಥಾಪಕ ಸಂತೋಷ ಕುಮಾರ, ಮುಖ್ಯ ಭದ್ರತಾಧಿಕಾರಿ ಎಸ್.ಡಿ ಗುರಿಕಾರ್, ಸಿ.ಎಂ.ಇ ಸಂತೋಷ ಗೋಗೇರಿ,

ಮುಖ್ಯ ಅರ್ಥಿಕ ಅಧಿಕಾರಿ ಬಸವರಾಜ ಬೆಳಗಲಿ, ಮಂಡಳಿ ಕಾರ್ಯದರ್ಶಿ ಜಗದೀಶ ನಾಯಕ್, ಕಲಬುರಗಿ ವಿಭಾಗ–1ರ ವಿಭಾಗೀಯ ನಿಯಂತ್ರಣಾಧಿಕಾರಿ ಗಂಗಾಧರ ಎಸ್.ಜಿ., ಕಲಬುರಗಿ ವಿಭಾಗ–2ರ ವಿಭಾಗೀಯ ನಿಯಂತ್ರಣಾಧಿಕಾರಿ ಬಸವಂತಪ್ಪ, ಡಿ.ಟಿ.ಓ ಈಶ್ವರ ಹೊಸಮನಿ ಸೇರಿದಂತೆ ಡಿಪೋ ಮ್ಯಾನೇಜರ್, ಬಸ ನಿಲ್ದಾಣದ ಅಧಿಕಾರಿಗಳು ಇದ್ದರು.

# ಗುರುವಿನ ಗುಲಾಮನಾಗುವತನಕ ದೊರೆಯದಣ್ಣ ಮುಕ್ತಿ: ಮಲ್ಲಿಕಾರ್ಜುನ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ನಗರದ ಡಿ ದೇವರಾಜ ಅರಸ್ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆ ಕನ್ನಡ ಮಾಧ್ಯಮ ಶಾಲೆಯಲ್ಲಿಂದು ಗುರು ಎಂದರೆ ಅಜ್ಞಾನದ ಕತ್ತಲೆಯಿಂದ ಜ್ಞಾನ ಎಂಬ ಬೆಳಕಿಗೆ ನಡೆದೊಯ್ಯುವ ದೀಪ. ಗುರು ಪೂರ್ಣಿಮಾ ಮತ್ತು ವಚನ ಸಾಹಿತ್ಯದ ಶರಣ ಸಂಸ್ಕೃತಿಯ ಸಾಧಕ ಹರಿಕಾರ ಶಿವಶರಣ ಹಡಪದ ಅಪ್ಪಣ್ಣ ಅವರ ಜಯತೋತ್ಸವವನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಡಿಡಿಯು ಸಮೂಹ ಶಿಕ್ಷಣ ಸಂಸ್ಥೆಗಳ ಆಡಳಿತಾಧಿಕಾರಿಯಾದ ಮಲ್ಲಿಕಾರ್ಜುನ ಮೇಟಿ, ಕನ್ನಡ ಮಾಧ್ಯಮ ಶಾಲೆಯ ಮುಖ್ಯಸ್ಥರಾದ ವೆಂಕಟೇಶ ಪೂಜಾರಿ, ಎಸ್ ಡಿಎ ವಿನೋದ್ ಕುಮಾರ್, ಶಿಕ್ಷಕರಾದ ಕವಿತಾ ಪಾಟೀಲ್, ಹುಚ್ಚಪ್ಪ ದೇವರಗೋನಾಲ, ಪ್ರಭು ಮೈಲಾರಿ, ನಸರೀನ್ ಬೇಗಂ, ಈರಮ್ಮ, ಎಚ್ ಪಿ ವಂದನಾ, ನಿರ್ಮಲಾ ಬೀಳೂರ, ಮಹಮ್ಮದ್ ಸೌದಾಗರ, ಹಾಗೂ ಮುದ್ದು ಮಕ್ಕಳು ಮತ್ತು ಯಲ್ಲಮ್ಮ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು

# ಧಾರಾಕಾರ ಮಳೆಯಲ್ಲೂ ಭಕ್ತಿಭಾವದ ಜಗನ್ನಾಥ ರಥಯಾತ್ರೆ





• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

:ಜು. 29: ಗುರುಮಠಕಲ್ ಪಟ್ಟಣದಲ್ಲಿ ಶ್ರೀ ಜಗನ್ನಾಥ ಸ್ವಾಮಿಯ ರಥಯಾತ್ರೆ ಬುಧವಾರ ಧಾರಾಕಾರ ಮಳೆಯ ನಡುವೆಯೂ ಅಪಾರ ಭಕ್ತಿಭಾವದಿಂದ ಹಾಗೂ ಸಂಭ್ರಮದಿಂದ ನೆರವೇರಿತು.

ಕುಂಬಾರವಾಡಿಯಿಂದ ಆರಂಭವಾದ ರಥಯಾತ್ರೆಯು ಪಟ್ಟಣದ ಪ್ರಮುಖ ರಸ್ತೆ, ಬಸ್ ನಿಲ್ದಾಣ ಸೇರಿದಂತೆ ವಿವಿಧ ಮಾರ್ಗಗಳಲ್ಲಿ ಸಂಚರಿಸಿ, ಪುನಃ ಕುಂಬಾರವಾಡಿ ಪ್ರದೇಶ ತಲುಪಿತು. ಮಳೆ ನಿರಂತರವಾಗಿ ಸುರಿದರೂ ಭಕ್ತರು ಯಾವುದೇ ರೀತಿಯ ಹಿಂಜರಿಕೆಯಿಲ್ಲದೆ ಉತ್ಸಾಹದಿಂದ ರಥವನ್ನು ಎಳೆದು ಭಕ್ತಿ ಸಮರ್ಪಿಸಿದರು. ಮಳೆಯ ನಡುವೆಯೂ ಭಕ್ತರ ಸಂಭ್ರಮ ಮತ್ತು ಭಕ್ತಿಭಾವ ವಿಶೇಷವಾಗಿ ಗಮನಸೆಳೆಯಿತು.

ರಥಯಾತ್ರೆಯ ನಂತರ ಭಗವದ್ಗೀತೆ ಪಾರಾಯಣ, ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಮಹಾಪ್ರಸಾದ ವಿತರಣೆಯನ್ನು ಆಯೋಜಿಸಲಾಗಿದ್ದು, ನೂರಾರು ಭಕ್ತರು ಭಾಗವಹಿಸಿ ಶ್ರೀ ಜಗನ್ನಾಥ ಸ್ವಾಮಿಯ ಕೃಪೆಗೆ ಪಾತ್ರರಾದರು. ಭಕ್ತಿಭಾವ, ಶಿಸ್ತು ಹಾಗೂ ಧಾರ್ಮಿಕ ಸಂಪ್ರದಾಯಗಳೊಂದಿಗೆ ಜಗನ್ನಾಥ ರಥಯಾತ್ರೆ ಯಶಸ್ವಿಯಾಗಿ ಸಂಪನ್ನಗೊಂಡಿತು.

# ಉತ್ತಮ ತಂತ್ರಜ್ಞಾನದಿಂದ ವಿದ್ಯಾರ್ಥಿಗಳಲ್ಲಿ ಜ್ಞಾನಾರ್ಜನೆಯಾಗಲಿ




• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಉತ್ತಮ ತಂತ್ರಜ್ಞಾನದಿಂದ ವಿದ್ಯಾರ್ಥಿಗಳು ಜ್ಞಾನಾರ್ಜನೆ ಪಡೆಯುವಂತಾಗಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಇಸಿಓ ಮಲ್ಲಿಕಾರ್ಜುನ ಕನ್ನಾಳೆ ಹೇಳಿದರು.ಪಟ್ಟಣದ ಶಾರದಾ ಶಾಲೆಯಲ್ಲಿ ಬುಧವಾರ ಗುರುಪೂರ್ಣಿಮೆ ನಿಮಿತ್ಯ ಆಯೋಜಿಸಿದ್ದ ಗುರುವಂದನಾ, ಪತ್ರಿಕಾ ದಿನಾಚರಣೆ ಹಾಗು 3ಡಿ ಲ್ಯಾಬ್ ಉದ್ಘಾಟನಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಗ್ರಾಮೀಣಬಡ ವಿದ್ಯಾರ್ಥಿಗಳಿಗೆ 3ಡಿ ಲ್ಯಾಬ್ ಸೇರಿದಂತೆಇತರೆ ತಂತ್ರಜ್ಞಾನಗಳನ್ನು ಬಳಸುವ ಅವಕಾಶ ಸಿಗುವುದಿಲ್ಲ. ಆದರೆ ಶಾರದಾ ಶಾಲೆಯಲ್ಲಿ ವಸಂತ ಪಾಟೀಲ ನೇತೃತ್ವದಲ್ಲಿ ಉತ್ತಮ ತಂತ್ರಜ್ಞಾನವನ್ನು ಬಳಸಿ ಪಾಠ ಮಾಡುತ್ತಿರುವುದು ಮೆಚ್ಚುವಂತಹ ಕಾರ್ಯವಾಗಿದೆ. ಇಲ್ಲಿಯ ವಿದ್ಯಾರ್ಥಿಗಳು ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿಉತ್ತಮ ಸಾಧನೆ ಮಾಡುತ್ತಿರುವುದು ಶಾಲೆಯ ಶಿಕ್ಷಕರಮತ್ತು ಆಡಳಿತ ಮಂಡಳಿಯ ಪರಿಶ್ರಮವಾಗಿದೆ ಎಂದು ಹೇಳಿದರು.ಶಾರದಾ ಶಾಲೆಯ ಅಧ್ಯಕ್ಷ ವಸಂತಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಶಾಲೆಯ ಆಡಳಿತಾಧಿಕಾರಿ ಮಹಾದೇವ ಪಟ್ನೆ ಪ್ರಾಸ್ತಾವಿಕನುಡಿ ನುಡಿದರು. ಕಾರ್ಯಕ್ರಮದಲ್ಲಿ ಶಿಕ್ಷಣ ಇಲಾಖೆಯ ಪ್ರಭು ಡಿಗ್ಗೆ, ಅಂಬರೀಶ ಖಂಡ್ರೆ, ಶೈನಾಜ ಬೇಗಂ, ಅಶ್ವಿನಿ ರಾಜೋಳೆ, ಸುಮಿತ್ರಾ ಪಾಟೀಲ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಶೋಕ ರಾಜೋಳೆ, ಸಂತೋಷ ಬಿಜಿಪಾಟೀಲ, ಜಯರಾಜ ದಾಬಶೆಟ್ಟಿ, ದಿಲೀಪ್ ಶೆರಿಕಾರ, ಸಂತೋಷ್ ಬೇಲೂರೆ, ಭದ್ರೇಶ ಗುರಯ್ಯಾ ಸ್ವಾಮಿ ಉಪಸ್ಥಿತರಿದ್ದರು.ಶೈನಾಜ ಬೇಗಂ ಸ್ವಾಗತಿಸಿದರು. ಸುಮಿತ್ರಾ ಪಾಟೀಲ ನಿರೂಪಿಸಿದರು. ಅಶ್ವಿನಿ ರಾಜೋಳೆ ವಂದಿಸಿದರು.

# 2 ಕೋಟಿ ರೂ.ವೆಚ್ಚದ ಬೃಹತ್ ಕಾಮಗಾರಿಗಳಿಗೆ ಚಾಲನೆ: ಆರೋಗ್ಯ, ಶಿಕ್ಷಣ ಕ್ಷೇತ್ರಗಳ ಅಭಿವೃದ್ಧಿ ನನ್ನ ಗುರಿ: ಶಾಸಕ ಶರಣಗೌಡ ಕಂದಕೂರ





• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮತಕ್ಷೇತ್ರದಲ್ಲಿ ಶುದ್ಧ ಕುಡಿಯುವ ನೀರು, ಆರೋಗ್ಯ ಹಾಗೂ ಶಿಕ್ಷಣದ ಬಗ್ಗೆ ಹೆಚ್ಚು ಒತ್ತು ಕೆಲಸ ನಾನು ಆಯ್ಕೆಯಾದಾಗಿನಿಂದ ಹೇಳುತ್ತಿದ್ದು, ಅದನ್ನೇ ಪಾಲಿಸುತ್ತಿದ್ದೇನೆ ಎಂದು ಗುರಮಠಕಲ್ ಶಾಸಕ ಶರಣಗೌಡ ಕಂದಕೂರ ತಿಳಿಸಿದರು.ಬುಧವಾರ ಸೈದಾಪುರ ಗ್ರಾಮದಲ್ಲಿ ಕೆಕೆಆರ್ ಡಿಬಿ ಯೋಜನೆಯಡಿ ಸುಮಾರು 2 ಕೋಟಿ ರೂ. ವೆಚ್ಚದಲ್ಲಿ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯದ ನೂತನ ನಾಲ್ಕು ಕೋಣೆಗಳ ಉದ್ಘಾಟನೆ, ರಾಚನಳ್ಳಿ ಗ್ರಾಮದ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗೆ ಸಂಪರ್ಕಿಸುವ ನೂತನ ರಸ್ತೆ ಉದ್ಘಾಟನೆ, ಕಂಪ್ಯೂಟರ್ ಲ್ಯಾಬ್ ಹಾಗೂ ಶುದ್ಧ ಕುಡಿಯುವ ನೀರಿನ ಘಟಕ ಲೋಕಾರ್ಪಣೆಗೊಳಿಸಿ ಮಾತನಾಡಿದರು.

ಅಧಿಕಾರಿಗಳಿಗೆ ನಾನು ಸಿಟ್ಟಿನಿಂದ ಯಾಕೆ ಮಾತನಾಡುತ್ತೇನೆ ಎಂದು ಈಗೀಗ ನಿಮಗೆಲ್ಲ ಈಗ ಅರ್ಥವಾಗಿದೆ. ನಾನು ನನ್ನ ವೈಯಕ್ತಿಕ ಕಾರಣಕ್ಕಾಗಿ ಯಾವ ಅಧಿಕಾರಿಗಳಿಗೆ ಫೋನ್ ಮಾಡುವುದಿಲ್ಲ. ಆದರೆ, ನನ್ನ ಅಭಿವೃದ್ಧಿಯ ವೇಗಕ್ಕೆ ಯಾರೂ ಸ್ಪಂದನೆ ಮಾಡುವುದಿಲ್ಲ ಅಂಥವರಿಗೆ ಚಳಿ ಬಿಡಿಸಿದ್ದೇನೆ ಎಂದು ಹೇಳಿದರು.

ಕ್ಷೇತ್ರದಲ್ಲಿ ವಸತಿ ಶಾಲೆಗಳಿಗೆ ಮೂಲಸೌಕರ್ಯ ಕಲ್ಪಿಸಲು ನಾನು ಬದ್ಧನಾಗಿದ್ದೇನೆ. ನಾನು ಅನುದಾನ ನೀಡಬಹುದು, ಅದನ್ನು ಅನುಷ್ಠಾನಕ್ಕೆ ತರುವ ಕೆಲಸ ಅಧಿಕಾರಿಗಳಿಂದ ಆಗಬೇಕು ಎಂದರು.

ಸಹಾಯಕ ಆಯುಕ್ತ ಶ್ರೀಧರ ಗೋಟೂರ ಮಾತನಾಡಿ, ಈ ಕಾಲಘಟ್ಟದಲ್ಲಿ ವಸತಿ ಶಾಲೆಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಅದೃಷ್ಟವಂತರು. ಕಾರಣ ಈ ಭಾಗದ ಶಾಸಕ ಶರಣಗೌಡ ಕಂದಕೂರ ಅವರು, ಶಿಕ್ಷಣ ಹಾಗೂ ಆರೋಗ್ಯ ಕ್ಷೇತ್ರಕ್ಕೆ ಹೆಚ್ಚಿನ ಒತ್ತು ಕೊಡುತ್ತಿದ್ದಾರೆ. ಒಂದೇ ಶಾಲೆಗೆ ಎರಡು ಕೋಟಿ ಅನುದಾನ ಕೊಡುವ ಮೂಲಕ ಶಿಕ್ಷಣದ ಬಗ್ಗೆ ಅವರಿಗಿರುವ ಕಾಳಜಿ ತೋರಿಸಿದ್ದಾರೆ ಎಂದರು.

ಇದೇ ವೇಳೆ ಕಳೆದ ಸಾಲಿನ ನೀಟ್ ಪರೀಕ್ಷೆಯಲ್ಲಿ 1866 ನೇ ರ್ಯಾಂಕ್ ಪಡೆದು ಸಾಧನೆ ಮಾಡಿದ ವಿದ್ಯಾರ್ಥಿನಿ ಮಾನಸಾ ಹಾಗೂ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಶೇ.93 ಅಂಕ ಪಡೆದ ಅಫ್ಸಾನಾರನ್ನು ಸನ್ಮಾನಿಸಲಾಯಿತು.

ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಸಿದ್ದಣ್ಣ ಅಣಬಿ, ತಾಪಂ ಇಒ ಮಹಾದೇವ, ಎಇಇ ಟಿ.ಬನ್ನಪ್ಪ, ಚಂದ್ರಶೇಖರ, ಸಿಪಿಐ ಶಿವಪ್ಪ, ಜೆಸ್ಕಾಂ ಎಇಇ ಮಾರ್ಕಂಡಯ್ಯಾ, ಪ್ರಮುಖರಾದ ಚಂದ್ರಗೌಡ, ಅಜಯರಡ್ಡಿ ಯಲ್ಹೇರಿ, ಬಸವರಾಜಪ್ಪ ಗೌಡ, ಗುರುನಾಥರಡ್ಡಿ, ಜೆಡಿಎಸ್ ಜಿಲ್ಲಾಧ್ಯಕ್ಷ ಸುಭಾಶ್ಚಂದ್ರ ಕಟಕಟಿ, ಪ್ರಾಚಾರ್ಯೆ ಶಿವಲೀಲಾ, ಸ್ವಾಗತಿಸಿದರು. ಚಂದ್ರಶೇಖರ ಗೋಗಿ ಅವರ ತಂಡದಿಂದ ಪ್ರಾರ್ಥನೆ ಗೀತೆ ನಡೆಯಿತು.

### ಕೊಪ್ಪಳದ ಅಜ್ಜನವರು, ಕುಮಾರಣ್ಣ ನನಗೆ ರೋಲ್ ಮಾಡಲ್

ನಾನು ನೋವಿನಲ್ಲಿದ್ದಾಗ ನನಗೆ ಸಾಂತ್ವನ ಹೇಳಿ ಧೈರ್ಯ ತುಂಬಿ ಆಶೀರ್ವಾದ ಮಾಡಿದ ಕೊಪ್ಪಳದ ಶ್ರೀ ಗವಿಮಠದ ಅಜ್ಜನವರು ಹಾಗೂ

ರಾಜಕೀಯದಲ್ಲಿ ಸದಾ ಬೆನ್ನೆಲುಬಾಗಿ ನಿಂತು ಆಶೀರ್ವಾದ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ನನ್ನ ಗುರುಗಳಾಗಿದ್ದಾರೆ ಎಂದು ಶಾಸಕ ಶರಣಗೌಡ ಕಂದಕೂರ ಹೇಳಿದರು.

ಗುರು ಪೂರ್ಣಿಮೆ ಈ ದಿನ ನಿಮ್ಮ ಶಾಲೆಗೆ ಬಂದಿದ್ದೇನೆ. ನಿಮ್ಮ ಹಿಂದೆ ಗುರುಗಳಿದ್ದ ಹಾಗೆ ನನ್ನ ಜೀವನದಲ್ಲೂ ಈ ಇಬ್ಬರು ಗುರುಗಳು ನನಗೆ ರೋಲ್ ಮಾಡೆಲ್ ಆಗಿದ್ದಾರೆ. ಹಾಗಾಗಿ ನಾನು ಯಾವತ್ತೂ ಅವರನ್ನು ಮರೆಯಲು ಸಾಧ್ಯವಿಲ್ಲ ಎಂದು ಸ್ಮರಿಸಿಕೊಂಡರು.

### ಪಾಲಕರಿಂದ ಶಾಸಕರಿಗೆ ಅಭಿನಂದನೆ

ಈ ಹಿಂದೆ ನಾನು ಶಾಲೆಗೆ ಭೇಟಿ ಕೊಟ್ಟಾಗ ಮಕ್ಕಳ ಬೇಡಿಕೆಯಂತೆ ಶಾಲೆಗೆ ರಸ್ತೆ ನಿರ್ಮಾಣ ಮಾಡಿಯೇ ಬರುತ್ತೇನೆ ಎಂದು ಶಾಸಕರು ಮಾತು ಕೊಟ್ಟಿದ್ದರು. ಅದರಂತೆ ರಸ್ತೆ ಹಾಗೂ ಶುದ್ಧ ಕುಡಿಯುವ ನೀರಿನ ಘಟಕ ಸಹ ಉದ್ಘಾಟಿಸಿದ್ದಾರೆ. ಕ್ಷೇತ್ರದ ಶಾಸಕರು ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತಾರೆ. ನಮ್ಮ ಮಕ್ಕಳ ಶೈಕ್ಷಣಿಕ ಭವಿಷ್ಯದ ಬಗ್ಗೆ ಅವರಲ್ಲಿರುವ ಕಾಳಜಿ ನಿಜಕ್ಕೂ ಶ್ಲಾಘನೀಯ ಎಂದು ಕಾರ್ಯಕ್ರಮದಲ್ಲಿ ನೆರೆದಿದ್ದ ಪಾಲಕರು ಶಾಸಕ ಕಂದಕೂರ ಅವರಿಗೆ ಕೃತಜ್ಞತೆ ಸಲ್ಲಿಸುವ ಮೂಲಕ ಅಭಿನಂದಿಸಿದರು.

### ಜನರ ಸಮಸ್ಯೆ ಆಲಿಸುವ ತಾಳ್ಮೆ ಕಲಿತುಕೊಳ್ಳಿ

ಜನಸಾಮಾನ್ಯರ ಸಮಸ್ಯೆಗಳಿಗೆ ಗ್ರಾಪಂ ಅಧಿಕಾರಿಗಳು ಸ್ಪಂದಿಸಬೇಕು. ಪಂಚಾಯಿತಿಗಳಲ್ಲಿ ಅನುದಾನವಿಲ್ಲ, ನೂತನ ಸದಸ್ಯರು ಆಯ್ಕೆಯಾಗಿಲ್ಲ. ಗ್ರಾಮಗಳಲ್ಲಿ ಚರಂಡಿ ಸ್ವಚ್ಛತೆ, ಕುಡಿಯುವ ನೀರು ಕಲ್ಪಿಸುವ ಕೆಲಸಕ್ಕೂ ಜನತೆ ಶಾಸಕರ ಬಳಿ ಬಂದು ಮನವಿ ಮಾಡುವ ಸ್ಥಿತಿ ಬಂದಿರುವುದು ನಿಜಕ್ಕೂ ಶೋಚನೀಯ ಎಂದು ಸೈದಾಪುರ ಗ್ರಾಮದಲ್ಲಿ ತಮ್ಮ ಸಮಸ್ಯೆ ತೋಡಿಕೊಂಡ ಜನರ ಮುಂದೆ ಅಸಮಾಧಾನ ವ್ಯಕ್ತಪಡಿಸಿದ ಶಾಸಕರು, ಅಧಿಕಾರಿಗಳು ಜನರ ಸಮಸ್ಯೆ ಆಲಿಸುವ ತಾಳ್ಮೆ ಕಲಿತುಕೊಳ್ಳಿ, ನಂತರ ಕೆಲಸ ಮಾಡಿಕೊಡಿ ಎಂದು ಸೂಚನೆ ನೀಡಿದರು.

### ರಸ್ತೆ ನಿರ್ಮಾಣಕ್ಕೆ ಸಹಕಾರ ಕೊಟ್ಟ ರೈತರಿಗೆ ಅಭಿನಂದನೆ

ರಾಚನಳ್ಳಿ ಗ್ರಾಮದ ಈ ವಸತಿ ಶಾಲೆಗೆ ಸಂಪರ್ಕಿಸುವ ರಸ್ತೆಯೇ ಇರಲಿಲ್ಲ. ಇದು ಬಹುದೊಡ್ಡ ಸಮಸ್ಯೆಯಾಗಿತ್ತು. ನಮ್ಮ ತಂದೆ ಶಾಸಕರಾಗಿದ್ದಾಗಿನಿಂದಲೂ ರಸ್ತೆ ನಿರ್ಮಾಣಕ್ಕೆ ಪ್ರಯತ್ನ ನಡೆದಿತ್ತು. ಅಕ್ಕಪಕ್ಕದ ಜಮೀನುಗಳ ರೈತರಿಗೆ ಮನವಿ ಮಾಡಿಕೊಂಡು ಕೊನೆಗೂ ಸುಸಜ್ಜಿತ ರಸ್ತೆ ನಿರ್ಮಾಣ ಮಾಡಲಾಗಿದೆ. ಹೀಗಾಗಿ ಸಹಕಾರ ಕೊಟ್ಟ ರೈತರಿಗೆ ನಾನು ಕೃತಜ್ಞತೆ ಸಲ್ಲಿಸುವೆ. ಇಷ್ಟೆಲ್ಲ ತೊಂದರೆಗಳ ಮಧ್ಯೆ ವಿದ್ಯಾರ್ಥಿಗಳಿಗೆ ಸೌಲಭ್ಯ ಕಲ್ಪಿಸುತ್ತಿದ್ದೇವೆ. ನೀವು ಚನ್ನಾಗಿ ಅಭ್ಯಾಸ ಮಾಡಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದು ಶಾಲೆ, ಕ್ಷೇತ್ರ ಹಾಗೂ ಜಿಲ್ಲೆಗೆ ಉತ್ತಮ ಹೆಸರು ತಂದರೆ, ನಾವು ಪಟ್ಟ ಶ್ರಮ ಸಾರ್ಥಕವಾಗುತ್ತದೆ ಎಂದು ಶಾಸಕ ಶರಣಗೌಡ ಸಲಹೆ ನೀಡಿದರು.

ಕಾರ್ಯಕ್ರಮದ ನಂತರ ಮಕ್ಕಳೊಂದಿಗೆ ಕುಳಿತು ಶಾಸಕರು, ಅಧಿಕಾರಿಗಳು ಭೋಜನ ಸವಿದರು.

# ಬರದ ನಡುವೆಯೂ ಬೆಳೆ ಉಳಿಸಿ: ಹಣಮಂತ ಹೀರಿಮೇಟಿ



'ಇಂದೋ, ನಾಳೆಯೋ ಮಳೆ ಬಂದೇ ಬರ್ತೈತಿ ಅನ್ನೋ ಭರವಸೆ ನಮಗೆ. ಈ ಬಿಸಿಲು ಮತ್ತೆ ಒಣ ಗಾಳಿಗೆ ಸಣ್ಣ ಬೆಳೆ ಹಾಳಾಗಿ ಹೋಗಬಾರದು ಅಂತ ದೂರದಿಂದ ಟ್ಯಾಂಕರ್ ನೀರು ತಂದು ಬೆಳೆಗೆ ಉಣಿಸಕತ್ತೇವಿ. ಮಳೆ ಬರೋತನಕ ಈ ಬೆಳೆಯನ್ನು ಹೇಗಾದ್ರೂ ಮಾಡಿ ಬದುಕಿಸಿಕೊಳ್ಳೋದಷ್ಟೇ ನಮ್ಮ ಮುಂದಿರೋ ಗುರಿ. ಸರ್ಕಾರ ಆದಷ್ಟು ಬೇಗ ನಮ್ ಭಾಗದಾಗ ಬರಗಾಲ ಘೋಷಣೆ ಮಾಡಿ ನಮ್ ಹೊಲಗಳಿಗೆ ನೀರು, ಬೆಳೆ ಹಾನಿ ಪರಿಹಾರ ನೀಡಿ ಸಣ್ಣ ರೈತರ ಕೈ ಹಿಡಿಬೇಕು," ಎಂದು ಸರ್ಕಾರಕ್ಕೆ ಮನವಿಮಾಡಿಕೋಡರು.

**ರೈತ ಹಣಮಂತ ಹೀರಿಮೇಟಿ ಬೀರನೂರ.**

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಆಕಾಶದತ್ತ ಕಣ್ಣು ನೆಟ್ಟು, ಮೋಡಗಳ ಕಣ್ಣ ಮುಚ್ಚಾಲೆಗೆ ಮನಸಲ್ಲೇ ಕೈಮುಗಿಯುವ ಕಾಯಕ ಯಾದಗಿರಿ ಜಿಲ್ಲೆಯ ಬೀರನೂರ ರೈತ ಹಣಮಂತ ಹೀರಿಮೇಟಿಗೆ ಹೊಸದೇನಲ್ಲ. ಆದರೆ, ಬಿತ್ತಿದ ಬೀಜ ಮಣ್ಣಲ್ಲಿ ಕರಗಿ ಹೋಗಬಾರದು, ಮೊಳಕೆಯೊಡೆದ ಬೆಳೆ ಒಣಗಬಾರದು ಎಂಬ ಹಟಕ್ಕೆ ಬಿದ್ದರೆ ಒಬ್ಬ ರೈತ ಏನೆಲ್ಲ ಮಾಡಬಲ್ಲ ಎಂಬುದಕ್ಕೆ ಇಲ್ಲೊಂದು ಜೀವಂತ ನಿದರ್ಶನ ಸಿಗುತ್ತದೆ.

ಯಾದಗಿರಿ ಜಿಲ್ಲೆಯ ಶಹಾಪುರ ತಾಲ್ಲೂಕಿನ ಬೀರನೂರ ವ್ಯಾಪ್ತಿಯ ರೈತ ಹಣಮಂತ ಹೀರಿಮೇಟಿ ತಮ್ಮ ಹೊಲದಲ್ಲಿ ಮೆಣಸಿನಕಾಯಿ ಬೀಜ ಬಿತ್ತಿ ಸ್ವಲ್ಪ ದಿನಗಳಾಗಿವೆ. ಬಿತ್ತನೆ ಮುಗಿದ ತಕ್ಷಣ ಹದವಾಗಿ ಮಳೆಯಾಗಿದ್ದರೆ ಸಾಕು, ಸಾಲುಗಳಲ್ಲಿ ಬೆಳೆ ಹಸನಾಗಿ ಎದ್ದು ನಿಲ್ಲುತ್ತಿತ್ತು. ಆದರೆ ವಿಧಿಯಾಟ ಬೇರೆಯೇ ಇತ್ತು. ಬಿತ್ತನೆ ಮುಗಿಯುತ್ತಿದ್ದಂತೆ ಮಳೆರಾಯ ಸಂಪೂರ್ಣ ಮುಖ ತಿರುಗಿಸಿದ್ದಾನೆ. ಇತ್ತ ಮಳೆಯೂ ಇಲ್ಲದೆ, ಅತ್ತ ತಂಪಾದ ವಾತಾವರಣವೂ ಇಲ್ಲದೆ ಬರಿ ಒಣ ಗಾಳಿ ಬೀಸುತ್ತಿರುವುದು ಹೊಲದಲ್ಲಿದ್ದ ಅಲ್ಪಸ್ವಲ್ಪ ತೇವಾಂಶವನ್ನೂ ಸಂಪೂರ್ಣವಾಗಿ ಆರಿಸಿ ಹಾಕುತ್ತಿದೆ.ಸಾಲಸೋಲ ಮಾಡಿ ತಂದ ಬೀಜ, ಗೊಬ್ಬರ ಮಣ್ಣುಪಾಲಾಗುವುದನ್ನು ಕಣ್ಣಾರೆ ನೋಡಲು ಹಣಮಂತ ಹೀರಿಮೇಟಿ ಅವರಿಗೆ ಮನಸ್ಸು ಬರಲಿಲ್ಲ. ಬಿಸಿಲಿನ ಬೇಗೆ ಮತ್ತು ಸುಡುವ ಒಣ ಗಾಳಿಯ ಸವಾಲನ್ನು ಎದುರಿಸಲು ಕೊನೆಗೆ ಅವರು ಕಂಡಿದ್ದೇ 'ಟ್ರ್ಯಾಕ್ಟರ್ ನೀರಿನ ಟ್ಯಾಂಕರ್' ಹಾದಿ.

ಸುಮಾರು 5 ಕಿಲೋಮೀಟರ್ ದೂರದಲ್ಲಿರುವ ನೀರಿನ ಮೂಲದಿಂದ ಕುಟುಂಬದವರೆಲ್ಲರೂ ಸೇರಿ ದಿನಕ್ಕೆ 4–5 ಟ್ರ್ಯಾಕ್ಟರ್ ಟ್ಯಾಂಕರ್ ನೀರು ತರುತ್ತಿದ್ದಾರೆ. ಪ್ರತಿಯೊಂದು ಸಾಲಿಗೂ, ಪ್ರತಿಯೊಂದು ಮೊಳಕೆಗೂ ಪ್ರೀತಿಯಿಂದ ನೀರು ಉಣಿಸುತ್ತಿದ್ದಾರೆ. ಬೆವರು ಸುರಿಸಿ ತಂದ ಪ್ರತಿಯೊಂದು ಹನಿ ನೀರೂ ಕಾಯುತ್ತಿರುವ ಬೆಳೆಗೆ ಜೀವಜಲವಾಗುತ್ತಿದೆ.

ಯಾದಗಿರಿ ಜಿಲ್ಲೆಗೆ ಮಳೆ ಅಭಾವ, ಬಿಸಿಲ ಧಗೆ ಹಾಗೂ ಒಣ ಗಾಳಿಯಿಂದ ಕೃಷಿ ಮಾಡುವುದೇ ಸಾಹಸವಾಗಿ ಪರಿಣಮಿಸಿರುವ ಈ ದಿನಗಳಲ್ಲಿ, ಹಣಮಂತ ಹೀರಿಮೇಟಿ ಈ ಶ್ರಮ ಮತ್ತು ಭರವಸೆಯ ಬದುಕು ಸುತ್ತಮುತ್ತಲಿನ ರೈತರಲ್ಲಿ ಹೊಸ ಭರವಸೆ ಮೂಡಿಸಿದೆ. ಸರ್ಕಾರ ಕೂಡಲೇ ಪರಿಸ್ಥಿತಿಯ ತೀವ್ರತೆಯನ್ನು ಅರಿತು ಈ ಭಾಗದಲ್ಲಿ ಬರಗಾಲ ಘೋಷಿಸಿ ಸಂಕಷ್ಟದಲ್ಲಿರುವ ರೈತರ ನೆರವಿಗೆ ಧಾವಿಸಬೇಕು ಎಂದು ರೈತ ಹಣಮಂತ ಹೀರಿಮೇಟಿ ಮನವಿ ಮಾಡಿದ್ದಾರೆ

# ಗುರುಪೂರ್ಣಿಮೆ ಅಂಗವಾಗಿ ಯಾನಗುಂದಿ ಕ್ಷೇತ್ರದಲ್ಲಿ ವಿಶೇಷ ಪೂಜೆ: ಸಾವಿರಾರು ಭಕ್ತರ ದರ್ಶನ

• ಮಲ್ಲಮ್ಮ ನುಡಿ ವಾರ್ತೆ ಸೇಡಂ

ಜು. 29: ತಾಲೂಕಿನ ಯಾನಗುಂದಿಯಲ್ಲಿ ಗುರುಪೂರ್ಣಿಮೆ ಹಾಗೂ ಮಾತಾಮಹೇಶ್ವರಿ ಅಮ್ಮನವರ 93ನೇ ಜನ್ಮದಿನದ ಅಂಗವಾಗಿ ಬುಧವಾರ ವಿಶೇಷ ಪೂಜೆ, ಧಾರ್ಮಿಕ ಕಾರ್ಯಕ್ರಮಗಳು ಹಾಗೂ ಅನ್ನಸಂತರ್ಪಣೆ ಭಕ್ತಿಭಾವದಿಂದ ಜರುಗಿದವು.ಬೆಳಗ್ಗೆಯಿಂದಲೇ ಕ್ಷೇತ್ರದಲ್ಲಿ ಮಂತ್ರಘೋಷಗಳು ಮೊಳಗಿದ್ದು, ದೇವಾಲಯಗಳನ್ನು ವಿಶೇಷವಾಗಿ ಅಲಂಕರಿಸಲಾಗಿತ್ತು. ಚಿಟಿಪಟಿ ಮಳೆಯ ನಡುವೆಯೂ ಸಾವಿರಾರು ಭಕ್ತರು ಆಗಮಿಸಿ ಮಾತಾ ಮಾಣಿಕೇಶ್ವರಿ ಅಮ್ಮನವರ ಕರ್ತೃ ಗದ್ದುಗೆಗೆ ನಮಸ್ಕರಿಸಿ ಆಶೀರ್ವಾದ ಪಡೆದು ಪ್ರಸಾದ ಸ್ವೀಕರಿಸಿದರು.ಮಾತಾ ಮಾಣಿಕೇಶ್ವರಿ ಅಮ್ಮನವರು ಪ್ರತಿ ವರ್ಷ ಶಿವರಾತ್ರಿ ಹಾಗೂ ಗುರುಪೂರ್ಣಿಮೆ ಸಂದರ್ಭದಲ್ಲಿ ಭಕ್ತರಿಗೆ ದರ್ಶನ ನೀಡುತ್ತಿದ್ದರು ಎಂದು ಭಕ್ತರು ಸ್ಮರಿಸಿದರು. ಅವರ ಸ್ಮರಣಾರ್ಥ ನಡೆದ ವಿಶೇಷ ಪೂಜೆಯಲ್ಲಿ ಅಪಾರ ಸಂಖ್ಯೆಯ ಭಕ್ತರು ಪಾಲ್ಗೊಂಡು ಭಕ್ತಿಭಾವ ಮೆರೆದರು.ಕ್ಷೇತ್ರಕ್ಕೆ ಆಗಮಿಸಿದ ಭಕ್ತರಿಗೆ ಅಚ್ಚುಕಟ್ಟಾದ ವ್ಯವಸ್ಥೆ ಹಾಗೂ ಅನ್ನಸಂತರ್ಪಣೆ ಮಾಡಲಾಗಿತ್ತು. ಕಾರ್ಯಕ್ರಮದಲ್ಲಿ ಯಾನಗುಂದಿ ಆಶ್ರಮದ ಟ್ರಸ್ಟ್ ಅಧ್ಯಕ್ಷರಾದ ಶಿವಯ್ಯ ಸ್ವಾಮಿ, ಜಗ ಜೀವನರೆಡ್ಡಿ, ಶಂಕರ ಭೂಪಾಲ್ ಕಾನಾಗಡ್ಡ , ಸಿದ್ರಾಮಪ್ಪ ಸಣ್ಣೂರ ಸೇರಿದಂತೆ ಅನೇಕ ಭಕ್ತರು ಉಪಸ್ಥಿತರಿದ್ದರು.



# ತಾ ಪಂ ಕುಕನೂರು ಕಚೇರಿಯಲ್ಲಿ ಹಡಪದ ಅಪ್ಪಣ್ಣ ಜಯಂತಿ ಆಚರಣೆ



• **ಮಲ್ಲಮ್ಮ ನುಡಿ ವಾರ್ತೆ ಕುಕನೂರು**

ತಾಲೂಕು ಪಂಚಾಯತ ಕುಕನೂರು ಕಚೇರಿಯಲ್ಲಿ ಸಂತ ಶ್ರೇಷ್ಠ ಹಡಪದ ಅಪ್ಪಣ್ಣ ಅವರ ಜಯಂತಿಯನ್ನು ಭಕ್ತಿಭಾವದಿಂದ ಆಚರಿಸಲಾಯಿತು. ಈ ಸಂದರ್ಭದಲ್ಲಿ ಹಡಪದ ಅಪ್ಪಣ್ಣ ಅವರ ಭಾವಚಿತ್ರಕ್ಕೆ ತಾಲೂಕು ಪಂಚಾಯತ್ ಯೋಜನಾಧಿಕಾರಿ ಆನಂದ ಗರೂರ ಅವರು ಪುಷ್ಪಾರ್ಚನೆ ಸಲ್ಲಿಸಿ, ಅವರ ಜೀವನ, ಆದರ್ಶಗಳು ಹಾಗೂ ಸಮಾಜಕ್ಕೆ ನೀಡಿದ ಅಮೂಲ್ಯ ಕೊಡುಗೆಯನ್ನು ಸ್ಮರಿಸಿದರು. ಹಡಪದ ಅಪ್ಪಣ್ಣ ಅವರ ತತ್ವ–ಆದರ್ಶಗಳು ಇಂದಿನ ಸಮಾಜಕ್ಕೂ ಮಾರ್ಗದರ್ಶಕವಾಗಿದ್ದು, ಅವುಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ತಿಳಿಸಿದರು. ಕಾರ್ಯಕ್ರಮದಲ್ಲಿ ತಾಲೂಕು ಪಂಚಾಯತ್ ಅಕೌಂಟ್ ಆಫೀಸರ್ ಹರೀಶ್, ಸದ್ದಾಮ್, ಜ್ಯೋತಿ ದೊಡ್ಡಮನಿ, ತಾಲೂಕು ಪಂಚಾಯತ್ ಸಿಬ್ಬಂದಿ ಹಾಗೂ ವಿ.ಬಿ.ಜಿ. ರಾಮ್ ಜಿ ಸಿಬ್ಬಂದಿ ಉಪಸ್ಥಿತರಿದ್ದರು.

# ತೋರಣಾ ಗ್ರಾಮದಲ್ಲಿ ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮ



• **ಮಲ್ಲಮ್ಮ ನುಡಿ ವಾರ್ತೆ ಕಮಲನಗರ**

ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮೀ, ಗೃಹಜ್ಯೋತಿ, ಅನ್ನಭಾಗ್ಯ, ಶಕ್ತಿ, ಯುವನಿಧಿ ಯೋಜನೆಗಳ ಯಶಸ್ವಿ ಅನುಷ್ಠಾನ ಹಾಗೂ ಅವುಗಳ ಪ್ರಗತಿ ಪರಿಶೀಲಿಸುವ ಒಂದು ಅಭಿಯಾನವಾಗಿದೆ. ಇದರ ಮೂಲಕ ಗ್ರಾಮ ಮಟ್ಟದಲ್ಲಿ ಸಾರ್ವಜನಿಕರೊಂದಿಗೆ ಹಾಗೂ ಗ್ಯಾರಂಟಿ ಫಲಾನುಭವಿಗಳೊಂದಿಗೆ ಮುಕ್ತ ಸಂವಾದ ನಡೆಸಿ ಅವರ ಕುಂದು–ಕೊರತೆಗಳನ್ನು ಆಲಿಸಲಾಗುತ್ತದೆ ಎಂದು ಪಂಚ ಗ್ಯಾರಂಟಿ ಯೋಜನೆಯ ಕಾರ್ಯದರ್ಶಿ ಹಾಗೂ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಹಣಮಂತರಾಯ ಕೌಟಗೆ ಅವರು ಹೇಳಿದರು.

ತಾಲೂಕಿನ ತೋರಣಾ ಗ್ರಾಮದಲ್ಲಿ ಬುಧುವಾರ ಜರುಗಿದ 'ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು,

ಗೃಹ ಲಕ್ಷ್ಮೀ ಯೋಜನೆ ಬಗ್ಗೆ ಇರುವ ಊಹಾಪೋಹಗಳಿಗೆ ಹೆದರುವ ಅವಶ್ಯಕತೆ ಇಲ್ಲ. ಯಾವುದೇ ಅಡತಡೆ ಇಲ್ಲದೇ ಈ ಯೋಜನೆ ಜಾರಿಯಲ್ಲಿರುತ್ತದೆ ಎಂದು ಭರವಸೆ ನೀಡಿದರು.

ಈ ಸಂಬಂಧಿತ ಅಹವಾಲುಗಳನ್ನು ಸ್ವೀಕರಿಸಲಾಗುತ್ತದೆ ಎಂದರು. ರಾಜ್ಯ ಸರಕಾರದ ಗೃಹಲಕ್ಷ್ಮಿ ಯೋಜನೆಗೆ 2026 ಜು.19 ರಂದು ಮೂರು ವರ್ಷ ತುಂಬಿರುವ ಹಿನ್ನಲೆಯಲ್ಲಿ ಗೃಹಲಕ್ಷ್ಮಿ ಯೋಜನೆಯನ್ನು ಗ್ರಾಮದ ಜನರಿಗೆ ತಲುಪಿಸುವ ಉದ್ದೇಶದಿಂದ ಗ್ರಾಮ ಪಂಚಾಯತ ಮಟ್ಟದಲ್ಲಿ ಕಾರ್ಯಕ್ರಮದಲ್ಲಿ ನಡೆಸಲಾಯಿತು.

ಗ್ಯಾರಂಟಿ ಯೋಜನೆಗಳ ತಾಲ್ಲೂಕು ಅನುಷ್ಠಾನ ಸಮಿತಿಯ ಆನಂದ ಚವ್ಹಾಣ ಮಾತನಾಡಿ,

ಗ್ರಾಪಂ ಮಟ್ಟದಲ್ಲಿ ಸಾರ್ವಜನಿಕರನ್ನು ಭೇಟಿ ಮಾಡಿ ಗ್ಯಾರಂಟಿ ಯೋಜನೆಗಳ ತಲುಪುವಿಕೆಯಲ್ಲಿರುವ ತೊಂದರೆಗಳ ಬಗ್ಗೆ ಮಾಹಿತಿ ಪಡೆದು ಪರಿಹರಿಸುವಲ್ಲಿ ನಮ್ಮ ಸಮಿತಿ ಯಾವಾಗಲೂ ಸಿದ್ಧವಾಗಿದೆ ಎಂದು ಹೇಳಿದರು.

ಮುಖ್ಯಮಂತ್ರಿಯ ಬದಲಾವಣೆಯಿಂದ ಈ ಯೋಜನೆಗಳಲ್ಲಿ ಯಾವುದೇ ಬದಲಾವಣೆ ಇಲ್ಲ. ಪಂಚ ಗ್ಯಾರಂಟಿ ಯೋಜನೆಯಡಿಯಲ್ಲಿರುವ ಗೃಹಲಕ್ಷ್ಮಿ ಯೋಜನೆಯು 3 ವರ್ಷ ಪೂರೈಯಿಸಿದೆ. ಆದ ಕಾರಣ ಜನರಿಗೆ ಈ ಯೋಜನೆಯ ಮಾಹಿತಿ ಎಲ್ಲರಿಗೂ ತಿಳಿಯಲಿ ಎಂದು ಗ್ರಾಮ ಪಂಚಾಯತಿ ಮಟ್ಟದಲ್ಲಿ ವಾರ್ಷಿಕೋತ್ಸವವನ್ನು ಆಚರಿಸುತ್ತಿದ್ದೇವೆ ಎಂದರು.

ಶಿಶು ಅಭಿವೃದ್ಧಿ ಅಧಿಕಾರಿ ರೂಪಾ ಅವರು ಮಾತನಾಡಿ ಇಲ್ಲಿಯವರೆಗೆ ಗೃಹಲಕ್ಷ್ಮಿ ಯೋಜನೆಯಡಿ ಅರ್ಹರಿರುವ ಮಹಿಳೆಯರ ಖಾತೆಗೆ 30 ಕಂತು ಹಣ ಜಮೆಯಾಗಿವೆ ಎಂದರು. ಇನ್ನು ಮುಂದೆ ಅರ್ಹ ಫಲಾನುಭವಿಗಳ ಸರ್ವೆ ನಡೆಯುತ್ತಿದ್ದು ಅಂತಹ ಫಲಾನುಭವಿಗಳು ಅರ್ಜಿ ಸಲ್ಲಿಸಲು ತಿಳಿಸಿದರು.

ಜೆಸ್ಕಾಂ ಕಾರ್ಯನಿರ್ವಾಹಕ ಸಹಾಯಕ ಅಭಿಯಂತರರಾದ ರವಿ ಅವರು ಮಾತನಾಡಿ ಗೃಹಜ್ಯೋತಿ ಯೋಜನೆ ಬಗ್ಗೆ ಮಾಹಿತಿ ನೀಡಿದರು. ಗೃಹಜ್ಯೋತಿ ಯೋಜನೆಯ ಸದುಪಯೋಗವನ್ನು ಎಲ್ಲರು ಪಡೆದುಕೊಳ್ಳುತ್ತಿದ್ದಾರೆ ಆದ ಕಾರಣ ಅರ್ಹ ಫಲಾನುಭವಿಗಳ ಪರಿಶೀಲನೆ ನಡೆ–ಯುತ್ತಿದ್ದು, ಅರ್ಹವಿಲ್ಲದವರ ಹೆಸರನ್ನು ರದ್ದು ಪಡಿಸಲಾಗುತ್ತಿದೆ. ಆದ ಕಾರಣ ಮನೆಗೆ ಭೇಟಿ ನೀಡುವ ಅಧಿಕಾರಿಗಳಿಗೆ ಸಹಕರಿಸಲು ತಿಳಿಸಿದರು.

ಕೃಷಿ ಇಲಾಖೆಯ ಅಧಿಕಾರಿಯಾದ ಶಿವಾನಂದ ಮಾತನಾಡಿ ಬೆಳೆ ವಿಮೆ ಬಗ್ಗೆ ಮಾಹಿತಿ ನೀಡಿ. ತಪ್ಪದೇ ಎಲ್ಲರು ಬೆಳೆ ವಿಮೆ ಮಾಡಿಕೊಳ್ಳಲು ತಿಳಿಸಿದರು. ಹಾಗೂ ಪಿ.ಎಮ್ ಕಿಸಾನ ಯೋಜನೆ ಬಗ್ಗೆ ಮಾತನಾಡಿ ಜ– ಇಥಿಥಿ ಮಾಡಿಕೊಳ್ಳಲು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಯ ಸಮಿತಿ ಸದಸ್ಯರಾದ ಪ್ರವೀಣ ಜೀರಗೆ, ಪ್ರಶಾಂತ ಪಾಟೀಲ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಶಿರಸ್ತೆದಾರರು, ಎಫ್ ಡಿ ಎ ಮಾರುತಿ, ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ ಮಲ್ಲೇಶ, ಗ್ರಾಮದ ಸದಸ್ಯರಾದ ಪ್ರಕಾಶ ಪಾಟೀಲ, ಬಾಲಾಜಿ ಡೋಂಗರೆ, ಎಬಿಎಫ್ ಸಂಯೋಜಕರಾದ ಅಮರ ಕೋಟೆ, ಎನ್ ಆರ್ ಎಲ್ ಎಮ್ ಜಿಲ್ಲಾ ಸಂಯೋಜಕರಾದ ಅಮೃತಾ, ತಾಲೂಕು ಕಾರ್ಯಕ್ರಮ ವ್ಯವಸ್ಥಾಪಕರಾದ ಕವಿತಾ, ಐಇಸಿ ಸಂಯೋಜಕರಾದ ಸವಿತಾ ನಾಗೇಶ, ಗ್ರಾ.ಪಂ. ಕಾರ್ಯದರ್ಶಿ ಸಂಜು, ಡಿಇಓ ರಾಜು, ಬಿಲ್ ಕಲೆಕ್ಟರ್ ಸಂಜು, ಗ್ರಾ.ಪಂ. ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.



ಚಿಟಗುಪ್ಪ: ತಾಲೂಕಿನ ಚಾಂಗಲೇರಾ ಗ್ರಾಮದಲ್ಲಿರುವ ಸಾರನಾಥ ಬುದ್ಧ ವಿಹಾರ ಲುಂಬಿನಿ ವನದಲ್ಲಿ ಬುದ್ಧನ ಪ್ರತಿಮೆಯನ್ನು ಪೂಜ್ಯ ಬಂತೆ ಶಾಸನ ಸೂರಿ ರವರ ದಿವ್ಯ ಸಾನಿಧ್ಯದಲ್ಲಿ ಪ್ರತಿಷ್ಠಾಪಿಸಲಾಯಿತು. ಈ ಸಂದರ್ಭದಲ್ಲಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಯುವ ಸಂಘದ ಅಧ್ಯಕ್ಷ ಸತೀಶ್ ಸಾಗರ್ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

# ಬೀದರ್ ಬರಪೀಡಿತ ಜಿಲ್ಲೆಯನ್ನಾಗಿ ಘೋಷಿಸಿ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**




ಗಡಿಜಿಲ್ಲೆ ಬೀದರ್‌ನಲ್ಲಿ ಪ್ರಸ್ತುತ ಮುಂಗಾರಿನಲ್ಲಿ ಮಳೆಯ ಕೊರತೆ ಎದುರಾಗಿದ್ದು ರೈತರು ಸಂಕಷ್ಟದಲ್ಲಿದ್ದಾರೆ. ಹಾಗಾಗಿ ರಾಜ್ಯ ಸರಕಾರ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಜಿಲ್ಲೆಯನ್ನು ಬರಪೀಡಿತ ಜಿಲ್ಲೆಯನ್ನಾಗಿ ಘೋಷಿಸಿ ರೈತರ ನೆರವೇರಿಗೆ ಧಾವಿಸಬೇಕು ಎಂದು ತಾಲೂಕು ವಕೀಲರ ಸಂಘ ಒತ್ತಾಯಿಸಿದೆ.

ಈ ಕುರಿತು ನಗರದ ತಹಸೀಲ್ ಕಚೇರಿಯಲ್ಲಿ ತಾಲೂಕು ವಕೀಲರ ಸಂಘದ ಅಧ್ಯಕ್ಷ ಮಹೇಶ ರಾಚೋಟೆ ನೇತೃತ್ವದಲ್ಲಿ ಮಂಗಳವಾರ ತಹಸೀಲ್ದಾರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿದರು.

ತಾಲೂಕು ಸೇರಿ ಜಿಲ್ಲೆಯಲ್ಲಿ ಮುಂಗಾರು ವಾಡಿಕೆಗಿಂತ ಕಡಿಮೆ ಮಳೆ ಸುರಿದಿದ್ದು, ರೈತರ ಕೃಷಿ ಜಮೀನುಗಳು ಸಂಪೂರ್ಣವಾಗಿ ಭಣಗುಡುತ್ತಿವೆ. ನಾಡಿಗೆ ಅನ್ನ ನೀಡುವ ಅನ್ನದಾತ ಇಂದು ಮಳೆಯಿಲ್ಲದೆ, ಬೆಳೆ ಕಳೆದುಕೊಂಡು ದಿಕ್ಕು ತೋಚದಂತಾಗಿದ್ದಾನೆ. ಕಾನೂನಿನ ಚೌಕಟ್ಟಿನಲ್ಲಿ ಸಮಾಜದ ಕಷ್ಟಗಳಿಗೆ ಸ್ಪಂದಿಸುವುದು ನಮ್ಮ ಆದ್ಯ ಕರ್ತವ್ಯ. ರೈತರ ಕಣ್ಣೀರು ಒರೆಸದಿದ್ದರೆ ಈ ಸಮಾಜಕ್ಕೆ ಉಳಿಗಾಲವಿಲ್ಲ. ಕೋರ್ಟ್ ಕಲಾಪಗಳ ಜತೆಗೆ ಅನ್ನದಾತನ ಬದುಕಿನ ಹಕ್ಕಿಗಾಗಿ ಬೀದಿಗಿಳಿದು ಹೋರಾಡಲು ವಕೀಲರ ಸಂಘ ಸದಾ ಸಿದ್ಧವಿದೆ.

ಸರಕಾರ ವಿಳಂಬ ಧೋರಣೆ ತಾಳದೇ ಭಾಲ್ಕಿ ತಾಲೂಕು ಸೇರಿ ಜಿಲ್ಲೆಯನ್ನು ಬರಗಾಲ ಘೋಷಿಸಬೇಕು. ಜತೆಗೆ ರೈತರ ಕೃಷಿ ಸಾಲ ಸಂಪೂರ್ಣವಾಗಿ ಮನ್ನಾ ಮಾಡಬೇಕು, ಹಾನಿಯಾದ ಬೆಳೆಗೆ ಎಕರೆಗೆ ವೈಜ್ಞಾನಿಕ ಪರಿಹಾರ ತಕ್ಷಣವೇ ಬಿಡುಗಡೆ ಮಾಡಬೇಕು ಹಾಗೂ ಕುಡಿಯುವ ನೀರು ಮತ್ತು ಜಾನುವಾರುಗಳಿಗೆ ಮೇವಿನ ಭದ್ರತೆ ಒದಗಿಸಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ವಕೀಲರ ಸಂಘದಿಂದ ಹೋರಾಟವನ್ನು ಇನ್ನಷ್ಟು ತೀವ್ರಗೊಳಿಸಲಾಗುವುದು ಎಂದು ಮನವಿ ಪತ್ರದಲ್ಲಿ ತಿಳಿಸಲಾಗಿದೆ.

ಈ ಸಂದರ್ಭದಲ್ಲಿ ತಾಲೂಕು ವಕೀಲರ ಸಂಘದ ಉಪಾಧ್ಯಕ್ಷ ಮಕರಂದ ಮಾನಕಾರಿ, ಪ್ರಧಾನ ಕಾರ್ಯದರ್ಶಿ ವಾಗೇಶ ಪಾಟೀಲ್, ಜಂಟಿ ಕಾರ್ಯದರ್ಶಿ ನೀಲಕಂಠ ಬಿರಾದಾರ್, ಹಿರಿಯ ನ್ಯಾಯವಾದಿ ರಾಜಶೇಖರ ಅಷ್ಟೂರೆ, ಪ್ರಮುಖರಾದ ನಾಗನಾಥ ಸ್ವಾಮಿ, ಬಾಬುರಾವ ಗಾಮ, ಓಂಪ್ರಕಾಶ ಪಾಟೀಲ, ಅಶೋಕ ಪಾಟೀಲ, ಅನಿಮೇಶ ಆನಂದವಡೆ, ರಾಹುಲ ಸಾವಳೆ, ಸದಾಶಿವ ತುಕದೆ, ಸುಬೋಧ ತಿವಾರಿ, ಆರತಿ ತಿವಾರಿ, ಶಂತನು ಕುಲಕರ್ಣಿ, ರಾಮಕೃಷ್ಣ ಬಿರಾದಾರ, ಶತ್ರುಘ್ನ ನೆಲ್ವಾಡೆ, ಮೇತ್ರೆ, ದೀಪಕ ಮಾಶೆಟ್ಟೆ, ದಯಾನಂದ ಪವಾರ, ಮಹಾಂತೇಶ ಪಾಟೀಲ, ಗುರುನಾಥ ಚಲವ, ಸತೀಶ ಬೋರಳೆ, ನರಹರಿ, ಧನಲಕ್ಮಿ ಬಳತೆ, ನವಾಜ್, ಸಂಜುಕುಮಾರ ಸಲಂಕೆ, ಶಿವಕುಮಾರ ಕೆರೂರು, ಭಾರತ ಪವಾರ, ಶೈಪೋಡಿನ, ಗೌತಮ ಸಿಂಧೆ, ಆನಂದ ಸ್ವಾಮಿ, ದೇವಿಂದ್ರ ಸಿಂಧೆ, ಉತ್ತಮ ಪುರಿ, ಶ್ರೀನಿವಾಸ ಮುದ್ದಾಳೆ, ಮಹೇಶ ಪರಸಣ್ಣೆ, ಸತೀಶ ನಾಯಕ, ಶಿವಪುತ್ರ ದಾಬಶಟ್ಟೆ, ಇಂದ್ರಶೆನ ಬಿರಾದಾರ, ಸಂತೋಷ ನೆಲವಾಡೆ, ವೆಂಕಟ ಉಮಾಜೀ, ಪದ್ಮಾಕರ ಮಲ್ಲೇಶೀ, ನಾಗರಾಜ ಸಿರ್ಸಿ, ಶಿವಕುಮಾರ ಸಂಗೋಳಗಿ, ಯೋಗೀಶ ಬಂಡೆ, ಸಿರಾಜ ಸೇರಿದಂತೆ ಹಲವರು ಇದ್ದರು.

# ಸಮಾನತೆಯ ಕ್ರಾಂತಿಗೆ ಕೈಜೋಡಿಸಿದ ಹಡಪದ ಅಪ್ಪಣ್ಣ:ಶಂಕರಗೌಡ

• **ಮಲ್ಲಮ್ಮ ನುಡಿ ವಾರ್ತೆ ಬಸವನಬಾಗೇವಾಡಿ**



ಹನ್ನೆರಡನೇ ಶತಮಾನದಲ್ಲಿ ಬಸವಣ್ಣನವರ ಆಪ್ತ ಸಹಾಯಕರಾಗಿದ್ದ ಹಡಪದ ಅಪ್ಪಣ್ಣನವರು ಕಾಯಕ, ದಾಸೋಹ, ಸಮಾನತೆ ಮತ್ತು ಮಾನವೀಯ ಮೌಲ್ಯಗಳನ್ನು ತಮ್ಮ ವಚನಗಳ ಮೂಲಕ ಪ್ರತಿಪಾದಿಸುವುದರ ಜೊತೆಗೆ ಬಸವಣ್ಣನವರ ಕ್ರಾಂತಿಯ ಪ್ರಭಾವಕ್ಕೆ ಒಳಗಾಗಿ ಹಡಪದ ಅಪ್ಪಣ್ಣ ಅವರು ಸಹ ಅನುಭವ ಮಂಟಪವನ್ನು ಸೇರಿಕೊಂಡು ಸಾಮಾಜಿಕ ಕ್ರಾಂತಿಗೆ ಧುಮುಕಿದರು ಎಂದು ರಾಷ್ಟ್ರೀಯ ಬಸವಸೈನ್ಯದ ಸಂಸ್ಥಾಪಕ ಅಧ್ಯಕ್ಷ ಶಂಕರಗೌಡ ಬಿರಾದಾರ ,ಹೇಳಿದರು.

ಶಿವಶರಣ ಹಡಪದ ಅಪ್ಪಣ್ಣನವರ ಜಯಂತಿಯನ್ನು ಬಸವನಬಾಗೇವಾಡಿಯ ವೀರ ರಾಣಿ ಚನ್ನಮ್ಮ ವೃತ್ತದಲ್ಲಿ ರಾಷ್ಟ್ರೀಯ ಬಸವಸೈನ್ಯ ಸಂಘಟನೆಯ ವತಿಯಿಂದ ಆಚರಿಸಲಾಯಿತು.

ಹಡಪದ ಅಪ್ಪಣ್ಣನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದ ಅವರು

"ಕಾಯಕವೇ ಕೈಲಾಸ" ಎಂಬ ತತ್ವವನ್ನು ತಮ್ಮ ಜೀವನದಲ್ಲಿ ಅನುಸರಿಸಿದ ಹಡಪದ ಅಪ್ಪಣ್ಣನವರು ಶ್ರಮದ ಗೌರವ ಮತ್ತು ಸಾಮಾಜಿಕ ಸಮಾನತೆಯ ಸಂದೇಶವನ್ನು ನೀಡಿದ್ದರು ಎಂದು ಅವರು ಹೇಳಿದರು.

ಅವರ ವಚನಗಳು ಇಂದಿಗೂ ಪ್ರಸ್ತುತವಾಗಿದ್ದು, ಯುವಜನತೆ ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಅವರು ಮುಂದುವರಿದು ಮಾತನಾಡಿ, ಹಡಪದ ಅಪ್ಪಣ್ಣನವರ ಜನ್ಮಸ್ಥಳ ಮಸಬಿನಾಳ ಗ್ರಾಮದಲ್ಲಿ ಸ್ಮಾರಕ ನಿರ್ಮಾಣಕ್ಕೆ ರಾಜ್ಯ ಸರ್ಕಾರ ಅನುದಾನ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ಹಡಪದ ಸಮಾಜದ ಮುಖಂಡ ಪತ್ರಕರ್ತ ನಾಗೇಶ ನಾಗೂರ ಹಾಗೂ ರಾಷ್ಟ್ರೀಯ ಬಸವಸೈನ್ಯದ ಮುಖಂಡ ಶ್ರೀಕಾಂತ ಕೊಟ್ರಶೆಟ್ಟಿ ಮಾತನಾಡಿ, ಹಡಪದ ಅಪ್ಪಣ್ಣನವರ ವಚನಗಳು ಸಮಾಜದಲ್ಲಿ ಸಮಾನತೆ ಮತ್ತು ಶ್ರಮದ ಗೌರವವನ್ನು ಉತ್ತೇಜಿಸುವಲ್ಲಿ ಪಾತ್ರವಹಿಸಿವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಟ್ಟಿಂಗರಾಯ ಮಾಲಗಾರ, ಪ್ರಶಾಂತ ಮುಂಜಾನೆ, ಸಂಗಮೇಶ ಜಾಲಗೇರಿ, ರಾಷ್ಟ್ರೀಯ ಬಸವಸೈನ್ಯದ ತಾಲೂಕ ಅಧ್ಯಕ್ಷ ಸಂಜು ಬಿರಾದಾರ, ಮುಖಂಡರಾದ ಭದ್ರಣ್ಣ ಮಣ್ಣೂರ, ಆನಂದ ವನರೊಟ್ಟಿ, ಹಡಪದ ಸಮಾಜದ ತಾಲೂಕು ಅಧ್ಯಕ್ಷ ಮಾಂತೇಶ ಹಡಪದ, ಅಪ್ಪು ಗಬ್ಬೂರ, ರಾಜು ಹಡಪದ, ಮುತ್ತಪ್ಪ ಇವಣಗಿ, ಚಂದ್ರಮ ಹಡಪದ, ಮಲ್ಲಿಕಾರ್ಜುನ ಇವಣಗಿ, ಮಾಂತೇಶ ಹೆಬ್ಬಾಳ, ಮಲ್ಲು ಬನಾಸಿ, ಪ್ರಲ್ಹಾದ ಹಡಪದ ಮಹಾದೇವ ನಾಯ್ಕೋಡಿ, ಸೇರಿದಂತೆ ಸಮಾಜದ ಸದಸ್ಯರು, ಸಂಘಟನೆಗಳ ಪದಾಧಿಕಾರಿಗಳು ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ಹಡಪದ ಅಪ್ಪಣ್ಣನವರ ವಚನಗಳು ಮನುಕುಲಕ್ಕೆ ದಾರಿದೀಪ: ಡಾ. ಹಿರಸ್ಕರ್

• **ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ**



ಅವಿರಳ ಜ್ಞಾನಿ ಹಡಪದ ಅಪ್ಪಣ್ಣನವರು ಬಸವಣ್ಣನವರ ಅನುಯಾಯಿಯಾಗಿ ಸಾಮಾಜಿಕ ತಾರತಮ್ಯ, ಮೌಢ್ಯಗಳನ್ನು ತೊಡೆಯಲು ತಮ್ಮ ಜೀವನವೇ ಮುಡಿಪಾಗಿಟ್ಟಿದ್ದಾರೆ. ಅವರ ವಚನಗಳು ಹಾಗೂ ಚಿಂತನೆಗಳು ಮನುಕುಲದ ಉದ್ಧಾರಕ್ಕೆ ದಾರಿ ದೀಪಗಳಾವೆ ಎಂದು ಪಟ್ಟಣದ ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಬುಧವಾರ ಹಡಪದ ಅಪ್ಪಣ್ಣನವರ 892ನೆಯ ಜಯಂತಿ ಅಂಗವಾಗಿ ಅಪ್ಪಣ್ಣನವರ ಭಾವಚಿತ್ರಕ್ಕೆ ಆಡಳಿತ ವೈದ್ಯಾಧಿಕಾರಿ ಡಾ. ವಿಜಯ ಹಿರಸ್ಕರ್ ಪೂಜೆ ಸಲ್ಲಿಸಿ ಮಾತನಾಡುತ್ತ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಡಾ. ನಾಗೇಶ್, ಡಾ. ಶಿಲ್ಪರಾಣಿ, ಡಾ. ಪ್ರೀತಿ ವಾಲಿ, ಡಾ. ನಜೀಮಾ ಪಟೇಲ್, ಸಿಬ್ಬಂದಿಗಳಾದ, ಗೀತಾ ತುಳಾಜೆ, ಸ್ನೇಹಾ, ಸುಮಾ, ವಂದನಾ, ಫೌಜಿಯ, ಲಿಂಗರಾಜ, ಪ್ರಭು ಮುದ್ನಾಳಕರ್, ದೇವೇಂದ್ರನಾಗೇನಕೇರಾ, ಪ್ರಶಾಂತ, ಶಿವರಾಜ ಮುಸ್ತಾಪುರ, ಸುನೀಲ ಮಾನೆ, ದಿವಾಕರ, ಜಿಬೇಶ್, ಅಫರೆಡಿ, ಸುರೇಶಕುಮಾರ್, ಸಿದ್ಧಲಿಂಗ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಶಿವಶರಣ ಹಡಪದ ಅಪ್ಪಣ್ಣನವರ 892ನೇ ಜಯಂತಿ ಆಚರಣೆ

• **ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ**



ಶಿವಶರಣ ಹಡಪದ ಅಪ್ಪಣ್ಣನವರು 12ನೇ ಶತಮಾನದಲ್ಲಿ ಆದ್ಯವಚನಕಾರರಾಗಿ, ಪ್ರಮುಖವಾದ ವಚನಗಳ ಮುಖಾಂತರ ಮಹತ್ತರ ಬದಲಾವಣೆಗೆ ಮುನ್ನುಡಿ ಬರೆದ ಮಹನೀಯರೆಂದು ಎಂದು ಪುರಸಭೆಯ ವ್ಯವಸ್ಥಾಪಕಿ ವಾಣಿ ಕುಲಕರ್ಣಿ ಹೇಳಿದರು. ಪಟ್ಟಣದ ಪುರಸಭೆಯಲ್ಲಿ ಶಿವ ಶರಣ ಹಡಪದ ಅಪ್ಪಣ್ಣನವರ 892ನೇ ಜಯಂತಿ ಅಂಗವಾಗಿ ಅಪ್ಪಣ್ಣನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಬಸವಣ್ಣನವರು 12ನೇ ಶತಮಾನದಲ್ಲಿ ನೂರಾರು ಶರಣರನ್ನು ಒಂದು ಕಡೆ ಸೇರಿಸಿ ಕಾಯಕ ವೃತ್ತಿಯನ್ನು ಪ್ರಾರಂಭಿಸಿದರು. ಯಾರು ಕಾಯಕವನ್ನು ಮಾಡುತ್ತಾರೋ ಅಲ್ಲಿ ನಿರುದ್ಯೋಗದ ಸಮಸ್ಯೆ ಇರುವುದಿಲ್ಲ, ಪ್ರತಿಯೊಬ್ಬರೂ ಕೂಡ ಅವರವರ ಕಾಯಕದಲ್ಲಿ ತೊಡಗಿಕೊಂಡರೆ ನಿರುದ್ಯೋಗವನ್ನು ತೊಲಗಿಸಬಹುದು. ನಿಜಶರಣ ಹಡಪದ ಅಪ್ಪಣ್ಣ ಅವರು ರಚಿಸಿದ್ದ ವಚನಗಳು ಸಮಾಜಕ್ಕೆ ದಾರಿದೀಪವಾಗಿವೆ ಎಂದರು. ಈ ಸಂದರ್ಭದಲ್ಲಿ ಕಂದಾಯ ಅಧಿಕಾರಿ ವಿಜಯಕುಮಾರ್, ಆರೋಗ್ಯ ಹಿರಿಯ ನಿರೀಕ್ಷಕ ರವಿಕುಮಾರ್ ಸ್ವಾಮಿ, ದ್ವಿತೀಯ ದರ್ಜೆ ಸಹಾಯಕಿ ಕವಿತಾ, ಸರೋಜನಿ, ಮಲ್ಲಮ್ಮಾ, ಆನಂದ, ಸಚಿನ ಡಾಂಗೆ, ಸತೀಷ, ರಾಜು ತೆಲಂಗ, ರವಿಭಯ್ಯಾ, ಇಲಾಹಿ, ಬಕ್ಕಣ್ಣ, ಹಡಪದ ಸಮಾಜದ ಅಧ್ಯಕ್ಷ ರಾಜಕುಮಾರ ಆರ್. ಹಡಪದ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಹಡಪದ ಅಪ್ಪಣ್ಣನವರು ಪ್ರಾಮಾಣಿಕ ಕಾಯಕದ ಮಹತ್ವವನ್ನು ತೋರಿಸಿಕೊಟ್ಟ ಶರಣ: ಪ್ರತಿಭಾ

• **ಮಲ್ಲಮ್ಮ ನುಡಿ ವಾರ್ತೆ ಕೊಟ್ಟೂರು**



ಕೊಟ್ಟೂರು ತಾಲೂಕು ಕಛೇ–ರಿಯ ಮಹಾತ್ಮ ಗಾಂಧೀಜಿ ಸಭಾಂಗಣದಲ್ಲಿ ಇಂದು ಶಿವಶರಣ ಹಡಪದ ಅಪ್ಪಣ್ಣನವರ ಜಯಂತಿ ಕಾರ್ಯಕ್ರಮವನ್ನು ಆಚರಿಸಲಾಯಿತು. ಗ್ರೇಡ್–2 ತಹಶೀಲ್ದಾರರಾದ ಎಂ ಪ್ರತಿಭಾ ಇವರು ಅಪ್ಪಣ್ಣನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುತ್ತಾ, 12ನೇ ಶತಮಾನದ ಸಾಮಾಜಿಕ ಕ್ರಾಂತಿಯ ಗುರುತಾಗಿದ್ದ ಅನುಭವ ಮಂಟಪದ ರುವಾರಿ ವಿಶ್ವಗುರು ಬಸವಣ್ಣನವರ ಆಪ್ತ ಕಾರ್ಯದರ್ಶಿಯಾಗಿದ್ದ ಅಪ್ಪಣ್ಣನವರು ಪ್ರಮುಖ ಶರಣರಾಗಿದ್ದು, ಪ್ರಾಮಾಣಿಕ ಕಾಯಕ ಮತ್ತು ದಾಸೋಹದ ಮಹತ್ವದ ಬಗ್ಗೆ ತಮ್ಮ ವಚನಗಳ ಮೂಲಕ ತಿಳಿಸಿದ್ದಾರೆ. ಸುಮಾರು 250 ವಚನಗಳು ಲಭ್ಯವಿದ್ದು, ಇವರ ಪತ್ನಿ ಲಿಂಗಮ್ಮನು ಸಹಾ ವಚನಗಳನ್ನು ರಚಿಸಿದ್ದಾರೆ.

ಅಂದು ಸಮಾಜದಲ್ಲಿದ್ದ ಮೂಢ ನಂಬಿಕೆಯನ್ನು ಹೋಗಲಾಡಿಸಲು ಬಸವಣ್ಣನವರು ತಮ್ಮನ್ನು ಭೇಟಿಯಾಗಲು ಯಾರಾದರೂ ಬಂದರೆ ಮೊದಲು ಅಪ್ಪಣ್ಣನನ್ನು ನೋಡಿಕೊಂಡು ಬರುವಂತೆ ತಿಳಿಸುತ್ತಿದ್ದರು. ಒಬ್ಬ ಕಾರ್ಯದರ್ಶಿ ಹೇಗಿರಬೇಕೆನ್ನುವುದಕ್ಕೆ ಅಪ್ಪಣ್ಣನವರು ಉದಾಹರಣೆಯಾಗಿದ್ದರು. ಇಂತಹ ಶಿವ ಶರಣರು ತಮ್ಮ ಬದುಕಿನ ಮೂಲಕ, ವಚನಗಳ ಮೂಲಕ ಸಮಾಜಕ್ಕೆ ನೀಡಿದ ಸಂದೇಶಗಳನ್ನು ನಾವು ಪಾಲಿಸಿಕೊಂಡು ಹೋಗಬೇಕು ಎಂದರು. ಕಾರ್ಯಕ್ರಮದಲ್ಲಿ ಹಡಪದ ಸಮಾಜದ ಮುಖಂಡರಾದ ಅಪ್ಪಾಜಿ, ಗುರುಬಸವರಾಜ, ವಿಕ್ರಮ, ಚನ್ನಪ್ಪ, ನಾಗರಾಜ, ಬಸವರಾಜ, ಅಜ್ಜಯ್ಯ, ರವಿ ಕುಮಾರ ಇಸಿಓ ಸಿ ನಿಂಗಪ್ಪ, ಗ್ರಾಮ ಆಡಳಿತ ಅಧಿಕಾರಿ ಹರೀಶ ಮುಂತಾದವರು ಇದ್ದರು. ಸಿ ಮ ಗುರುಬಸವರಾಜ ಸ್ವಾಗತಿಸಿ ನಿರೂಪಿಸಿದರು.

# ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಬಿಟ್ಟು ಹೋಗದಿರಲಿ: ಶಾಸಕ ಪ್ರಭು ಚವ್ಹಾಣ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಸಂವಿಧಾನಾತ್ಮಕವಾಗಿ ನಮಗೆ ಸಿಕ್ಕಿರುವ ಮತದಾನದ ಹಕ್ಕಿನ ರಕ್ಷಣೆಗೆ ಪ್ರತಿಯೊಬ್ಬ ಅರ್ಹ ಮತದಾರರೂ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕೆಂದು ಶಾಸಕ ಪ್ರಭು ಬಿ. ಚವ್ಹಾಣ ಅವರು ಮನವಿ ಮಾಡಿದರು.

ಮಂಗಳವಾರ ರಂದು ತಾಲೂಕಿನ ತೋರ್ಣಾವಾಡಿ, ತೋರ್ಣಾ, ಹೊಳಸಮುದ್ರ, ಸಾವಳಿ, ಬಸನಾಳ, ಕೋರಿಯಾಳ, ಮುಧೋಳ(ಕೆ), ತಪಸ್ಯಾಳ, ಚಾಂದೋರಿ, ಹಾಲಳ್ಳಿ, ಬಳತ(ಬಿ), ಬಳತ(ಕೆ), ಠಾಣಾ ಕುಶನೂರ, ನಿಡೋದಾ, ಬೇಡಕುಂದಾ, ಲಕ್ಷ್ಮೀನಗರ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಸಂಚರಿಸಿ ಎಸ್‌ಐಆರ್ ಕುರಿತು ಜನಜಾಗೃತಿ ಮೂಡಿಸಿದರು.

ಮತದಾರರೊಂದಿಗೆ ಸಂವಾದ ನಡೆಸಿ, ಎನ್ಯುಮರೇಷನ್ ಫಾರ್ಮ್ ಭರ್ತಿ ಮಾಡಿ ಸಲ್ಲಿಸಿರುವ ಬಗ್ಗೆ ತಿಳಿದುಕೊಂಡರು. ಕೆಲವರು ಇನ್ನು ಸಲ್ಲಿಸದಿರುವುದು ಗೊತ್ತಾದಾಗ ಏಕೆ ವಿಳಂಬ ಮಾಡುತ್ತಿದ್ದೀರೆಂದು ಬೇಸರ ವ್ಯಕ್ತಪಡಿಸಿದರು.

ಚುನಾವಣಾ ಆಯೋಗವು ಮತದಾರರ ಪಟ್ಟಿಯ ಶುದ್ಧೀಕರಣಕ್ಕೆ ಮುಂದಾಗಿದೆ. ನಕಲಿ ಅಥವಾ ಅನರ್ಹ ಮತದಾರರನ್ನು ತೆಗೆದು ಅರ್ಹ ಮತದಾರರನ್ನು ಉಳಿಸಿ ಚುನಾವಣಾ ವ್ಯವಸ್ಥೆಯನ್ನು ಮತ್ತಷ್ಟು ಪಾರದರ್ಶಕವಾಗಿಸುವ ಸದುದ್ದೇಶ ಹೊಂದಲಾಗಿದೆ. ನಿರ್ಲಕ್ಷ್ಯ ವಹಿಸಿದರೆ ಅರ್ಹ ಮತದಾರರು ಪಟ್ಟಿಯಿಂದ ವಂಚಿತರಾಗಬಹುದು. ಹಾಗಾಗಿ ಎಸ್‌ಐಆರ್ ಪ್ರಕ್ರಿಯೆಯನ್ನು ಯಾರೊಬ್ಬರೂ ನಿರ್ಲಕ್ಷ್ಯ ವಹಿಸಬಾರದು ಎಂದು ಹೇಳಿದರು.

ಈಗಾಗಲೇ ಎಲ್ಲ ಅರ್ಹರ ಮನೆಗಳಿಗೆ ಎನ್ಯುಮರೇಷನ್ ಫಾರ್ಮ್‌ಗಳನ್ನು ತಲುಪಿಸಲಾಗಿದೆ. ಇವುಗಳನ್ನು ಸರಿಯಾಗಿ ಭರ್ತಿ ಮಾಡಿ ನಿಗದಿತ ಅವಧಿಯೊಳಗೆ ಬೂತ್ ಮಟ್ಟದ ಅಧಿಕಾರಿಗಳಿಗೆ ಸಲ್ಲಿಸಬೇಕು. ಏನಾದರೂ ಗೊಂದಲಗಳಿದ್ದರೆ ಬಿಎಲ್‌ಒ ಅಥವಾ ಪಕ್ಷದ ಕಾರ್ಯಕರ್ತರ ಸಹಾಯ ಪಡೆಯಬಹುದೆಂದು ತಿಳಿಸಿದರು.

ಮುಖಂಡರಾದ ಸುರೇಶ ಭೋಸ್ಲೆ, ಶಿವರಾಜ ಅಲ್ಮಾಜೆ, ರಾಮಶೆಟ್ಟಿ ಪನ್ನಾಳೆ, ಅರಹಂತ ಸಾವಳೆ, ಖಂಡೋಬಾ ಕಂಗಟೆ, ಮಲ್ಲಪ್ಪ ದಾನಾ, ಪ್ರವೀಣ ಕಾರಬಾರಿ, ಉದಯ ಸೋಲಾಪೂರೆ, ಇನಿಲ್ ಹೊಳಸಮುದ್ರೆ, ಬಾಬುರಾವ ವಾಗ್ಮಾರೆ, ಶಿವಕುಮಾರ ಸಜ್ಜನಶೆಟ್ಟಿ, ಪ್ರಭುರಾವ ಜೀರ್ಗೆ, ಲಕ್ಷ್ಮಣ ಗಾದಗೆ, ಮಾಣಿಕರಾವ ರಂಡೆ, ಧನರಾಜ ಬಾವಗೆ, ಶಿವಾನಂದ ಸಾವಳೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ನೀಟ್ ಅಕ್ರಮ ಖಂಡಿಸಿ ಬಳ್ಳಾರಿಯಲ್ಲಿ ಯುವ ಕಾಂಗ್ರೆಸ್‌ನಿಂದ ಪಂಜಿನ ಮೆರವಣಿಗೆ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನೀಟ್ (NEET) ಪರೀಕ್ಷೆಗೆ ಸಂಬಂಧಿಸಿದಂತೆ ದೇಶಾದ್ಯಂತ ಕೇಳಿಬಂದಿರುವ ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಅಕ್ರಮಗಳನ್ನು ಖಂಡಿಸಿ, ಮೃತಪಟ್ಟ ವಿದ್ಯಾರ್ಥಿಗಳಿಗೆ ಶ್ರದ್ಧಾಂಜಲಿ ಸಲ್ಲಿಸುವುದರ ಜೊತೆಗೆ ವಿದ್ಯಾರ್ಥಿಗಳ ಮೇಲಿನ ಅಮಾನುಷ ಹಲ್ಲೆಗಳನ್ನು ವಿರೋಧಿಸಿ, ಮೃತ ವಿದ್ಯಾರ್ಥಿಗಳ ಕುಟುಂಬಗಳಿಗೆ ಕೇಂದ್ರ ಸರ್ಕಾರ ಸೂಕ್ತ ಪರಿಹಾರ ಘೋಷಿಸಬೇಕು ಎಂದು ಆಗ್ರಹಿಸಿ ಬಳ್ಳಾರಿ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ವತಿಯಿಂದ ಮಂಗಳವಾರ ಸಂಜೆ ಸಾಂಕೇತಿಕ ಹಾಗೂ ಶಾಂತಿಯುತ ಪಂಜಿನ ಮೆರವಣಿಗೆ ನಡೆಸಲಾಯಿತು. ಮಹಾತ್ಮ ಗಾಂಧೀಜಿ ಅವರ ಪ್ರತಿಮೆಯಿಂದ ಗಡಿಗಿ ಚೆನ್ನಪ್ಪ (ರಾಯಲ್ ಸರ್ಕಲ್) ವೃತ್ತದವರೆಗೆ ನಡೆದ ಮೆರವಣಿಗೆಯಲ್ಲಿ ಬಳ್ಳಾರಿ ಜಿಲ್ಲೆಯ ಎಐಸಿಸಿ ವೀಕ್ಷಕರಾಗಿರುವ ಎಐಸಿಸಿ ಅಲ್ಪಸಂಖ್ಯಾತರ ಘಟಕದ ಮಾಜಿ ಅಧ್ಯಕ್ಷರು ಹಾಗೂ ಅಖಿಲ ಭಾರತ ಎನ್‌ಎಸ್‌ಯುಐ ಮಾಜಿ ಅಧ್ಯಕ್ಷರಾದ ಶ್ರೀ ನದೀಮ್ ಜಾವಿದ್ ಅವರು ಮಾತನಾಡಿ, ನೀಟ್ ಪರೀಕ್ಷೆಗೆ ಸಂಬಂಧಿಸಿದಂತೆ ದೇಶಾದ್ಯಂತ ಕೇಳಿಬಂದಿರುವ ಅಕ್ರಮಗಳು ಹಾಗೂ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳ ಕುರಿತು ಕೇಂದ್ರ ಸರ್ಕಾರ ನ್ಯಾಯಸಮ್ಮತ, ಪಾರದರ್ಶಕ ಮತ್ತು ಸಮಗ್ರ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು. ನೀಟ್ ಪರೀಕ್ಷೆಯಲ್ಲಿನ ಅಕ್ರಮಗಳಿಂದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ ಅನಿಶ್ಚಿತತೆಗೆ ಸಿಲುಕಿದ್ದು, ವಿದ್ಯಾರ್ಥಿಗಳಲ್ಲಿ ಆತಂಕ ಮತ್ತು ನಿರಾಸೆ ಮನೆ ಮಾಡಿದೆ. ಇಂತಹ ಗಂಭೀರ ಪ್ರಕರಣಗಳನ್ನು ಸರ್ಕಾರ ನಿರ್ಲಕ್ಷಿಸದೆ ಸತ್ಯಾಂಶವನ್ನು ಬಹಿರಂಗಪಡಿಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು. ಕಾರ್ಯಕ್ರಮದಲ್ಲಿ ಕೆಪಿಸಿಸಿ ಜಿಲ್ಲಾ ವೀಕ್ಷಕರಾದ ಮಾಜಿ ಸಚಿವ ಮಲ್ಲಿಕಾರ್ಜುನ ನಾಗಪ್ಪ, ಕೆಪಿಸಿಸಿ ಉಪಾಧ್ಯಕ್ಷ ಎ.ಆರ್.ಎಂ. ಹುಸೇನ್, ಕೆಪಿಸಿಸಿ ವಕ್ತಾರೆ ಶೈಲಜಾ ಹಿರೇಮಠ್, ರಾಜಶೇಖರ್, ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಅಲ್ಲಂ ಪ್ರಶಾಂತ್, ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಆಂಜಿನೇಯಲು, ಮಹಾಪೌರ ಪಿ. ಗಾದೆಪ್ಪ, ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಶ್ರೀಕಾಂತ್, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಮಂಜುಳ, ಜಿಲ್ಲಾ ಕಾಂಗ್ರೆಸ್ ಸಮಿತಿ, ಯುವ ಕಾಂಗ್ರೆಸ್ ಹಾಗೂ ಮಹಿಳಾ ಕಾಂಗ್ರೆಸ್‌ನ ಪದಾಧಿಕಾರಿಗಳು ಮತ್ತು ಪಕ್ಷದ ಕಾರ್ಯಕರ್ತರು ಭಾಗವಹಿಸಿದ್ದರು.

# ವಿಬಿಜಿ ರಾಮ್ ಜಿ ಯೋಜನೆ ಗೊಂದಲ ಸ್ಪಷ್ಟನೆಗೆ ಒತ್ತಾಯಿಸಿ ಪಿಡಿಒಗಳಿಂದ ಮನವಿ



• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಜು.29:'ವಿಬಿಜಿ ರಾಮ್ ಜಿ' ಯೋಜನೆಯಡಿ ಕೈಗೊಳ್ಳಬೇಕಾದ ಗ್ರಾಮೀಣಾಭಿವೃದ್ಧಿ ಕಾಮಗಾರಿಗಳ ನಿಯಮಾವಳಿಗಳಲ್ಲಿ ಸ್ಪಷ್ಟತೆ ಇಲ್ಲದಿರುವುದರಿಂದ ಉಂಟಾಗಿರುವ ಆಡಳಿತಾತ್ಮಕ ತೊಡಕು ಹಾಗೂ ಗೊಂದಲಗಳನ್ನು ಕೂಡಲೇ ನಿವಾರಿಸಬೇಕೆಂದು ಒತ್ತಾಯಿಸಿ, ಕರ್ನಾಟಕ ರಾಜ್ಯ ಪಿಡಿಒ 'ಬಿ' ಗ್ರೇಡ್ ಹುದ್ದೆ ಉನ್ನತೀಕರಣ ಸಂಘದ (ರಿ.) ಸಿಂಧನೂರು ತಾಲ್ಲೂಕು ಘಟಕದ ವತಿಯಿಂದ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು. ಪ್ರಸ್ತುತ ಜಾರಿಯಲ್ಲಿರುವ ಯೋಜನೆಯಡಿ ಸಾರ್ವಜನಿಕ ಹಿತದೃಷ್ಟಿಯಿಂದ ಕೈಗೊಳ್ಳಬೇಕಾದ ಪ್ರಮುಖ ಕಾಮಗಾರಿಗಳ ನಿಯಮಗಳ ಬಗ್ಗೆ ಸ್ಪಷ್ಟತೆ ಇಲ್ಲದಿರುವುದರಿಂದ ಪಿಡಿಒಗಳಿಗೆ ಕೆಲಸ ಆರಂಭಿಸಲು ಗೊಂದಲ ಉಂಟಾಗಿದೆ. ಕೆರೆ, ನಾಲಾ ಮತ್ತು ಕಾಲುವೆಗಳ ಹೂಳೆತ್ತುವ ಕಾಮಗಾರಿಗಳು ಅನುಮೋದಿತ ಪಟ್ಟಿಗೆ ಒಳಪಡುತ್ತವೆಯೇ ಎಂಬುದನ್ನು ಸ್ಪಷ್ಟಪಡಿಸಿ, ತಾಲ್ಲೂಕು ಪಂಚಾಯತಿಯಿಂದ ಅಧಿಕೃತ ಸಮ್ಮತಿ ನೀಡಬೇಕು.

# ದೇವಸ್ಥಾನಗಳ ಹುಂಡಿಗೆ 360 ಡಿಗ್ರಿ ಸಿಸಿಟಿವಿ ಭದ್ರತೆ: ಎಡಿಸಿ ಝುಬೇರ್ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಜಿಲ್ಲೆಯ ಎಲ್ಲ ದೇವಾಲಯಗಳ ಭಕ್ತರ ಕಾಣಿಕೆ ಹುಂಡಿಗಳಿಗೆ ಸೂಕ್ತ ಭದ್ರತೆ ಒದಗಿಸಿ, 360 ಡಿಗ್ರಿ ಸಿಸಿಟಿವಿ ನಿಗಾ ವ್ಯವಸ್ಥೆ ಅಳವಡಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಎನ್. ಅಧಿಕಾರಿಗಳಿಗೆ ಸೂಚನೆ ನೀಡಿದರು.

ದೇವಸ್ಥಾನಗಳ ಹುಂಡಿ ಭದ್ರತೆ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯ 713 ದೇವಾಲಯಗಳಲ್ಲಿ ಈಗಾಗಲೇ 354 ದೇವಾಲಯಗಳ ಮಾನಿಟರಿಂಗ್ ಪೂರ್ಣಗೊಂಡಿದ್ದು, ಉಳಿದ ದೇವಾಲಯಗಳಲ್ಲೂ ಶೀಘ್ರವೇ ನಿಗಾ ವ್ಯವಸ್ಥೆ ಅಳವಡಿಸಬೇಕು ಎಂದರು.

ಹುಂಡಿ ಎಣಿಕೆ ಕಾರ್ಯವು ಸಂಪೂರ್ಣ ಸಿಸಿಟಿವಿ ಕಣ್ಗಾವಲಿನಲ್ಲಿ ನಡೆಯಬೇಕು. ಕಳ್ಳತನ ಹಾಗೂ ಇತರೆ ಅಕ್ರಮಗಳನ್ನು ತಡೆಯಲು ಡಿಜಿಟಲ್ ರೂಪದಲ್ಲಿ ಕಾಣಿಕೆ ಸ್ವೀಕರಿಸುವ ವ್ಯವಸ್ಥೆ ಕಲ್ಪಿಸುವ ಮೂಲಕ ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಬಳ್ಳಾರಿಯ ಪ್ರಸಿದ್ಧ ಕನಕದುರ್ಗಮ್ಮ ದೇವಸ್ಥಾನದಲ್ಲಿ ಸಿಸಿಟಿವಿ ಮಾನಿಟರಿಂಗ್ ಕಾಮಗಾರಿ ಏಳು ದಿನಗಳೊಳಗೆ ಪೂರ್ಣಗೊಳಿಸುವಂತೆ ಸೂಚಿಸಿದ ಅವರು, ದೇವಾಲಯಗಳ ಸೂಕ್ತ ಸ್ಥಳಗಳಲ್ಲಿ ಎಲ್ಲರಿಗೂ ಗೋಚರಿಸುವ ರೀತಿಯಲ್ಲಿ ಹುಂಡಿಗಳನ್ನು ಅಳವಡಿಸಿ ಭದ್ರತೆ ಹೆಚ್ಚಿಸಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ 5 ಎ ವರ್ಗ, 5 ಬಿ ವರ್ಗ ಹಾಗೂ 703 ಸಿ ವರ್ಗ ಸೇರಿ ಒಟ್ಟು 713 ದೇವಾಲಯಗಳಿದ್ದು, ಎಲ್ಲೆಡೆ ಭದ್ರತಾ ವ್ಯವಸ್ಥೆ ಬಲಪಡಿಸಬೇಕೆಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ದೇವಸ್ಥಾನದ ಹುಂಡಿ ಎಣಿಕೆ ಕಾರ್ಯದಲ್ಲಿ ಸರ್ಕಾರಿ ನೌಕರರಿಗೆ ಮಾತ್ರ ಅವಕಾಶ ನೀಡಬೇಕು, ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿ ರಚಿಸಬೇಕು ಹಾಗೂ ಪ್ರತಿ 15 ದಿನಗಳಿಗೊಮ್ಮೆ ಸಂಬಂಧಿತ ಅಧಿಕಾರಿಗಳು ದೇವಾಲಯಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ಸೂಚಿಸಲಾಯಿತು. ಹುಂಡಿ ಎಣಿಕೆ ವೇಳೆ ಕಳ್ಳತನದಂತಹ ಪ್ರಕರಣಗಳು ಕಂಡುಬಂದರೆ ಸಂಬಂಧಿತ ದೇವಾಲಯ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಪರಿಗಣಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಎಚ್ಚರಿಸಿದರು.

# ಸಾರ್ವಜನಿಕರು ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವಂತೆ ಕರೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ವಿಶ್ವ ಮೆದುಳು ದಿನಾಚರಣೆ ಅಂಗವಾಗಿ ಕರ್ನಾಟಕ ಮೆದುಳಿನ ಆರೋಗ್ಯ ಉಪಕ್ರಮ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್, ಬಳ್ಳಾರಿ ಇವರ ಸಂಯುಕ್ತ ಆಶ್ರಯದಲ್ಲಿ ನಗರದ 7ನೇ ವಾರ್ಡ್‌ನ ಬಾಪೂಜಿನಗರ ಸಮುದಾಯ ಭವನದಲ್ಲಿ ಸಾರ್ವಜನಿಕರಿಗಾಗಿ ಉಚಿತ ಆರೋಗ್ಯ ಶಿಬಿರವನ್ನು ಆಯೋಜಿಸಲಾಯಿತು.

"ಮೆದುಳಿನ ಆರೋಗ್ಯ ಎಲ್ಲರಿಗೂ ಲಭ್ಯ" ಎಂಬ ಘೋಷವಾಕ್ಯ ಹಾಗೂ ವಿಶ್ವ ಮೆದುಳು ದಿನದ ಈ ವರ್ಷದ ವಿಷಯವನ್ನು ಕೇಂದ್ರವಾಗಿಟ್ಟುಕೊಂಡು ನಡೆದ ಕಾರ್ಯಕ್ರಮದಲ್ಲಿ 7ನೇ ವಾರ್ಡ್ ಮಹಾನಗರ ಪಾಲಿಕೆ ಸದಸ್ಯೆ ಉಮಾದೇವಿ ಶಿವರಾಜ್ ಅಧ್ಯಕ್ಷತೆ ವಹಿಸಿ ಶಿಬಿರಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಉಮಾದೇವಿ ಶಿವರಾಜ್, ಉಚಿತ ಆರೋಗ್ಯ ಶಿಬಿರಗಳು ಸಮಾಜದ ಎಲ್ಲ ವರ್ಗದ ಜನರಿಗೆ ಆರೋಗ್ಯ ಸೇವೆಗಳನ್ನು ಸುಲಭವಾಗಿ ತಲುಪಿಸುವ ಮಹತ್ವದ ವೇದಿಕೆಯಾಗಿವೆ ಎಂದು ಹೇಳಿದರು. ಇಂತಹ ಶಿಬಿರಗಳ ಮೂಲಕ ಜನರು ಆರಂಭಿಕ ಹಂತದಲ್ಲೇ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುದರಿಂದ ಅನೇಕ ಗಂಭೀರ ಕಾಯಿಲೆಗಳನ್ನು ಮುನ್ನೆಚ್ಚರಿಕೆಯಿಂದ ಪತ್ತೆಹಚ್ಚಿ ಸೂಕ್ತ ಚಿಕಿತ್ಸೆ ಪಡೆಯಲು ಸಾಧ್ಯವಾಗುತ್ತದೆ ಎಂದರು.

ವಿಶೇಷವಾಗಿ ಮೆದುಳಿನ ಆರೋಗ್ಯದ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಇಂದಿನ ಅಗತ್ಯವಾಗಿದೆ. ಆರೋಗ್ಯಕರ ಜೀವನಶೈಲಿ, ಸಮತೋಲನ ಆಹಾರ, ನಿಯಮಿತ ವ್ಯಾಯಾಮ, ಮಾನಸಿಕ ಒತ್ತಡ ನಿಯಂತ್ರಣ ಹಾಗೂ ಸಮಯೋಚಿತ ವೈದ್ಯಕೀಯ ತಪಾಸಣೆಯಿಂದ ಮೆದುಳಿನ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು ಎಂದು ಅವರು ತಿಳಿಸಿದರು.

ಶಿಬಿರದಲ್ಲಿ ಸಾರ್ವಜನಿಕರಿಗೆ ಉಚಿತ ಆರೋಗ್ಯ ತಪಾಸಣೆ, ವೈದ್ಯರ ಸಲಹೆ, ರಕ್ತದೊತ್ತಡ ಹಾಗೂ ಮಧುಮೇಹ ಪರೀಕ್ಷೆ ಸೇರಿದಂತೆ ವಿವಿಧ ಆರೋಗ್ಯ ಸೇವೆಗಳನ್ನು ಒದಗಿಸಲಾಯಿತು. ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆ ಅಧಿಕಾರಿಗಳು, ವೈದ್ಯರು, ಆಶಾ ಕಾರ್ಯಕರ್ತೆಯರು, ಆರೋಗ್ಯ ಸಿಬ್ಬಂದಿ ಹಾಗೂ ವಾರ್ಡ್‌ನ ನೂರಾರು ಸಾರ್ವಜನಿಕರು ಭಾಗವಹಿಸಿ ಶಿಬಿರದ ಸದುಪಯೋಗ ಪಡೆದುಕೊಂಡರು.

ಆಯೋಜಕರು ಇಂತಹ ಆರೋಗ್ಯ ಶಿಬಿರಗಳು ಸಾರ್ವಜನಿಕರಲ್ಲಿ ಆರೋಗ್ಯ ಜಾಗೃತಿ ಮೂಡಿಸುವ ಜೊತೆಗೆ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಸಹಕಾರಿಯಾಗಲಿವೆ ಎಂದು ಅಭಿಪ್ರಾಯಪಟ್ಟರು.

# ಸಮಾನತೆ, ಮಾನವೀಯತೆಯ ಸಂದೇಶ ಇಂದಿಗೂ ಪ್ರಸ್ತುತ: ಚಿದಾನಂದಪ್ಪ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಶಿವಶರಣ ಹಡಪದ ಅಪ್ಪಣ್ಣ ಅವರು ತಮ್ಮ ವಚನಗಳ ಮೂಲಕ ಜಾತಿ, ಲಿಂಗ ಹಾಗೂ ಅಸ್ಪೃಶ್ಯತೆ ವಿರುದ್ಧ ಸಾಮಾಜಿಕ ಜಾಗೃತಿ ಮೂಡಿಸಿ ಸಮಾನತೆ ಮತ್ತು ಮಾನವೀಯತೆಯ ಸಂದೇಶ ಸಾರಿದ ಮಹಾನ್ ಶರಣರಾಗಿದ್ದಾರೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ. ಚಿದಾನಂದಪ್ಪ ಹೇಳಿದರು.

ನಗರದ ಡಾ. ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಸಂಯುಕ್ತಾಶ್ರಯದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಶಿವಶರಣ ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಬಸವಣ್ಣನವರ ಆಪ್ತ ಸಹಚರರಾಗಿದ್ದ ಹಡಪದ ಅಪ್ಪಣ್ಣ ಅವರು ಸಮಾಜದಲ್ಲಿದ್ದ ಜಾತಿ ಮತ್ತು ಲಿಂಗ ತಾರತಮ್ಯದ ವಿರುದ್ಧ ಧ್ವನಿ ಎತ್ತಿದ ಶ್ರೇಷ್ಠ ಶರಣರಾಗಿದ್ದರು. "ಅಪ್ಪಣ್ಣ ಪ್ರಿಯ ಚನ್ನಬಸವಣ್ಣ" ಅಂಕಿತನಾಮದಲ್ಲಿ 300ಕ್ಕೂ ಅಧಿಕ ವಚನಗಳನ್ನು ರಚಿಸಿ ಸಮಾನತೆ, ಕಾಯಕ, ದಾಸೋಹ ಹಾಗೂ ಮಾನವೀಯ ಮೌಲ್ಯಗಳನ್ನು ಜನರಿಗೆ ತಲುಪಿಸಿದರು ಎಂದು ಹೇಳಿದರು. ಮೂಢನಂಬಿಕೆಗಳನ್ನು ತೊಡೆದುಹಾಕುವ ನಿಟ್ಟಿನಲ್ಲಿ ಬಸವಣ್ಣನವರು ಅನುಭವ ಮಂಟಪಕ್ಕೆ ಬರುವವರಿಗೆ ಹಡಪದ ಅಪ್ಪಣ್ಣರನ್ನು ಭೇಟಿಯಾಗಿ ಮಾರ್ಗದರ್ಶನ ಪಡೆಯುವಂತೆ ಸೂಚಿಸುತ್ತಿದ್ದರು. ಅವರ ಪತ್ನಿ ಲಿಂಗಮ್ಮ ಕೂಡ ವಚನಗಾರ್ತಿಯಾಗಿದ್ದು, ಸಮಾಜ ಸುಧಾರಣೆಗೆ ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದ ಬಳ್ಳಾರಿಯ ಶ್ರೀ ಸತ್ಯಂ ಶಿಕ್ಷಣ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಆಲಂಭಾಷ ಮಾತನಾಡಿ, ಹಡಪದ ಅಪ್ಪಣ್ಣ ಅವರು ಬಸವಣ್ಣನವರ ಬಾಲ್ಯದ ಗೆಳೆಯರಾಗಿದ್ದು, ವಿಶ್ವದ ಮೊದಲ ಪ್ರಜಾಪ್ರಭುತ್ವ ಸಂಸತ್ತೆಂದು ಖ್ಯಾತಿ ಪಡೆದ ಅನುಭವ ಮಂಟಪದ ಪ್ರಧಾನ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸಿದ್ದರು ಎಂದು ಹೇಳಿದರು. ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿ ತಾಲೂಕಿನ ಮಸಬಿನಾಳ ಗ್ರಾಮದಲ್ಲಿ ಜನಿಸಿದ ಹಡಪದ ಅಪ್ಪಣ್ಣ ಅವರ ವಚನಗಳಲ್ಲಿ ಕಾಯಕ, ದಾಸೋಹ, ಭಕ್ತಿ, ವೈರಾಗ್ಯ, ಷಟಸ್ಥಲ ಹಾಗೂ ಸಾಮಾಜಿಕ ಸಮಾನತೆಯ ಮೌಲ್ಯಗಳು ಪ್ರತಿಫಲಿಸುತ್ತವೆ ಎಂದು ವಿವರಿಸಿದರು.

ಹಡಪದ ಅಪ್ಪಣ್ಣ ಸೇವಾ ಸಮಿತಿಯ ಜಿಲ್ಲಾಧ್ಯಕ್ಷ ಹೆಚ್. ರುದ್ರಪ್ಪ ಮಾತನಾಡಿ, ಸಮುದಾಯ ಭವನ ನಿರ್ಮಾಣಕ್ಕೆ ಸರ್ಕಾರ ಜಾಗ ಹಾಗೂ ವಿಶೇಷ ಅನುದಾನ ಒದಗಿಸಬೇಕು. ಸಮುದಾಯದವರಿಗೆ ಜಾತಿ ಪ್ರಮಾಣಪತ್ರ ವಿತರಣೆಯಲ್ಲಿ ಎದುರಾಗುತ್ತಿರುವ ಸಮಸ್ಯೆಗಳನ್ನು ಶೀಘ್ರ ಪರಿಹರಿಸಬೇಕೆಂದು ಸರ್ಕಾರವನ್ನು ಆಗ್ರಹಿಸಿದರು. ಕಾರ್ಯಕ್ರಮಕ್ಕೆ ಶ್ರೀ ಮಳೆ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ದಿವ್ಯಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಇದೇ ಸಂದರ್ಭದಲ್ಲಿ ಸಿರುಗುಪ್ಪ ತಾಲೂಕಿನ ಎಸ್.ಆರ್.ಎಂ. ಶರಣ ಬಸವ ಅವರ ತಂಡದಿಂದ ವಚನ ಸಂಗೀತ ಕಾರ್ಯಕ್ರಮ ನಡೆಯಿತು. ಸಂಭ್ರಮದ ಮೆರವಣಿಗೆ ಜಯಂತಿ ಅಂಗವಾಗಿ ನಗರದ ಮುನ್ಸಿಪಲ್ ಕಾಲೇಜು ಆವರಣದಿಂದ ಆರಂಭವಾದ ಮೆರವಣಿಗೆ ಇಂದಿರಾ ವೃತ್ತ, ಗಡಗಿ ಚೆನ್ನಪ್ಪ ವೃತ್ತ, ಬೆಂಗಳೂರು ರಸ್ತೆ, ಹಳೇ ಬ್ರೂಸ್‌ಪೇಟೆ, ತೇರುಬೀದಿ, ಜೈನ್ ಮಾರ್ಕೆಟ್ ಹಾಗೂ ಹೆಚ್.ಆರ್. ಗವಿಯಪ್ಪ ವೃತ್ತ ಮಾರ್ಗವಾಗಿ ಡಾ. ಜೋಳದರಾಶಿ ದೊಡ್ಡನಗೌಡ ರಂಗಮಂದಿರದವರೆಗೆ ಸಂಭ್ರಮದಿಂದ ಸಾಗಿತು. ವಿವಿಧ ಜಾನಪದ ಹಾಗೂ ಸಾಂಸ್ಕೃತಿಕ ಕಲಾತಂಡಗಳ ಪ್ರದರ್ಶನ ಮೆರವಣಿಗೆಗೆ ವಿಶೇಷ ಮೆರುಗು ನೀಡಿತು. ಈ ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ. ನಾಗರಾಜ, ರಾಜ್ಯ ಸಂಘಟನಾ ಕಾರ್ಯದರ್ಶಿ ಶಶಿಕುಮಾರ, ಕರ್ನಾಟಕ ಬೈಲಾಟ ಅಕಾಡೆಮಿಯ ಮಾಜಿ ಸದಸ್ಯ ತಿಪೇಸ್ವಾಮಿ, ಹಡಪದ ಅಪ್ಪಣ್ಣ ಸೇವಾ ಸಮಿತಿಯ ಪದಾಧಿಕಾರಿಗಳು, ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ಹಡಪದ ಅಪ್ಪಣ್ಣರು ಸಮಾನತೆ,ದಾಸೋಹ,ಕಾಯಕ ಜೀವಿಗಳಾಗಿದ್ದರು: ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಜು:29:ಹಡಪದ ಅಪ್ಪಣ್ಣರು ಸಮಾನತೆ, ದಾಸೋಹ, ಕಾಯಕ ಮತ್ತು ಮಾನವೀಯ ಮೌಲ್ಯಗಳನ್ನು ಜನರಲ್ಲಿ ಬಿತ್ತುವ ಮೂಲಕ ಜಾತಿ, ಮತ ಮತ್ತು ವರ್ಣಭೇದಗಳನ್ನು ತಿರಸ್ಕರಿಸಿ, ಪ್ರತಿಯೊಬ್ಬ ಮಾನವನಲ್ಲಿಯೂ ಶಿವನನ್ನು ಕಾಣುವ ಬಸವ ತತ್ವವನ್ನು ತಮ್ಮ ಜೀವನದಲ್ಲಿ ಆಚರಿಸಿದರೆಂದು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಹೇಳಿದರು. ನಗರದ ಜಿಲ್ಲಾ ಕಸಾಪ ಸಭಾಂಗಣದಲ್ಲಿ ಬುಧವಾರ ಜಿಲ್ಲಾಡಳಿತ, ಜಿಪಂ, ನಗರಸಭೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಹಡಪದ ಅಪ್ಪಣ್ಣನವರ ಜಯಂತ್ಯೋತ್ಸವ ಸಮಿತಿ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಹಡಪದ ಅಪ್ಪಣ್ಣನವರ ಜಯಂತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಕಲ್ಯಾಣದ ಶರಣ ಚಳವಳಿಯಲ್ಲಿ ಸಂಕಷ್ಟದ ಸಂದರ್ಭಗಳಲ್ಲಿ ಅವರು ತೋರಿದ ನಿಷ್ಠೆ, ಧೈರ್ಯ ಮತ್ತು ಸೇವಾಭಾವ ಇಂದಿಗೂ ಮಾದರಿಯಾಗಿದೆ. ಅವರ ಜೀವನವು ಕೇವಲ ಒಬ್ಬ ಶರಣನ ಜೀವನವಲ್ಲ, ಸಮಾಜಕ್ಕೆ ದಾರಿದೀಪವಾದ ಆದರ್ಶ ಜೀವನವಾಗಿದೆ ಎಂದು ಶಾಸಕರು ಹೇಳಿದರು. ಹಡಪದ ಅಪ್ಪಣ್ಣರು ಸುಮಾರು 242 ವಚನಗಳನ್ನು ರಚಿಸಿದ್ದು, ಅವುಗಳಲ್ಲಿ ಕಾಯಕ, ಆತ್ಮಶುದ್ಧಿ, ಶಿವಭಕ್ತಿ, ಸತ್ಯ, ನಿಷ್ಠೆ, ಪ್ರಾಮಾಣಿಕತೆ ಮತ್ತು ಮಾನವೀಯ ಮೌಲ್ಯಗಳನ್ನು ಅತ್ಯಂತ ಸರಳ ಹಾಗೂ ಪರಿಣಾಮಕಾರಿಯಾಗಿ ಅಭಿವ್ಯಕ್ತಿಸಿದ್ದಾರೆ. ಅವರ ವಚನಗಳಲ್ಲಿ ಆತ್ಮಸಾಕ್ಷಾತ್ಕಾರ ಮತ್ತು ಲಿಂಗೈಕ್ಯದ ಅನುಭವ ಅತ್ಯುನ್ನತ ಸ್ಥಾನ ಪಡೆದಿದೆ ಎಂದು ಶಾಸಕರು ಮಾರ್ಮಿಕವಾಗಿ ವಿವರಿಸಿದರು.

ವಿಶೇಷ ಉಪನ್ಯಾಸ ನೀಡಿದ ಡಾ.ಗುರುಪ್ರಸಾದ್ ವೈದ್ಯ ಅವರು, ಕ್ರಿ.ಶ. 1134ರಲ್ಲಿ ಇಂದಿನ ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿ ತಾಲೂಕಿನ ಮಸಾಬೀನಾಳ ಗ್ರಾಮದಲ್ಲಿ ಚನ್ನವೀರಪ್ಪ ಮತ್ತು ದೇವಕಮ್ಮ ದಂಪತಿಗೆ ಜನಿಸಿದ ಅಪ್ಪಣ್ಣರು ಕ್ಷೌರಿಕ(ಹಡಪದ/ನಾಯಿಂದ) ಸಮುದಾಯಕ್ಕೆ ಸೇರಿದವರಾಗಿದ್ದರು. ಆದರೆ ಅವರು ತಮ್ಮ ವೃತ್ತಿಯನ್ನು ಕೇವಲ ಜೀವನೋಪಾಯವೆಂದು ಪರಿಗಣಿಸಲಿಲ್ಲ. ತಮ್ಮ ಕಾಯಕವನ್ನೇ ಶಿವಸೇವೆಯಾಗಿ ಸ್ವೀಕರಿಸಿ, ಬಸವಣ್ಣನವರ 'ಕಾಯಕವೇ ಕೈಲಾಸ' ಎಂಬ ತತ್ವವನ್ನು ತಮ್ಮ ಬದುಕಿನಲ್ಲಿ ಅಕ್ಷರಶಃ ಅಳವಡಿಸಿಕೊಂಡಿದ್ದರೆಂದು ಹೇಳಿದರು. ಕಾರ್ಯಕ್ರಮದಲ್ಲಿ ಕನ್ನಡ ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಉತ್ತರದೇವಿ, ಸೇರಿದಂತೆ ಸಮಾಜದ ಮುಖಂಡರು ಕಾರ್ಯಕ್ರಮದಲ್ಲಿ ಭಾಗವಹಿಸಿದರು. ಕಾರ್ಯಕ್ರಮವನ್ನು ದೇವಿಂದ್ರ ಕಿಲ್ಲನಕೇರಾ ಅವರು ನಿರೂಪಿಸಿ ವಂದಿಸಿದ್ದರು.

# ಸಂಸ್ಕಾರಯುತ ಶಿಕ್ಷಣ ಪಡೆದು ಸಮಾಜಕ್ಕೆ ಬೆಳಕಾಗಿ



**ಬಾಗಲಕೋಟೆ:** ವಿದ್ಯಾರ್ಥಿಗಳು ಸಂಸ್ಕಾರಯುತ ಶಿಕ್ಷಣ ಪಡೆದು ಸಮಾಜವನ್ನು ಬೆಳಗಬೇಕು ಎಂದು ಜನಪದ ಸಾಹಿತಿ, ಉಪನ್ಯಾಸಕ ಶ್ರೀಕಾಂತ ಕೆಂಧೂಳಿ ಹೇಳಿದರು.

ತಾಲ್ಲೂಕಿನ ಬೇವೂರಿನ ಪರಪ್ಪ ಸಜ್ಜನ ಕಲಾ ಮಹಾವಿದ್ಯಾಲಯದಲ್ಲಿ ಮಂಗಳವಾರ ಜರುಗಿದ ಪಠ್ಯೇತರ ಚಟುವಟಿಕೆಗಳ ಉದ್ಘಾಟನೆ ಹಾಗೂ ಬಿ.ಎ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

ವಿದ್ಯಾರ್ಥಿ ಜೀವನ ಅತ್ಯಂತ ಬೆಲೆಯುಳ್ಳದ್ದು, ಓದು ಬರಹದತ್ತ ದೃಢ ಚಿತ್ತ ನೆಟ್ಟು ಸಾಧಕರಾಗಿ ಸಮಾಜದ ಆಸ್ತಿಯಾಗಿ ಬೆಳಗಬೇಕು ಎಂದು ಹೇಳಿದ ಕೆಂಧೂಳಿ, ತಾಯಿ ಜನಪದ ವಿಶ್ವವಿದ್ಯಾಲಯ. ಆಕೆಯಲ್ಲಿ ಅನುಭವದ ಹದವಿದೆ. ಅವಳಾಡುವ ಪ್ರತಿ ಮಾತಿನಲ್ಲಿ ಸಂಸ್ಕಾರದ ಚಿಂತನೆಗಳಿವೆ, ಅವುಗಳನ್ನು ಮಕ್ಕಳು ಅಳವಡಿಸಿಕೊಳ್ಳಬೇಕು ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಆದರ್ಶ ವಿದ್ಯಾವರ್ಧಕ ಸಂಘದ ಸದಸ್ಯ ನಿಂಗಪ್ಪ ಮಾಗನೂರ ಮಾತನಾಡಿ, ವಿದ್ಯಾರ್ಥಿಗಳು ಉತ್ತಮ ಜ್ಞಾನಾರ್ಜನೆಯ ಮೂಲಕ ಉನ್ನತ ಸ್ಥಾನಮಾನಗಳನ್ನು ಹೊಂದಿ ಸಮಾಜದ ಆಸ್ತಿಯಾಗಿ ಬಾಳಬೇಕು ಎಂದು ಹೇಳಿದರು.

ಮಹಾವಿದ್ಯಾಲಯದ ಪ್ರಾಚಾರ್ಯ ಜಗದೀಶ ಭೈರಮಟ್ಟಿ, ಉಪನ್ಯಾಸಕ ಎಸ್.ಎಸ್.ಆದಾಪೂರ ವೇದಿಕೆಯಲ್ಲಿದ್ದರು.

ಅರ್ಥಶಾಸ್ತ್ರ ವಿಷಯದಲ್ಲಿ ನೂರಕ್ಕೆ ನೂರು ಅಂಕ ಗಳಿಸಿದ ಪವಿತ್ರಾ ಮಾಗನೂರ, ವಿಜಯಲಕ್ಷ್ಮೀ ಬಂಡಿವಡ್ಡರ, ಫಾತಿಮಾ ನಧಾಪ, ಜ್ಯೋತಿ ಗೌಡರ ಅವರುಗಳನ್ನು ಸನ್ಮಾನಿಸಲಾಯಿತು. ಜ್ಯೋತಿ ಭೈರಮಟ್ಟಿ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ನೇತ್ರಾ ಬೂದೂರಿ ಸ್ವಾಗತಿಸಿದರು. ಕಲ್ಪನಾ ಕೆಂಪಣ್ಣವರ ಪರಿಚಯಿಸಿದರು. ಅಕ್ಷತಾ ಕಟ್ಟಿಮನಿ ಹಾಗೂ ಶಿವಲೀಲಾ ಗೊರಚಿಕ್ಕನವರ ನಿರೂಪಿಸಿದರು. ಸುರೇಖಾ ಮಾದರ ವಂದಿಸಿದರು.

# ಜಿಲ್ಲಾಮಟ್ಟದ ಪತ್ರಿಕಾ ದಿನಾಚರಣೆ

**ಬಾಗಲಕೋಟೆ:** ಬಾಗಲಕೋಟೆ ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆ ಕಾರ್ಯಕ್ರಮ ಜುಲೈ 31 ಶುಕ್ರವಾರ ಜರುಗಲಿದೆ.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದಲ್ಲಿ ಶುಕ್ರವಾರ ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ಪಂಚಾಯತಿ ಸಭಾ ಭವನದಲ್ಲಿ ನಡೆಯುವ ಕಾರ್ಯಕ್ರಮವನ್ನು ಶಾಸಕ ಉಮೇಶ ಮೇಟಿ ಉದ್ಘಾಟಿಸುವರು. ಕಾನಿಪ ಸಂಘದ ಅಧ್ಯಕ್ಷ ಮಹೇಶ ಅಂಗಡಿ ಅಧ್ಯಕ್ಷತೆ ವಹಿಸಲಿದ್ದು, ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾರ ಪ್ರಶಸ್ತಿ ಪ್ರದಾನ ಮಾಡುವರು. ಬಿ.ಟಿ.ಡಿ.ಎ. ಅಧ್ಯಕ್ಷ ಪ್ರಕಾಶ ತಪಶೆಟ್ಟಿ ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಿದ್ದು, ಕಾನಿಪ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ ಆಶಯ ನುಡಿ ಹೇಳುವರು. ರಾಜ್ಯ ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ ಹಾಗೂ ಕಾರ್ಯಕಾರಿ ಸಮಿತಿ ಸದಸ್ಯ ಈಶ್ವರ ಶೆಟ್ಟರ ಉಪಸ್ಥಿತರಿರುವರು.

ಜಿಲ್ಲಾಧಿಕಾರಿ ಎಂ.ಸಂಗಪ್ಪ, ಜಿಪಂ ಸಿಇಒ ಗಜಾನನ ಬಾಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ಧಾರ್ಥ ಗೋಯಲ್, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಹಾಗೂ ಜಿಪಂ ಉಪ ಕಾರ್ಯದರ್ಶಿ ಎನ್.ವೈ.ಬಸರಿಗಿಡದ ಮುಖ್ಯ ಅತಿಥಿಗಳಾಗಿ ಆಗಮಿಸುವರು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಅಮರೇಶ ದೊಡಮನಿ ಹಾಗೂ ಕಾನಿಪ ಜಿಲ್ಲಾ ಕಾರ್ಯದರ್ಶಿ ಜಗದೀಶ ಗಾಣಿಗೇರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರಿವಿನ ಬೆಳಕು ನೀಡುವ ಗುರುವಿನ ಸ್ಮರಣೆ ಅಗತ್ಯ



**ಬಾಗಲಕೋಟೆ:** ವ್ಯಕ್ತಿಯ ಸರ್ವತೋಮುಖ ಬೆಳವಣಿಗೆಯಲ್ಲಿ ಗುರುವಿನ ಪಾತ್ರ ದೊಡ್ಡದು. ಬದುಕಿನಲ್ಲಿ ಅರಿವಿನ ಬೆಳಕನ್ನು ನೀಡುವ ಗುರುವಿನ ಕೊಡುಗೆಯನ್ನು ಕೃತಜ್ಞತೆಯಿಂದ ಸ್ಮರಿಸಿ ವಂದನೆ ಸಮರ್ಪಿಸುವುದಕ್ಕಾಗಿ ಗುರುಪೂರ್ಣಿಮೆ ಆಚರಿಸಲಾಗುತ್ತಿದೆ ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಸಾಂಸ್ಕೃತಿಕ ಚಟುವಟಿಕೆ ವಿಭಾಗ ಬುಧವಾರ ಆಯೋಜಿಸಿದ್ದ 'ಗುರುಪೂರ್ಣಿಮೆ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ತನ್ನ ಜ್ಞಾನ ತೇಜಸ್ಸಿನಿಂದ ಶಿಷ್ಯನ ಅಜ್ಞಾನ ಕಳೆದು ಒಳ್ಳೆಯ ದಾರಿ ತೋರುವವನೇ ಗುರು. ಉದಾತ್ತವಾದ ಮೌಲ್ಯಗಳನ್ನು ನೀಡುವುದರ ಮೂಲಕ ಮಾರ್ಗದರ್ಶನ ಮಾಡುವ ಶಕ್ತಿ ಹೊಂದಿರುವ ಪ್ರಕೃತಿಯೂ ಗುರುವೇ ಸರಿ. ಅದು ಜ್ಞಾನದ ಆಗರವೂ ಹೌದು. ಅದನ್ನು ಯುವ ಸಮುದಾಯ ಅರಿಯಬೇಕು.

ಜೀವನದಲ್ಲಿ ಮಹತ್ವದ ತಿರುವು ನೀಡಿ, ಬಾಳಲ್ಲಿ ಬೆಳಕು ಮೂಡಿಸಿ ಅರಿವಿನ ದಾರಿ ತೋರುವ ಗುರುವಿಗೆ ನಮಿಸುವುದು ಎಲ್ಲರ ಕರ್ತವ್ಯ ಎಂದರು. ವಿದ್ಯಾರ್ಥಿಗಳು ನಮ್ಮ ಗುರು–ಶಿಷ್ಯ ಪರಂಪರೆಯನ್ನು ತಿಳಿದುಕೊಳ್ಳಬೇಕು. ಅವರ ಆದರ್ಶಗಳನ್ನು ಅಳವಡಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ಉಪನ್ಯಾಸಕಿ ಅಶ್ವಿನಿ ಬಿಲ್ಲಾರ ಪ್ರಾರ್ಥಿಸಿದರು. ಸಂಯೋಜಕ ಡಾ.ಎಸ್.ಎಸ್.ಹಂಗರಗಿ ಸ್ವಾಗತಿಸಿದರು. ಎ.ಎ.ಗಂಗಲ್ ವಂದಿಸಿದರು. ಉಪನ್ಯಾಸಕಿ ಕೀರ್ತಿ ದಾಸರ ನಿರೂಪಿಸಿದರು.

# ಸಮಾನತೆಯ ಸಂದೇಶ ಸಾರಿದ ಹಡಪದ ಅಪ್ಪಣ್ಣ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಶ್ರಮದ ಗೌರವ, ಸೇವಾ ಮನೋಭಾವ, ಸಮಾನತೆ ಹಾಗೂ ಪ್ರಾಮಾಣಿಕತೆಯ ಸಂದೇಶವನ್ನು ಸಮಾಜಕ್ಕೆ ಸಾರಿದವರು ಶಿವಶರಣ ಹಡಪದ ಅಪ್ಪಣ್ಣನವರು ಎಂದು ಶಾಸಕ ಉಮೇಶ ಮೇಟಿ ಹೇಳಿದರು.

ನವನಗರದ ಡಾ.ಬಿ.ಆರ್.ಅಂಬೇಡ್ಕರ ಭವನದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಶಿವಶರಣ ಹಡಪದ ಅಪ್ಪಣ್ಣನವರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಹಡಪದ ಅಪ್ಪಣ್ಣನವರು ಬಸವ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡ ಶ್ರೇಷ್ಠ ಶಿವಶರಣರಾಗಿದ್ದಾರೆ. ಬಸವಣ್ಣನವರ ಬಾಲ್ಯದ ಒಡನಾಡಿಯಾಗಿ ಅನುಭವ ಮಂಟಪದ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಕಾಯಕ, ದಾಸೋಹ, ಸಮಾನತೆ ಹಾಗೂ ಮಾನವೀಯತೆಯ ಸಂದೇಶವನ್ನು ಜನರಲ್ಲಿ ಹರಡಿದವರು ಎಂದರು.

ಇಂದಿನ ಯುವಜನತೆ ಹಡಪದ ಅಪ್ಪಣ್ಣನವರ ಆದರ್ಶಗಳನ್ನು ಅರಿತುಕೊಂಡು ಪ್ರಾಮಾಣಿಕತೆ, ಪರಿಶ್ರಮ, ಮಾನವೀಯತೆ ಹಾಗೂ ಸಾಮಾಜಿಕ ಸೇವೆಯ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಆಗ ಮಾತ್ರ ಉತ್ತಮ ಸಮಾಜ ನಿರ್ಮಾಣ ಸಾಧ್ಯ. ಸಮಾಜದ ಅಭಿವೃದ್ಧಿಗೆ ನೀಡಿರುವ ಕೊಡುಗೆ ಅಪಾರವಾಗಿದ್ದು, ದುಡಿಮೆಯನ್ನು ದೇವರ ಪೂಜೆಯೆಂದು ಭಾವಿಸಿ ಬದುಕುವ ಈ ಸಮಾಜ ಬಸವ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡಿದೆ ಎಂದರು.



ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ ಮಾತನಾಡಿ, ಸಮುದಾಯ ಅಭಿವೃದ್ಧಿಯತ್ತ ಸಾಗಬೇಕಾದರೆ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಬೇಕು. ಶಿಕ್ಷಣವೇ ಸಮಾಜದ ಪ್ರಗತಿಗೆ ಅಡಿಪಾಯವಾಗಿದ್ದು, ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳನ್ನು ಉನ್ನತ ಶಿಕ್ಷಣದತ್ತ ಪ್ರೋತ್ಸಾಹಿಸಬೇಕು. ಹಡಪದ ಅಪ್ಪಣ್ಣನವರ ಮಾರ್ಗದರ್ಶನದ ಮೌಲ್ಯಗಳೊಂದಿಗೆ ಶಿಕ್ಷಣವನ್ನು ಅಳವಡಿಸಿಕೊಂಡಾಗ ಸಮಾಜ ಇನ್ನಷ್ಟು ಪ್ರಗತಿಯತ್ತ ಸಾಗಲಿದೆ ಎಂದು ತಿಳಿಸಿದರು.

ಉಪನ್ಯಾಸ ನೀಡಿದ ಮುದ್ದೇಬಿಹಾಳದ ಪ್ರಾಧ್ಯಾಪಕ ಡಾ.ಬಸವರಾಜ ಹಡಪದ ಮಾತನಾಡಿ, 12ನೇ ಶತಮಾನದ ಶರಣ ಹಡಪದ ಅಪ್ಪಣ್ಣವರು ಜನರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಕೆಲಸ ಮಾಡಿದವರು. ಸಮಾಜವನ್ನು ತಮ್ಮ ವಚನಗಳ ಮೂಲಕ ಹೊಸ ಬೆಳಕಿನತ್ತ ಕೊಂಡೊಯ್ಯಲು ಶ್ರಮಿಸಿದವರು ಎಂದರು. ನಂತರ ಅವರ ಜೀವನ ಚರಿತ್ರೆ ಹಾಗೂ ಬೆಳೆದು ಬಂದ ದಾರಿಯನ್ನು ವಿವರವಾಗಿ ತಿಳಿಸಿಕೊಟ್ಟರು.

ಈ ಸಂದರ್ಭದಲ್ಲಿ ಸಮುದಾಯದಲ್ಲಿ ಉತ್ತಮ ಸಾಧನೆ ಮಾಡಿದ ಮಲ್ಲಿಕಾರ್ಜುನ ಹಡಪದ, ದ್ಯಾಮಗೊಂಡ ಹಡಪದ ಹಾಗೂ ಡಾ.ಯಲ್ಲಪ್ಪ ಹಡಪದ ಅವರಿಗೆ ಸನ್ಮಾನಿಸಿ, ನಿಜಸುಕಿ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಅಲ್ಲದೇ ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ 28ನೇ ಘಟಿಕೋತ್ಸವದಲ್ಲಿ ಚಿನ್ನದ ಪದಕ ಪಡೆದ ಬಿವಿವ ಸಂಘದ ಸಜ್ಜಲಶ್ರೀ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯದ ವಿದ್ಯಾರ್ಥಿ ಮಹೇಶ್ವರಿ ಶಿರೋಳ ಅವರನ್ನು ಹಾಗೂ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ದ್ವಿತೀಯ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸಹ ಸತ್ಕರಿಸಲಾಯಿತು.

**ಕಾರ್ಯಕ್ರಮದ ಪೂರ್ವದಲ್ಲಿ ಜಿಲ್ಲಾಡಳಿತ ಭವನದ ಮುಖ್ಯ ಆವರಣದಲ್ಲಿ ಶಾಸಕ ಉಮೇಶ ಮೇಟಿ, ಹಡಪದ ಅಪ್ಪಣ್ಣವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಮೆರವಣಿಗೆಗೆ ಚಾಲನೆ ನೀಡಿದರು. ಮೆರವಣಿಗೆ ಜಿಲ್ಲಾಡಳಿತ ಭವನದಿಂದ ಪ್ರಾರಂಭವಾಗಿ ನಗರದ ನಾನಾ ಕಡೆ ಸಂಚರಿಸಿ ಕೊನೆಗೆ ಡಾ.ಬಿ.ಆರ್. ಅಂಬೇಡ್ಕರ ಭವನಕ್ಕೆ ಮುಕ್ತಾಯಗೊಂಡಿತು. ಮೆರವಣಿಗೆಯಲ್ಲಿ ವಿವಿಧ ಜಾನಪದ ಕಲಾತಂಡಗಳು ಭಾಗವಹಿಸಿದ್ದವು. ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ಧಾರ್ಥ ಗೋಯಲ್, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಸೇರಿದಂತೆ ಸಮುದಾಯದ ಭಾಂದವರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.**

ಕಾರ್ಯಕ್ರಮದಲ್ಲಿ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಜಿಲ್ಲಾ ಅಧ್ಯಕ್ಷ ಅನೀಲಕುಮಾರ ದಡ್ಡಿ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಸಮಾಜದ ಮುಖಂಡರಾದ ಮಲ್ಲಿಕಾರ್ಜುನ ಚೊಳಚಗುಡ್ಡ, ಎಚ್.ಡಿ.ವೈದ್ಯ, ಲಕ್ಷ್ಮಣ ಹಡಪದ, ಎ.ಜಿ.ಹಡಪದ, ಮಲ್ಲಪ್ಪ ಸೂಳಿಕೇರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮಾನವೀಯ ಮೌಲ್ಯ ಬೆಳೆಸಿಕೊಳ್ಳಿ: ಸಂಗಣ್ಣ ಗದ್ದಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ವಿದ್ಯಾರ್ಥಿಗಳು ಕಲಿಕಾ ಸಮಯದಲ್ಲೇ ಮಾನವೀಯ ಮೌಲ್ಯಗಳನ್ನು ರೂಢಿಸಿಕೊಂಡು ಗುರುಗಳ ಬಗ್ಗೆ ಶ್ರದ್ಧೆ, ಗೌರವ ಹೊಂದಿ ಒಳ್ಳೆಯ ವ್ಯಕ್ತಿಗಳಾಗಿ ಬೆಳೆಯಬೇಕು ಎಂದು ಇಳಕಲ್ಲ ನಿವೃತ್ತ ಮುಖ್ಯೋಪಾಧ್ಯಾಯ ಸಂಗಣ್ಣ ಗದ್ದಿ ಹೇಳಿದರು.

ತಾಲ್ಲೂಕಿನ ಶಿರೂರ ಪಟ್ಟಣದ ಟಿ.ಎಂ.ಭಗವತಿ ಶಿಕ್ಷಣ ಸಂಸ್ಥೆಯ ಕೆ.ಆರ್. ಲಕ್ಕಂ ಪದವಿ ಪೂರ್ವ ಕಾಲೇಜಿನಲ್ಲಿ ಮಂಗಳವಾರ ಜರುಗಿದ ಶೈಕ್ಷಣಿಕ ಸಾಲಿನ ಕ್ರೀಡೆ, ಸಾಂಸ್ಕೃತಿಕ, ಎನ್.ಎಸ್.ಎಸ್ ರೇಂಜರ್ಸ್ ಮತ್ತು ರೋವರ್ಸ್ ಚಟುವಟಿಕೆಗಳ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಮುಖ್ಯ ಅತಿಥಿ ಪ್ರಶಾಂತಕುಮಾರ ಹಂಚಾಟೆ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಸಾಧನೆ ಮಾಡುವ ಛಲವಿರಬೇಕು. ಸರ್ವತೋಮುಖ ಬೆಳವಣಿಗೆಗೆ ಪಠ್ಯದ ಜೊತೆ ಪಠ್ಯೇತರ ಚಟುವಟಿಕೆಗಳಲ್ಲೂ ಪಾಲ್ಗೊಳ್ಳಬೇಕು ಎಂದರು.



ಇನ್ನೋರ್ವ ಅತಿಥಿ ಮುತ್ತಣ್ಣ ಬೀಳಗಿ, ವಿದ್ಯಾರ್ಥಿ ಜೀವನದಲ್ಲಿ ಶಿಸ್ತು, ಸಮಯ ಪಾಲನೆ ಬೆಳೆಸಿಕೊಳ್ಳಬೇಕು. ಕಾಲೇಜು ಹಂತದಲ್ಲಿ ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಆಸಕ್ತಿ ಬೆಳೆಸಿಕೊಂಡು ಸಾಧಕರಾಗಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಕಾರ್ಯದರ್ಶಿ ಶ್ರೀಶೈಲ ಕರಿಶಂಕರಿ, ವಿದ್ಯಾರ್ಥಿಗಳು ಕಲಿಕೆಗೆ ಒತ್ತು ನೀಡಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು. ದುಶ್ಚಟಗಳಿಗೆ ಬಲಿಯಾಗಿ ಜೀವನ ಹಾಳು ಮಾಡಿಕೊಳ್ಳಬಾರದು ಎಂದರು.

ಶಕುಂತಲಾ ಕರಿಶಂಕರಿ, ಸಂಗಮೇಶ ಕೆಂಜೊಡಿ ಮತ್ತಿತರರು ವೇದಿಕೆಯಲ್ಲಿದ್ದರು.

ರಾಘವೇಂದ್ರ ಮುಚಕನ್ನವರ ಸ್ವಾಗತಿಸಿದರು. ಪಾರ್ವತಿ ಪಾಟೀಲ ಹಾಗೂ ಎಸ್.ಆರ್.ಇಳಗೇರ ನಿರೂಪಿಸಿದರು. ಪ್ರೇಮಾ ಕಮ್ಮಾರ ವಂದಿಸಿದರು.

# ಮಳೆರಾಜೇಂದ್ರಸ್ವಾಮಿ ಮಠದಲ್ಲಿ ಗುರುಪೂಜಾ ಮಹೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ನಗರಕ್ಕೆ ಸಮೀಪದ ಹೊಸ ಮುರನಾಳ ಗ್ರಾಮದ ಜಗದ್ಗುರು ಶ್ರೀ ಮಳೆರಾಜೇಂದ್ರಸ್ವಾಮಿ ಮಠದಲ್ಲಿ ಬುಧವಾರ ಗುರುಪೂರ್ಣಿಮೆ ಅಂಗವಾಗಿ ಗುರುಪೂಜಾ ಮಹೋತ್ಸವವನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು.

ಬೆಳಗಿನ ಜಾವ ಪಂಚಾಮೃತ ಅಭಿಷೇಕ ನೆರವೇರಿಸಲಾಯಿತು. ಬಳಿಕ ಪುರುಷಸೂಕ್ತ, ಶ್ರೀಸೂಕ್ತ ಹಾಗೂ ಪರ್ಜನ್ಯ ಮಹಾಮಂತ್ರಗಳ ಪಠಣದೊಂದಿಗೆ ವಿಶೇಷ ಪುಷ್ಪಾಲಂಕಾರ ಮಾಡಲಾಯಿತು.

ನಂತರ ಶ್ರೀಮಠದ ಪೂಜ್ಯರಾದ ಜಗನ್ನಾಥ ಮಹಾಸ್ವಾಮಿಗಳ ಪಾದುಕೆಗಳಿಗೆ ಭಕ್ತಾದಿಗಳಿಂದ ವಿಶೇಷ ಪೂಜೆ ಸಲ್ಲಿಸಲಾಯಿತು. ಪೂಜಾ ವಿಧಿವಿಧಾನಗಳ ನಂತರ ಮಹಾಮಂಗಳಾರತಿ ನೆರವೇರಿಸಲಾಯಿತು.

ಬಳಿಕ ನಡೆದ ಧಾರ್ಮಿಕ ಸಭೆಯಲ್ಲಿ ಜಗನ್ನಾಥ ಮಹಾಸ್ವಾಮಿಗಳು ಗುರುಪೂರ್ಣಿಮೆಯ ಮಹತ್ವವನ್ನು ವಿವರಿಸಿ, ಭಾರತೀಯ ಪರಂಪರೆಯಲ್ಲಿ ಗುರುವಿಗೆ ಪವಿತ್ರವಾದ ಸ್ಥಾನಮಾನ ನೀಡಲಾಗಿದ್ದು, ಗುರುಕುಲ ಪರಂಪರೆಯು ದೇಶದ ಜ್ಞಾನ ಮತ್ತು ಸಂಸ್ಕೃತಿಯ ಅಸ್ಮಿತೆಯಾಗಿದೆ. ಗುರುಗಳ ಮಾರ್ಗದರ್ಶನ ವ್ಯಕ್ತಿಯ ಜೀವನದಲ್ಲಿ ಜ್ಞಾನ, ಸಂಸ್ಕಾರ ಹಾಗೂ ಸನ್ಮಾರ್ಗವನ್ನು ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದು ಹೇಳಿದರು.



ಖಜ್ಜಿಡೋಣಿಯ ಶಂಕರಾನಂದ ಅವಧೂತ ಆಶ್ರಮದ ಶರಣ ಕೃಷ್ಣಾನಂದ ಶಾಸ್ತ್ರಿಗಳು, "ಗುರುವಿನ ಗುಲಾಮನಾಗುವ ತನಕ ದೊರೆಯದಣ್ಣ ಮುಕ್ತಿ" ಎಂಬ ವಿಷಯದ ಕುರಿತು ಉಪನ್ಯಾಸ ನೀಡಿದರು. ಮುಗಳಖೋಡದ ಸಿದ್ಧಾರೂಢ ಭಾರತಿ ಆಶ್ರಮದ ಶರಣಬಸವ ಶಾಸ್ತ್ರಿಗಳು ಹಾಗೂ ಶೆಲ್ಲಿಕೇರಿಯ ಸುಜ್ಞಾನ ಗುರುಕುಲದ ಅಡವೇಶ ಶಾಸ್ತ್ರಿಗಳು ಗುರು ಪರಂಪರೆಯ ಮಹತ್ವ ತಿಳಿಸಿದರು.

ಇದೇ ಸಂದರ್ಭದಲ್ಲಿ ಮನಹಳ್ಳಿಯ ಶ್ರೀಕಾಂತ ಪತ್ತಾರ ಅವರು ಶ್ರೀಮಠಕ್ಕೆ ರಜತ ಪಾದುಕೆಗಳನ್ನು ಸಮರ್ಪಿಸಿದರು. ಬಾಗಲಕೋಟೆಯ ಗಾಯತ್ರಿ ಮಹಿಳಾ ಮಂಡಳಿಯ ಸದಸ್ಯೆಯರಿಂದ ಲಲಿತಾ ಸಹಸ್ರನಾಮ ಪಠಣ ನಡೆಯಿತು.

ಭಕ್ತಾದಿಗಳಿಗೆ ಅನ್ನಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು. ಈ ಸಂದರ್ಭದಲ್ಲಿ ಶ್ರೀಮಠದ ಭಕ್ತರು ಹಾಗೂ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ಸರ್ಕಾರಿ ಶಾಲೆಯಲ್ಲಿ ಶಿಕ್ಷಕರ ಕೊರತೆ..!

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಪಟ್ಟಣದಲ್ಲಿ ಇರುವ ಕರ್ನಾಟಕ ಪಬ್ಲಿಕ ಶಾಲೆಯಲ್ಲಿ ಶಿಕ್ಷಕರ ತೀವ್ರ ಕೊರತೆ: 'ವ್ಯವಸ್ಥೆ ಪರಿವರ್ತನೆ ವೇದಿಕೆ'ಯಿಂದ ಉಗ್ರ ಹೋರಾಟದ ಎಚ್ಚರಿಕೆ ನೀಡಿದ್ದಾರೆ.

ತಾಲೂಕಿನ ಗ್ರಾಮೀಣ ಭಾಗದ ಬಡ ಹಾಗೂ ಶ್ರಮಿಕ ವರ್ಗದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಬೇಕಾದ ಸರ್ಕಾರಿ ಹಾಗೂ ಮಾದರಿ ಶಾಲಾ–ಕಾಲೇಜುಗಳಲ್ಲಿ ಖಾಯಂ ಶಿಕ್ಷಕರ ತೀವ್ರ ಕೊರತೆ ಎದುರಾಗಿದ್ದು, ವಿದ್ಯಾರ್ಥಿಗಳ ಭವಿಷ್ಯ ಅನಿಶ್ಚಿತತೆಗೆ ಸಿಲುಕಿದೆ. ಶಾಲಾ ಉದ್ಘಾಟನೆ ನಡೆದು ವರ್ಷಗಳು ಕಳೆದರೂ ವಿಷಯವಾರು ಖಾಯಂ ಶಿಕ್ಷಕರನ್ನು ನೇಮಕ ಮಾಡದೆ ತಾತ್ಕಾಲಿಕ (ಅತಿಥಿ) ಶಿಕ್ಷಕರಿಂದಲೇ ತರಗತಿ ನಡೆಸಲಾಗುತ್ತಿರುವುದಕ್ಕೆ ಸಾರ್ವಜನಿಕರು ಹಾಗೂ ಪಾಲಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.



**326 ವಿದ್ಯಾರ್ಥಿಗಳಿಗೆ ಕೇವಲ ಅತಿಥಿ ಶಿಕ್ಷಕರೇ ಆಸರೆ!:** ಕಮಲನಗರ ಪಟ್ಟಣದಲ್ಲಿರುವ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ (KPS) ಪ್ರಸ್ತುತ 326ಕ್ಕೂ ಹೆಚ್ಚು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಆದರೆ, ಈ ಶಾಲೆಗೆ ಅಗತ್ಯವಿರುವ ಯಾವುದೇ ವಿಷಯವಾರು ಖಾಯಂ ಶಿಕ್ಷಕರು ನೇಮಕವಾಗಿಲ್ಲ.

**ಅತಿಥಿ ಶಿಕ್ಷಕರ ಮೇಲೆಯೇ ಶಾಲೆಯ ಭಾರ**

ಶಾಲೆಯಲ್ಲಿ ಹುದ್ದೆಗಳು ಮಂಜೂರಾಗಿದ್ದರೂ, ಸರ್ಕಾರಿ ನಿಯಮಿತ ಶಿಕ್ಷಕರಿಲ್ಲದೆ ಕೇವಲ ಅತಿಥಿ ಶಿಕ್ಷಕರನ್ನೇ ನಿಯೋಜಿಸಿ ಶಾಲೆಯನ್ನು ನಡೆಸಲಾಗುತ್ತಿದೆ.

**ಶೈಕ್ಷಣಿಕ ಹಿನ್ನಡೆ:** ಕನ್ನಡಿಗರು, ಮರಾಠಿ ಹಾಗೂ ಉರ್ದು ಮಾಧ್ಯಮದ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವ ಈ ಶಾಲೆಯಲ್ಲಿ ಅರ್ಹ ಮತ್ತು ಖಾಯಂ ಶಿಕ್ಷಕರಿಲ್ಲದೆ ಕಲಿಕಾ ಮಟ್ಟ ಕುಸಿಯುತ್ತಿದೆ ಎಂಬುದು ಪೋಷಕರ ಮುಖ್ಯ ಆರೋಪವಾಗಿದೆ.

**ಅಧಿಕಾರಿಗಳಿಗೆ 'ವ್ಯವಸ್ಥೆ ಪರಿವರ್ತನೆ ವೇದಿಕೆ'ಯಿಂದ ಮನವಿ ಸಲ್ಲಿಕೆ:** ಈ ಸಮಾಜಿಕ ಹಾಗೂ ಶೈಕ್ಷಣಿಕ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿರುವ 'ವ್ಯವಸ್ಥೆ ಪರಿವರ್ತನೆ ವೇದಿಕೆ' (ತಾಲೂಕು ಘಟಕ), ಕಮಲನಗರದ ಶಾಸನಬದ್ಧ ಶಾಲಾ ಕೇಂದ್ರದಲ್ಲಿ ಖಾಯಂ ಶಿಕ್ಷಕರ ನೇಮಕಾತಿಗೆ ಆಗ್ರಹಿಸಿ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (BEO) ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಅಧಿಕೃತ ಮನವಿ ಪತ್ರ ಸಲ್ಲಿಸಿದೆ.

**ವೇದಿಕೆಯ ಪ್ರಮುಖ ಆಗ್ರಹಗಳು**

ಶಾಲೆಯಲ್ಲಿ ತೆರವಾಗಿರುವ ಕನ್ನಡ, ಉರ್ದು ಹಾಗೂ ಇತರ ವಿಷಯವಾರು ಹುದ್ದೆಗಳಿಗೆ ಕೂಡಲೇ ಖಾಯಂ ಶಿಕ್ಷಕರನ್ನು ನೇಮಿಸಬೇಕು.

ಶೈಕ್ಷಣಿಕ ವರ್ಷದ ಆರಂಭದಲ್ಲೇ ಸೂಕ್ತ ಶಿಕ್ಷಕರನ್ನ ಒದಗಿಸಿ ವಿದ್ಯಾರ್ಥಿಗಳಿಗೆ ಆಗುತ್ತಿರುವ ಶೈಕ್ಷಣಿಕ ನಷ್ಟವನ್ನು ತಡೆಯಬೇಕು.

ಶಾಲೆಯ ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸಲು ತಕ್ಷಣ ಸೂಕ್ತ ಕ್ರಮ ಕೈಗೊಳ್ಳಬೇಕು, ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ರೂಪಿಸಲಾಗುವುದು.

**ಪಾಲಕರ ಹಾಗೂ ಸ್ಥಳೀಯರ ಆಕ್ರೋಶ**

"ಖಾಸಗಿ ಶಾಲೆಗಳಿಗೆ ಭಾರಿ ಶುಲ್ಕ ನೀಡಲಾಗದೆ ಬಡ ಪೋಷಕರು ನಂಬಿಕೆಯಿಂದ ಸರ್ಕಾರಿ ಶಾಲೆಗೆ ಮಕ್ಕಳನ್ನು ಕಳುಹಿಸುತ್ತಿದ್ದಾರೆ. ಆದ–ರೆ, ಇಲ್ಲಿ ವಿಷಯವಾರು ಖಾಯಂ ಶಿಕ್ಷಕರೇ ಇಲ್ಲದಿದ್ದರೆ ಮಕ್ಕಳು ಪರೀಕ್ಷೆ ಎದುರಿಸುವುದು ಹೇಗೆ? ಕೇವಲ ಅತಿಥಿ ಶಿಕ್ಷಕರನ್ನೇ ನೆಚ್ಚಿಕೊಂಡು ಶಾಲೆಯನ್ನು ನಡೆಸುವುದು ಮಕ್ಕಳ ಭವಿಷ್ಯದ ಜೊತೆ ಚೆಲ್ಲಾಟವಾಡಿದಂತೆ," ಎಂದು ಪೋಷಕರು ಹಾಗೂ ಸ್ಥಳೀಯ ಮುಖಂಡರು ಬೇಸರ ವ್ಯಕ್ತಪಡಿಸಿದ್ದಾರೆ.

ಶಿಕ್ಷಣ ಇಲಾಖೆಯ ಉನ್ನತ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಕೂಡಲೇ ಜಾಗೃತರಾಗಿ ಕಮಲನಗರ ಶಾಲೆಯ ಖಾಯಂ ಶಿಕ್ಷಕರ ನೇಮಕಾತಿ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕಿದೆ.

# ಮಕ್ಕಳ ವಂದನೆ ಪದ್ಯದ ಅಭಿನಯ; ಲಕ್ಷಕ್ಕೂ ಹೆಚ್ಚು ವೀಕ್ಷಣೆ




**ಕೆಂಭಾವಿ:** ಪಟ್ಟಣದ ಸ್ವಾಮಿ ವಿವೇಕಾನಂದ ಹಿರಿಯ ಪ್ರಾಥಮಿಕ ಶಾಲೆಯ ಒಂದನೇ ತರಗತಿಯ ಪುಟಾಣಿ ಮಕ್ಕಳ ಮುಗ್ಧ ಅಭಿನಯದ ತೊದಲು ನುಡಿಯ ವೀಡಿಯೋ ಸಾಮಾಜಿಕ ಜಾಲತಾಣ ಇನ್‌ಸ್ಟಾಗ್ರಾಮ್‌ನಲ್ಲಿ ಸಖತ್ ವೈರಲ್ ಆಗಿದ್ದು, ನೆಟ್ಟಿಗರ ಮನ ಗೆಲ್ಲುವಲ್ಲಿ ಯಶಸ್ವಿಯಾಗಿದೆ.

ಶಾಲೆಯ ಒಂದನೇ ತರಗತಿ ಪಠ್ಯಕ್ರಮದ 'ವಂದನೆ' ಎಂಬ ಪದ್ಯಕ್ಕೆ ಪುಟಾಣಿ ಮಕ್ಕಳು ಅಭಿನಯಿಸುತ್ತಾ, ತೊದಲು ನುಡಿಯಿಂದ ಒಳಗೊಂಡ ಅಭಿನಯ ವೀಡಿಯೋವನ್ನು ಇನ್‌ಸ್ಟಾಗ್ರಾಮ್‌ಗೆ ಅಪ್‌ಲೋಡ್ ಮಾಡಲಾಗಿತ್ತು. ಜಾಲತಾಣದಲ್ಲಿ ಹಂಚಿಕೊಂಡ ಕೇವಲ 24 ಗಂಟೆಗಳಲ್ಲಿ 1 ಲಕ್ಷಕ್ಕೂ ಹೆಚ್ಚು ವೀಕ್ಷಣೆ ಪಡೆಯುವ ಮೂಲಕ ದಾಖಲೆ ಬರೆದಿದೆ. 2,000ಕ್ಕೂ ಹೆಚ್ಚು ವೀಕ್ಷಕರಿಂದ ಮೆಚ್ಚುಗೆ, 300ಕ್ಕೂ ಹೆಚ್ಚು ಜನರು ವೀಡಿಯೋವನ್ನು ಇತರೆ ಗ್ರೂಪ್‌ಗಳಿಗೆ ಹಂಚಿಕೊಂಡರೆ, 300ಕ್ಕೂ ಹೆಚ್ಚು ವೀಕ್ಷಕರು ತಮ್ಮ ಖಾತೆಯಲ್ಲಿ ವೀಡಿಯೋವನ್ನು ಉಳಿಸಿಕೊಂಡಿದ್ದಾರೆ.

ಪುಟಾಣಿಗಳ ಈ ಪ್ರತಿಭೆ ಹಾಗೂ ಕಲಿಯುವ ಶ್ರದ್ಧೆಗೆ ನೆಟ್ಟಿಗರು ಶ್ಲಾಘನೆ ಹರಿಸುತ್ತಿದ್ದಾರೆ. ಶಾಲೆಯ ಕಿರಿಯ ಮಕ್ಕಳಿಗೆ ಸಿಕ್ಕ ಬೃಹತ್ ಬೆಂಬಲಕ್ಕೆ ಶಾಲಾ ಆಡಳಿತ ಮಂಡಳಿ, ಮುಖ್ಯೋಪಾಧ್ಯಾಯರು ಹಾಗೂ ಬೋಧಕ–ಬೋಧಕೇತರ ಸಿಬ್ಬಂದಿ ವರ್ಗ ತೀವ್ರ ಹರ್ಷ ವ್ಯಕ್ತಪಡಿಸಿ, ಈ ಮಟ್ಟದ ಪ್ರೋತ್ಸಾಹ ಸಿಕ್ಕಿರುವುದು ನಮ್ಮ ಶಾಲೆಗೆ ಮತ್ತು ಶಿಕ್ಷಕರ ತಂಡಕ್ಕೆ ಅತ್ಯಂತ ಹೆಮ್ಮೆಯ ವಿಷಯವಾಗಿದೆ ಎಂದು ಶಾಲಾ ಆಡಳಿತ ಮಂಡಳಿ ಸಂತಸ ಹಂಚಿಕೊಂಡಿದೆ.

# ಉಚಿತ ನೋಟ್ ಬುಕ್ ವಿತರಣೆ



**ಪೀಣ್ಯ ದಾಸರಹಳ್ಳಿ:** ಸರ್ಕಾರಿ ಶಾಲೆಯಲ್ಲಿ ಓದುತ್ತಿರುವವರು ಮಧ್ಯಮ ಹಾಗೂ ಬಡವರ ಮಕ್ಕಳು ಪೋಷಕರ ಪರಿಸ್ಥಿತಿ ಹಾಗೂ ಸರ್ಕಾರಿ ಶಾಲೆಯ ಸ್ಥಿತಿಗತಿಗಳ ಬಗ್ಗೆ ಕಣ್ಣಾರೆ ಕಂಡಿದ್ದೆವೆ ಅವರ ಕಷ್ಟ ಸುಖಗಳಲ್ಲಿ ನಾವು ಕೂಡ ಅವರ ಭಾಗವಾಗಿ ಕ್ಷೇತ್ರದ ಎಲ್ಲಾ ಸರ್ಕಾರಿ ಶಾಲೆಗಳಿಗೆ ಉಚಿತ ಲಾಂಗ್ ನೋಟ್ ಬುಕ್ ವಿತರಣೆ ಮಾಡುವ ಸಂಕಲ್ಪವನ್ನು ಸೂರಜ್ ಫೌಂಡೇಷನ್ ನಿಂದ ಮಾಡುತ್ತಿದ್ದೆವೆ.ಎಂದು ಶಾಸಕ ಎಸ್ ಮುನಿರಾಜು ಹೇಳಿದರು.

ಸೂರಜ್ ಫೌಂಡೇಷನ್ ಅಧ್ಯಕ್ಷೆ ಸುಜಾತ ಮುನಿರಾಜು ನೇತೃತ್ವದಲ್ಲಿ ಕ್ಷೇತ್ರದ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಓದುತ್ತಿರುವ ಎಲ್ಲಾ ಮಕ್ಕಳಿಗೆ ಸುಮಾರು 40 ಲಕ್ಷ ರೂಗಳಲ್ಲಿ ಹಮ್ಮಿಕೊಂಡಿದ್ದ ಉಚಿತ ಲಾಂಗ್ ನೋಟ್ ಬುಕ್ ವಿತರಣೆ ಕಾರ್ಯಕ್ರಮದ ಅಂಗವಾಗಿ ಇಂದು ಹೆಗ್ಗನಹಳ್ಳಿ ಸರ್ಕಾರಿ ಶಾಲ ವಿದ್ಯಾರ್ಥಿಗಳಿಗೆ ವಿತರಣೆ ಮಾಡಿ ಮಾತನಾಡಿದರು. ಸೂರಜ್ ಫೌಂಡೇಷನ್ ವತಿಯಿಂದ ಸಂಸ್ಥಾಪಕ ಅಧ್ಯಕ್ಷೆ ಮಾತನಾಡಿ ಕಳೆದ ಅರು ವರ್ಷಗಳಿಂದ ನಮ್ಮ ಸಂಸ್ಥೆಯಿಂದ ಕ್ಷೇತ್ರದ ಎಲ್ಲಾ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಉಚಿತ ನೋಟ್ ಬುಕ್ ವಿತರಿಸಲಾಗುತ್ತಿದ್ದು ಬಡ ಹಾಗೂ ಮಧ್ಯಮ ವರ್ಗದ ಕುಟುಂಬದ ಮಕ್ಕಳು ಇದರಿಂದ ಕೊಂಚ ಮಟ್ಟಿಗೆ ಅನುಕೂಲವಾಗಲಿದೆ. ಪೋಷಕರು ಕಷ್ಟಪಟ್ಟು ನಿಮ್ಮನ್ನು ಶಾಲೆಗೆ ಕಳುಹಿಸಿ ಓದಿಸುತ್ತಿದ್ದಾರೆ .ಸರ್ಕಾರಿ ಶಾಲೆ ಎಂದು ಕಡೆಗಣಿಸಬೇಡಿ ಇತ್ತೀಚಿಗೆ ಸರ್ಕಾರಿ ಶಾಲೆಯಲ್ಲಿ 100% ಫಲಿತಾಂಶ ಬರುತ್ತಿದ್ದು ರ್‍ಯಾಂಕ್ ಕೂಡ ಬರುತ್ತಿದೆ. ಮಕ್ಕಳು ಮೊಬೈಲ್ ನಿಂದ ದೂರವಿದ್ದು ಪೋಷಕರ ಆಶಯದಂತೆ ಓದಿ ಮುಂದೆ ಬಂದು ಶಾಲೆಗೆ ಕೀರ್ತಿ ತನ್ನಿ ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಈ ಸಂದರ್ಭದಲ್ಲಿ ಪಾಲಿಕೆ ಮಾಜಿ ಸದಸ್ಯ ಭಾಗ್ಯಮ್ಮ ಕೃಷ್ಣಯ್ಯ ವಾಡ್ ಅಧ್ಯಕ್ಷರುಗಳಾದ ಕಣ್ಣಪ್ಪ, ಸಪ್ತಗಿರಿ ಆನಂದ್ ,ಕೆ ಸಿ ರವಿ ಗೌಡ, ಶಿವಲಿಂಗಯ್ಯ, ಶಿವಾನಂದ ನಗರದ ಮುನಿರಾಜು ಸೇರಿದಂತೆ ಶಾಲಾ ಶಿಕ್ಷಕರು ಸಿಬ್ಬಂದಿ ವರ್ಗ ಪೋಷಕರು ಮಕ್ಕಳು ಉಪಸ್ಥಿತರಿದ್ದರು

# ಸತ್ಯಕ್ಕೆ ದೂರವಾದ ಮಾತು



**ಗಂಗಾವತಿ:** ಇತ್ತೀಚಿನ ದಿನಗಳಲ್ಲಿ ಕೆಲವು ಮಾಧ್ಯಮಗಳು ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ "ಆಹಾರ ಇಲಾಖೆಯ ಅಧಿಕಾರಿಗಳು ನ್ಯಾಯಬೆಲೆ ಅಂಗಡಿ ಮಾಲೀಕರ ಮೇಲೆ ಒತ್ತಡ ಹೇರಿ 'ನ್ಯಾಯಬೆಲೆ ಅಂಗಡಿ' ಚಲನಚಿತ್ರದ ಟಿಕೆಟ್‌ಗಳನ್ನು ಖರೀದಿಸುವಂತೆ ಸೂಚನೆ ನೀಡಿದ್ದಾರೆ"ಎಂಬ ರೀತಿಯ ಸುದ್ದಿ ಹಾಗೂ ಸಂದೇಶಗಳು ವ್ಯಾಪಕವಾಗಿ ಹರಿದಾಡುತ್ತಿರುವುದು ಗಂಗಾವತಿ ತಾಲೂಕು ಆಹಾರ ಇಲಾಖೆಯ ಗಮನಕ್ಕೆ ಬಂದಿದೆ. ಈ ಹಿನ್ನೆಲೆಯಲ್ಲಿ ಇಲಾಖೆಯು ಈ ಕುರಿತು ಸ್ಪಷ್ಟನೆ ನೀಡಿದ್ದು, ಪ್ರಸಾರವಾಗುತ್ತಿರುವ ಮಾಹಿತಿ ಸಂಪೂರ್ಣವಾಗಿ ಸತ್ಯಕ್ಕೆ ದೂರವಾಗಿದ್ದು, ವಾಸ್ತವಾಂಶಗಳಿಗೆ ವಿರುದ್ಧವಾಗಿದೆ ಎಂದು ತಿಳಿಸಿದೆ. ಆಹಾರ ಇಲಾಖೆಯ ಪ್ರಕಟಣೆಯ ಪ್ರಕಾರ, ಗಂಗಾವತಿ ತಾಲೂಕು ಆಹಾರ ಇಲಾಖೆಯ ಯಾವುದೇ ಅಧಿಕಾರಿಗಳು ನ್ಯಾಯಬೆಲೆ ಅಂಗಡಿ ಮಾಲೀಕರಿಗೆ ಸಿನಿಮಾ ಟಿಕೆಟ್‌ಗಳನ್ನು ಖರೀದಿಸುವಂತೆ, ವಿತರಿಸುವಂತೆ ಅಥವಾ ಯಾವುದೇ ರೀತಿಯ ಒತ್ತಡ, ಸೂಚನೆ ಅಥವಾ ಕಡ್ಡಾಯವನ್ನು ವಿಧಿಸಿರುವುದಿಲ್ಲ. ಇಲಾಖೆಯ ಹೆಸರನ್ನು ಉಲ್ಲೇಖಿಸಿ ಹರಡಲಾಗುತ್ತಿರುವ ಇಂತಹ ಸುದ್ದಿಗಳಿಗೆ ಯಾವುದೇ ಅಧಿಕೃತ ಆಧಾರವಿಲ್ಲ ಎಂದು ಸ್ಪಷ್ಟಪಡಿಸಲಾಗಿದೆ.

ಈ ಚಿತ್ರಕ್ಕೆ ರಾಜ್ಯದ ಹಲವು ಗಣ್ಯರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಿತ್ರ ಯಶಸ್ವಿಯಾಗಲಿ ಎಂದು ಶುಭ ಹಾರೈಸಿದ್ದು, ಕರ್ನಾಟಕ ಸರ್ಕಾರದ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್. ಮುನಿಯಪ್ಪ ಅವರು ಕೂಡ ಚಿತ್ರಕ್ಕೆ ಪ್ರಶಂಸೆ ವ್ಯಕ್ತಪಡಿಸಿದ್ದಾರೆ ಎಂದು ಪ್ರಕಟಣೆಯಲ್ಲಿ ಉಲ್ಲೇಖಿಸಲಾಗಿದೆ.

# ಎಲ್ಲ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ: ಸಚಿವ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಬಬಲೇಶ್ವರ ತಾಲೂಕು ಕೇಂದ್ರಕ್ಕೆ ಅಗತ್ಯವಾಗಿರುವ ಎಲ್ಲ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ಸೋಮವಾರ ಮುಸ್ಸಂಜೆ ಬಬಲೇಶ್ವರ ಪಟ್ಟಣದಲ್ಲಿ ₹200 ಲಕ್ಷ ವೆಚ್ಚದ ತಾಲೂಕು ಕ್ರೀಡಾಂಗಣ ₹300 ಲಕ್ಷ ವೆಚ್ಚದ ಅಗ್ನಿಶಾಮಕ ಠಾಣೆ, ₹575 ಲಕ್ಷ ವೆಚ್ಚದಲ್ಲಿ ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸುವ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಬಬಲೇಶ್ವರದ ಅಭಿವೃದ್ಧಿಗೆ ಮತ್ತೊಂದು ಐತಿಹಾಸಿಕ ಹೆಜ್ಜೆ ಇದಾಗಿದೆ. ಯುವ ಪ್ರತಿಭೆಗಳ ಕನಸುಗಳಿಗೆ ವೇದಿಕೆಯಾಗುವ ಕ್ರೀಡಾಂಗಣ, ಜನರ ಜೀವ–ಆಸ್ತಿಯ ರಕ್ಷಣೆಗೆ ಇನ್ನಷ್ಟು ಶಕ್ತಿ ತುಂಬುವ ಅಗ್ನಿಶಾಮಕ ಠಾಣೆ ಹಾಗೂ ಗ್ರಾಮೀಣ ಭಾಗದ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆಗಳನ್ನು ತಲುಪಿಸುವ ಸುಸಜ್ಜಿತ ಆರೋಗ್ಯ ಕೇಂದ್ರಕ್ಕೆ ಬೂಮಿಪೂಜೆ ಮಾಡಲಾಗಿದೆ. ಇವು ಕೇವಲ ಕಟ್ಟಡಗಳಲ್ಲ. ಜನರ ಬದುಕಿನ ಗುಣಮಟ್ಟವನ್ನು ಬದಲಾಯಿಸುವ ಅಭಿವೃದ್ಧಿಯ ಬುನಾದಿಗಳಾಗಿವೆ. ಜನರ ಆಶೀರ್ವಾದವೇ ನಮ್ಮ ಶಕ್ತಿ. ಅಭಿವೃದ್ಧಿಯೇ ನಮ್ಮ ಆದ್ಯತೆ. ಬಬಲೇಶ್ವರದ ಪ್ರಗತಿಯ ಪಯಣ



ನಿರಂತರವಾಗಿರಲಿದೆ ಎಂದು ಅವರು ಹೇಳಿದರು.

ಹಿಂದೆ ಬಬಲೇಶ್ವರ ತಾಲೂಕಿಗಾಗಿ ಹೋರಾಟ ನಡೆದಾಗ ನಾನು ಶಾಸಕನಾಗಿರದಿದ್ದರೂ ಹೋರಾಟಗಾರರ ಮನವಿ ಮೇರೆಗೆ ಕೃಷ್ಣ ಅವರ ಸರಕಾರದಲ್ಲಿ ತಾಲೂಕಿ ಕೇಂದ್ರ ಘೋಷಣೆ ಮಾಡಿಸಿದ್ದೇ. ಮುಂದೆ ಶತ ಪ್ರಯತ್ನ ಮಾಡಿ ಮುಳವಾಡ ಏತ ನೀರಾವರಿಯಲ್ಲೂ ಕ್ಷೇತ್ರವನ್ನು ಸೇರಿಸಿ ಸಿದ್ಧೇಶ್ವರ ಶ್ರೀಗಳ ಆಶಯದಂತೆ ನೀರು ಹರಿಸಿದ್ದೇನೆ. ಬಬಲೇಶ್ವರ ಸೇರಿ ಜಿಲ್ಲೆಯ ಎಲ್ಲ ಕ್ಷೇತ್ರಗಳ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ. ಯುವಕರಿಗಾಗಿ ಇಲ್ಲಿ ಶೀಘ್ರದಲ್ಲಿ ಅತ್ಯಾಧುನಿಕ ಜಿಮ್ ಆರಂಭಿಸಲಾಗುವುದು. ಎಲ್ಲ ಶಾಲೆಗಳಿಗೆ ಸಲಕರಣೆಗಳನ್ನು ನೀಡಲಾಗಿದೆ. 8 ರಿಂದ10ನೇ ತರಗತಿ ಈಗ ಸ್ಮಾರ್ಟಕ್ಲಾಸ್ ಸೌಲಭ್ಯ ಒದಗಿಸಲಾಗಿದ್ದು, ಮುಂಬರುವ ದಿನಗಳಲ್ಲಿ 5ನೇ ತರಗತಿಯಿಂದ 7ನೇ ತರಗತಿಗಳಿಗೂ ಸ್ಮಾರ್ಟ್ ಕ್ಲಾಸ್ ಸೌಲಭ್ಯಗಳನ್ನು ವಿಸ್ತರಿಸಲಾಗುವುದು. ಕೆರೆ ತುಂಬಿಸುವ ಯೋಜನೆ ಸಫಲವಾಗಿದ್ದು, ಈಗ ಹಳ್ಳಗಳನ್ನು ತುಂಬುವ ಯೋಜನೆ ಅನುಷ್ಠಾನ ಮಾಡಲಾಗುತ್ತಿದೆ. ಈ ಸಲ ದ್ರಾಕ್ಷಿ ಬೆಳೆದು ಹಲವಾರು ರೈತರು ಕೋಟಿಗಟ್ಟಲೇ ಆದಾಯ ಗಳಿಸಿದ್ದಾರೆ. ಹೀಗಾಗಿ ಯಾರೂ ತಮ್ಮ ಭೂಮಿಗಳನ್ನು ಮಾರಬೇಡಿ. ಈ ಭೂಮಿ ನಿಮಗಷ್ಟೇ ಅಲ್ಲ, ನಿಮ್ಮ ಮುಂದಿನ ಪೀಳಿಗೆಗೂ ಬದುಕು ಕಟ್ಟಿಕೊಳ್ಳಲು ಅಗತ್ಯವಾಗಿದೆ. ಈ ಭೂಮಿಗೆ ಬಂಗಾರದ ನನ್ನ ಬೆಲೆ ತರುವ ಕೆಲಸವನ್ನು ಕ್ಷೇತ್ರದಲ್ಲಿ ಮಾಡಿರುವ ತೃಪ್ತಿ ತಮಗಿದೆ. ಇಲ್ಲಿನ ಶ್ರೀ ಗುರುಪಾದೇಶ್ವರು, ಶಾಂತವೀರ ಅಪ್ಪಗಳ ಆಶೀರ್ವಾದ ಸದಾ ನನ್ನ ಮೇಲಿದೆ ಇದೆ ಎಂದು ಸಚಿವರು ಹೇಳಿದರು.

ಮುಖಂಡ ವಿ. ಎನ್. ಬಿರಾದಾರ ಮಾತನಾಡಿ, ಸಚಿವ ಎಂ. ಬಿ. ಪಾಟೀಲರು ಬಬಲೇಶ್ವರಕ್ಕೆ ಕಲ್ಪವೃಕ್ಷವಾಗಿದ್ದರೆ. ನಾವು ಕೇಳಿದ್ದಕ್ಕಿಂತ ಹೆಚ್ಚು ಅಭಿವೃದ್ಧಿ ಕಾರ್ಯ ಮಾಡಿ ಎಲ್ಲ ಜನಪ್ರತಿನಿಧಿಗಳಿಗೆ ಮಾದರಿಯಾಗಿದ್ದಾರೆ. ಅಭಿವೃದ್ಧಿಯಲ್ಲಿ ಎಲ್ಲರಿಗಿಂತಲೂ ಹೆಚ್ಚು ಕೆಲಸ ಮಾಡುತ್ತಿದ್ದಾರೆ. ಅವರು ತಮ್ಮ ಕಾಯಕದ ಮೂಲಕ ಇನ್ನೂ ಹೆಚ್ಚಿನ ಸ್ಥಾನ ಅಲಂಕರಿಸಲಿದ್ದಾರೆ. ಶ್ರೀ ಗುರುಪಾದೇಶ್ವರರು ಮತ್ತು ಶ್ರೀ ಸಿದ್ಧೇಶ್ವರ ಸ್ವಾಮೀಜಿಗಳ ಆಶೀರ್ವಾದ ಸಚಿವರ ಮೇಲಿದೆ. ಇಂಥ ಆದರ್ಶವಂತದರಿಗೆ ಯುವಕರು ಸೇರಿದಂತೆ ನಾವೆಲ್ಲರೂ ಸದಾ ಬೆನ್ನೆಲುಬಾಗಿ ನಿಲ್ಲಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಬಲೇಶ್ವರ ಬೃಹನ್ಮಠದ ಮಹಾದೇವ ಶಿವಾಚಾರ್ಯರು, ಮುಖಂಡರಾದ ಈರನಗೌಡ ಬಿರಾದಾರ, ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಮಲ್ಲು ದಳವಾಯಿ, ಮುಖಂಡರಾದ ಶ್ರೀಶೈಲಗೌಡ ಪಾಟೀಲ ನಿಡೋಣಿ, ವಿ. ಎಸ್. ಪಾಟೀಲ, ವಿದ್ಯಾರಾಣಿ ತುಂಗಳ, ಉಮೇಶ ಮಲ್ಲನ್ನವರ, ಆನಂದ ಬೂದಿಹಾಳ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಮಲ್ಲನಗೌಡ ಬಿರಾದರ, ಯುವ ಸಬಲೀಕರಣ ಇಲಾಖೆ ಸಹಾಯಕ ನಿರ್ದೇಶಕ ರಾಜಶೇಖರ ದೈವಾಡಿ, ಅಗ್ನಿಶಾಮಕ ಸೇವೆ ಇಲಾಖೆ ಜಿಲ್ಲಾ ಅಧಿಕಾರಿಗಳು ಉಪಸ್ಥಿತರಿದ್ದರು.

# ಅಬಕಾರಿ ನಿರೀಕ್ಷಕಿ ವಿರುದ್ಧ ದಲಿತ ಸಂಘರ್ಷ ಸಮಿತಿಯಿಂದ ಗಂಭೀರ ಆರೋಪ

• ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ

ಹಗರಿಬೊಮ್ಮನಹಳ್ಳಿ ಅಬಕಾರಿ ನಿರೀಕ್ಷಕರಾದ ಎಸ್.ಬಿ. ಮಮತ ಅವರ ವಿರುದ್ಧ ಅಧಿಕಾರ ದುರುಪಯೋಗ, ಸಾರ್ವಜನಿಕರಿಗೆ ಅವಮಾನಕರ ವರ್ತನೆ, ಇಲಾಖಾ ನಿಯಮ ಉಲ್ಲಂಘನೆ ಹಾಗೂ ಕರ್ತವ್ಯ ಲೋಪ ಸೇರಿದಂತೆ ಹಲವು ಗಂಭೀರ ಆರೋಪಗಳನ್ನು ಮಾಡಿರುವ ಕರ್ನಾಟಕ ದಲಿತ ಸಂಘರ್ಷ ಸಮಿತಿ (ರಿ), ಹಗರಿಬೊಮ್ಮನಹಳ್ಳಿ ತಾಲೂಕು ಸಮಿತಿ ವಿಜಯನಗರ ಜಿಲ್ಲಾ ಅಬಕಾರಿ ಉಪ ಆಯುಕ್ತರಿಗೆ ಸುದೀರ್ಘ ಲಿಖಿತ ದೂರು ಸಲ್ಲಿಸಿ, ನಿಷ್ಪಕ್ಷಪಾತ ಇಲಾಖಾ ತನಿಖೆ ನಡೆಸಿ ಸೂಕ್ತ ಶಿಸ್ತು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದೆ.

ಸಮಿತಿಯ ಆರೋಪದ ಪ್ರಕಾರ, ಹಗರಿಬೊಮ್ಮನಹಳ್ಳಿ ತಾಲೂಕಿನ ಕೆಚ್ಚಿನಬಂಡಿ, ರಾಯರಾಳ ತಾಂಡ, ಪಿಂಜಾರ್ ಹೆಗ್ಡಳ್, ಅನೆಕಲ್ ತಾಂಡ, ಸೊಬಟಿ, ಕಿತ್ತೂರು, ಮುತ್ಕೂರು, ವಲ್ಲಭಾಪುರ, ಹಲಗಾಪುರ, ಮಗಿಮಾವಿನಹಳ್ಳಿ ಸೇರಿದಂತೆ ಹಲವು ಗ್ರಾಮಗಳಲ್ಲಿ ಪರವಾನಗಿ ಇಲ್ಲದೆ ಅಕ್ರಮ ಮದ್ಯ ಸಂಗ್ರಹ ಹಾಗೂ ಮಾರಾಟ ನಡೆಯುತ್ತಿರುವ ಕುರಿತು 2026ರ ಜೂನ್ 10ರಂದು ಅಬಕಾರಿ ಇಲಾಖೆಗೆ ಲಿಖಿತ ದೂರು ಸಲ್ಲಿಸಲಾಗಿತ್ತು. ಆದರೆ ಹಲವು ದಿನಗಳು ಕಳೆದರೂ ಯಾವುದೇ ಪರಿಣಾಮಕಾರಿ



ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯ ವಹಿಸಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಈ ಕುರಿತು ಮಾಹಿತಿ ಪಡೆಯಲು ಕಚೇರಿಗೆ ತೆರಳಿದಾಗ, ಸಾರ್ವಜನಿಕರೊಂದಿಗೆ ಗೌರವಯುತವಾಗಿ ವರ್ತಿಸದೇ ಸಂಘಟನೆಯ ಸದಸ್ಯರಿಗೆ ಅವಮಾನವಾಗುವ ರೀತಿಯಲ್ಲಿ ಮಾತನಾಡಲಾಗಿದೆ ಎಂದು ಸಮಿತಿ ಆರೋಪಿಸಿದೆ. ಅಲ್ಲದೆ, ಜುಲೈ 28ರಂದು ಕಚೇರಿಗೆ ಭೇಟಿ ನೀಡಿದ ವೇಳೆ ಸಂಘಟನೆಯ ಯುವ ಕಾರ್ಯಕರ್ತನ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಲಾಗಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ದೂರಿನಲ್ಲಿ ಮತ್ತಷ್ಟು ಗಂಭೀರ ಆರೋಪಗಳನ್ನು ದಾಖಲಿಸಲಾಗಿದ್ದು, ಸಾರ್ವಜನಿಕರ ದೂರುಗಳಿಗೆ ಸ್ಪಂದಿಸದಿರುವುದು, ಕಚೇರಿಯಲ್ಲಿ ಅವಮಾನಕರವಾಗಿ ವರ್ತಿಸಿರುವುದು, ಸುಮಾರು ಒಂಬತ್ತು ವರ್ಷಗಳಿಂದ ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿರುವ ಕುರಿತು ಪರಿಶೀಲನೆ ನಡೆಸಬೇಕಿರುವುದು, ಕರ್ತವ್ಯದ ವೇಳೆ ಇಲಾಖೆಯ ಸಮವಸ್ತ್ರ ಧರಿಸದೇ ಸಾಮಾನ್ಯ ಉಡುಪಿನಲ್ಲಿ ಕಾರ್ಯನಿರ್ವಹಿಸಿರುವುದು, ಸಮವಸ್ತ್ರವನ್ನು ಕಚೇರಿಯಲ್ಲಿ ನೇತುಹಾಕಿರುವುದು, ಕಚೇರಿಯಲ್ಲಿದ್ದ ಡಾ. ಬಾಬು ಜಗಜೀವನ ರಾಮ್ ಅವರ ಭಾವಚಿತ್ರಕ್ಕೆ ಅಗತ್ಯ ಗೌರವ ನೀಡದಿರುವುದು, ಸೂಚನಾ ಫಲಕವನ್ನು ನವೀಕರಿಸದೇ ನಿರ್ಲಕ್ಷ್ಯ ವಹಿಸಿರುವುದು ಹಾಗೂ ಸಂಘಟನೆಯ ಸದಸ್ಯರ ವಿರುದ್ಧ ಆಧಾರರಹಿತ ಆರೋಪ ಮಾಡಿರುವುದು ಸೇರಿದಂತೆ ಹಲವು ಅಂಶಗಳನ್ನು ಪ್ರಸ್ತಾಪಿಸಲಾಗಿದೆ.

ವಿಜಯನಗರ ಜಿಲ್ಲಾ ಅಬಕಾರಿ ಉಪ ಆಯುಕ್ತರಿಗೆ ಸಲ್ಲಿಸಿರುವ ಲಿಖಿತ ದೂರಿನಲ್ಲಿ, ಮೇಲ್ಕಂಡ ಎಲ್ಲ ಆರೋಪಗಳ ಕುರಿತು ನ್ಯಾಯಸಮ್ಮತ ಹಾಗೂ ನಿಷ್ಪಕ್ಷಪಾತ ಇಲಾಖಾ ತನಿಖೆ ನಡೆಸಬೇಕು. ಆರೋಪಗಳು ಸಾಬೀತಾದಲ್ಲಿ ಸಂಬಂಧಪಟ್ಟ ಅಧಿಕಾರಿಯ ವಿರುದ್ಧ ಕರ್ನಾಟಕ ನಾಗರಿಕ ಸೇವಾ ನಿಯಮಗಳು ಹಾಗೂ ಅಬಕಾರಿ ಇಲಾಖೆಯ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಿ, ಹಗರಿಬೊಮ್ಮನಹಳ್ಳಿ ಅಬಕಾರಿ ಕಚೇರಿಯಿಂದ ವರ್ಗಾವಣೆ ಮಾಡಬೇಕು ಎಂದು ಸಮಿತಿ ಆಗ್ರಹಿಸಿದೆ.

ಅಲ್ಲದೆ, ಅಕ್ರಮ ಮದ್ಯ ಮಾರಾಟ ಕುರಿತಾಗಿ ಈ ಹಿಂದೆ ಸಲ್ಲಿಸಲಾದ ದೂರಿನ ಮೇಲೂ ತಕ್ಷಣ ಕಾರ್ಯಾಚರಣೆ ನಡೆಸಿ, ಪರವಾನಗಿ ಇಲ್ಲದೆ ಮದ್ಯ ಮಾರಾಟ ಹಾಗೂ ಸಂಗ್ರಹದಲ್ಲಿ ತೊಡಗಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಲಾಗಿದೆ.

# ನಾಯಕತ್ವ ದೊಡ್ಡ ಜವಾಬ್ದಾರಿ: ಮುಹಮ್ಮದ ಅಲಿ ಅಲ್ ಹುಸೇನಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಒಳ್ಳೆಯ ಕೇಳುಗರೇ ಒಳ್ಳೆಯ ನಾಯಕರು ಆಗಲು ಸಾಧ್ಯ. ಅವರಲ್ಲಿ ಸಹನೆ ಮುಖ್ಯ. ನಾಯಕತ್ವ ಒಂದು ದೊಡ್ಡ ಜವಾಬ್ದಾರಿ ಎಂದು ಖಾಜಾ ಬಂದಾನವಾಜ ವಿಶ್ವ ವಿದ್ಯಾಲಯದ ಕುಲಾಧಿಪತಿ ಜನಾಬ ಸಯ್ಯದ ಮುಹಮ್ಮದ ಅಲಿ ಅಲ್ ಹುಸೇನಿ ನುಡಿದರು. ಅವರು ಮಂಗಳವಾರ ಸಯ್ಯದ ಅಕ್ಬರ ಹುಸೇನಿ ಶಾಲೆಯ 2026–2027 ನೇ ಸಾಲಿನ ಇನ್ವೆಸ್ಟಿಟು ರ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿ–ಯಾಗಿ ಮಾತನಾಡಿದರು.

ಇದು ಅತ್ಯಂತ ಪ್ರಮುಖ ಸಮಾರಂಭ. ಪ್ರಮುಖ ಸಾಮರ್ಥ್ಯದೊಂದಿಗೆ ಅತ್ಯುತ್ತಮವಾದ ವಿದ್ಯಾರ್ಥಿಯನ್ನು ಆಯ್ಕೆ ಮಾಡಲು ವಿದ್ಯಾರ್ಥಿಗಳು ಮತ್ತು ಶಿಕ್ಷಕರನ್ನು ಇದು ಒಳಗೊಂಡಿರುತ್ತದೆ. ಕ್ಯಾಪ್ಟನ್‌ಗಳು ಕೇವಲ ಸ್ಥಾನವನ್ನು ಆನಂದಿಸುವುದಲ್ಲ, ಆದರೆ ಅವರು ಇತರರಿಗೆ ಮಾದರಿ ಆಗಬೇಕು. ಅವರು ವಿನಮ್ರರಾಗಿರಬೇಕು ಹಾಗೂ ಎಲ್ಲರನ್ನು



ಗೌರವಿಸಬೇಕು. ನಾಯಕ ರಾಗುವುದು ಸುಲಭವಲ್ಲ. ಇಂದಿನ ಪೀಳಿಗೆ ಮೊಬೈಲ ದಾಸರಾಗುತ್ತಿದೆ, ಅಗತ್ಯ ವಿದ್ದಷ್ಟು ಮಾತ್ರ ಮೊಬೈಲ್ ಬಳಸಿ. ಐ, ಚಾಟ್ ಜಿಪಿಟಿ ಮೇಲೆ ಅವಲಂಬಿತರಾಗಬೇಡಿ. ನಾಯಕರು ಆದೇಶಗಳು ಅಥವಾ ನಿಯಂತ್ರಣವನ್ನು ಮಾತ್ರ ರವಾನಿಸಬಾರದು. ಎಲ್ಲರ ಸಲಹೆಯನ್ನು ಸ್ವೀಕರಿಸಿ ನಂತರ ನಿರ್ಧರಿಸಬೇಕು. ತಾಳ್ಮೆ ಇರಬೇಕು. ಆಯ್ಕೆಯಾದ ಎಲ್ಲ ನಾಯಕರನ್ನು ಅಭಿನಂದಿಸಿದರು. ಅವರು ತಮ್ಮ ಸಹ ಪಾಠಿಗಳನ್ನು ಉತ್ತೇಜಿಸಬೇಕು. ಶಾಲಾ ವಿದ್ಯಾರ್ಥಿ ಜೀವನ ಅಮೂಲ್ಯ. ಇದನ್ನು ಸದ್ಬಳಿಕೆ ಮಾಡಿಕೊಳ್ಳಿ. ಕ್ರೀಡೆ ಮತ್ತು ಸಂಸ್ಕೃತಿಕ ಕಾರ್ಯಕ್ರಮಗಳಲ್ಲೂ ಕೂಡ ಪಾಲ್ಗೊಳ್ಳಿ. ಶಿಕ್ಷಕರಿಗೆ ಗೌರವಿಸಿ ಎಂದು ಹೇಳಿ ವಿದ್ಯಾರ್ಥಿಗಳಿಗೆ ಅಭಿನಂದನೆಗಳನ್ನು ತಿಳಿಸಿದರು. ನನ್ನ ತಂದೆ ದಿವಂಗತ ಡಾ ಸಯ್ಯದ ಶಾಹ ಖುಸ್ರೋ ಹುಸ್ಸೇನಿ ಸಾಹೇಬರ ಕನಸನ್ನು ಎಲ್ಲರೂ ಸೇರಿ ನನಸಾಗಿಸೋಣ ಎಂದರು.

ಪರ್ಲ್, ಸಫಿರೆ, ಎಮರಾಲ್ಡ್ ಮತ್ತು ರುಬಿ ಎಂಬ 4 ಹೌಸಗಳಿಗೆ ನಾಯಕ ಮತ್ತು ಉಪನಾಯಕರಿಗೆ ಬ್ಯಾಚಗಳನ್ನು ತೊಡಿಸಲಾಯಿತು. ವಿದ್ಯಾರ್ಥಿಗಳು ನೃತ್ಯ ಪ್ರದರ್ಶಿಸಿದರು.

ವಿದ್ಯಾರ್ಥಿಗಳಾದ ಅಬ್ದುಲ್ ಸಮದ್ ಮತ್ತು ಅಬುಲ್ ಉಜರ್ ಪ್ರಾರ್ಥಿಸಿದರೆ, ರೂಫಿ ಜಯ್ನಬ್ ಸ್ವಾಗತಿಸಿದಳು. ವಿದ್ಯಾರ್ಥಿನಿ ಸಯ್ಯದಾ ಅಲಿಷಾ ಫಾತಿಮಾ ವಂದಿಸಿದ್ರೆ, ಮೊಹಮ್ಮದ್ ಅಯಾನ ಮತ್ತು ಮಿರ್ಜಾ ಉಜೈರ್ ಬೇಗ, ಸೈದಾ ಶಿಬ್ರಾ ಹುಸ್ಸೇನಿ ನಿರೂಪಿಸಿದರು. ಈ ಕಾರ್ಯಕ್ರಮದಲ್ಲಿ ಕೆಬಿಎನ ಕ್ಯಾಂಪಸ ನಿರ್ದೇಶಕ ಡಾ ಸಯ್ಯದ ಮುಸ್ತಫಾ ಅಲ ಹುಸ್ಸೇನಿ, ಪ್ರಾಥಮಿಕ್ ಮತ್ತು ದ್ವಿತೀಯ ಶಿಕ್ಷಣದ ಕಾರ್ಯದರ್ಶಿ ಬೆನ್ನಿ ಕುರಿಯಾಕೋಸ್, ವಿವಿಯ ಸಮ ಉಪ ಕುಲ್ಪತಿ ಪ್ರೊ ಅಷಫಾಕ ಅಹ್ಮದ, ಕುಲಸಚಿವ ಮಿರ್ ವಿಲಾಯತ ಅಲಿ, ಶಾಲೆಯ ಪ್ರಾಂಶುಪಾಲ ಲಿಜೆಶ ತುರುತಿಲ್ಲ ಹಾಗೂ ಎಲ್ಲ ಶಿಕ್ಷಕವರ್ಗ, ವಿದ್ಯಾರ್ಥಿಗಳು ಹಾಜರಿದ್ದರು.

# ಗುರುಪೂರ್ಣಿಮೆ: ಬದುಕಿಗೆ ಬೆಳಕಾಗುವ ಗುರುವಿಗೆ ಭಕ್ತಿಯ ನಮನ




ಗುರುವು–ಅರಿವು

● ಪರಶುರಾಮ ಕರಣಂ

ಭಾಲ್ಕಿ

"ಗುರು ಇಲ್ಲದೆ ಜ್ಞಾನವಿಲ್ಲ, ಜ್ಞಾನವಿಲ್ಲದೆ ಜೀವನಕ್ಕೆ ದಾರಿಯಿಲ್ಲ." ಭಾರತೀಯ ಸಂಸ್ಕೃತಿಯ ಆತ್ಮವೇ ಗುರು–ಶಿಷ್ಯ ಪರಂಪರೆ. ಅಜ್ಞಾನದ ಅಂಧಕಾರವನ್ನು ದೂರ ಮಾಡಿ ಜ್ಞಾನದ ಬೆಳಕನ್ನು ಬೆಳಗಿಸುವ ಮಹಾನ್ ವ್ಯಕ್ತಿತ್ವವೇ ಗುರು. ಅಂತಹ ಗುರುವಿನ ತ್ಯಾಗ, ಸೇವೆ, ಜ್ಞಾನ ಮತ್ತು ಮಾರ್ಗದರ್ಶನವನ್ನು ಸ್ಮರಿಸಿ ಕೃತಜ್ಞತೆ ಸಲ್ಲಿಸುವ ಪವಿತ್ರ ಹಬ್ಬವೇ ಗುರುಪೂರ್ಣಿಮೆ.

ಆಷಾಢ ಮಾಸದ ಪೂರ್ಣಿಮೆಯಂದು ಆಚರಿಸುವ ಗುರುಪೂರ್ಣಿಮೆ, ಮಹರ್ಷಿ ವೇದವ್ಯಾಸರ ಜನ್ಮದಿನವಾಗಿರುವುದರಿಂದ ಇದನ್ನು ವ್ಯಾಸಪೂರ್ಣಿಮೆ ಎಂದೂ ಕರೆಯುತ್ತಾರೆ. ವೇದ, ಪುರಾಣ, ಮಹಾಭಾರತದಂತಹ ಅಮೂಲ್ಯ ಗ್ರಂಥಗಳನ್ನು ಮಾನವಕುಲಕ್ಕೆ ನೀಡಿದ ವೇದವ್ಯಾಸರು



ಜ್ಞಾನ ಪರಂಪರೆಯ ಶಾಶ್ವತ ಸಂಕೇತವಾಗಿದ್ದಾರೆ.

ಗುರು ಎಂದರೆ ಕೇವಲ ಪಾಠ ಹೇಳುವ ಶಿಕ್ಷಕರಲ್ಲ. ಜೀವನದ ಮೌಲ್ಯಗಳನ್ನು ಬೋಧಿಸುವವರು, ಸಂಸ್ಕಾರವನ್ನು ರೂಪಿಸುವವರು, ಆತ್ಮವಿಶ್ವಾಸ ತುಂಬುವವರು, ಕತ್ತಲೆಯ ದಾರಿಯಲ್ಲಿ ಬೆಳಕಿನ ಕಿರಣವಾಗುವವರು ಗುರು. ಒಂದು ಉತ್ತಮ ಸಮಾಜದ ನಿರ್ಮಾಣದಲ್ಲಿ ಗುರುವಿನ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಅವರ ಬೋಧನೆಯೇ ವಿದ್ಯಾರ್ಥಿಯನ್ನು ಉತ್ತಮ ಪ್ರಜೆ, ಆದರ್ಶ ವ್ಯಕ್ತಿ ಹಾಗೂ ಜವಾಬ್ದಾರಿಯುತ ನಾಗರಿಕನನ್ನಾಗಿ ರೂಪಿಸುತ್ತದೆ.

ಇಂದಿನ ಡಿಜಿಟಲ್ ಯುಗದಲ್ಲಿ ಮಾಹಿತಿ ಕ್ಷಣಾರ್ಧದಲ್ಲಿ ಸಿಗಬಹುದು. ಆದರೆ ವಿವೇಕ, ಮೌಲ್ಯಗಳು, ಮಾನವೀಯತೆ ಮತ್ತು ಬದುಕಿನ ಸಾರ್ಥಕತೆಯನ್ನು ಕಲಿಸುವುದು ಗುರುವಿನ ಮಾರ್ಗದರ್ಶನದಿಂದ ಮಾತ್ರ ಸಾಧ್ಯ. ಆದ್ದ–ರಿಂದ ತಂತ್ರಜ್ಞಾನ ಎಷ್ಟೇ ಬೆಳೆದರೂ ಗುರುವಿನ ಸ್ಥಾನವನ್ನು ಯಾವುದೂ ತುಂಬಲಾರದು.

ಗುರುಪೂರ್ಣಿಮೆ ಕೇವಲ ಆಚರಣೆಯ ದಿನವಲ್ಲ; ನಮ್ಮ ಬದುಕನ್ನು ರೂಪಿಸಿದ ಪ್ರತಿಯೊಬ್ಬ ಗುರುವನ್ನು ಸ್ಮರಿಸುವ, ಅವರಿಗೆ ಕೃತಜ್ಞತೆ ಸಲ್ಲಿಸುವ ಮತ್ತು ಅವರು ತೋರಿದ ಆದರ್ಶ ಮಾರ್ಗದಲ್ಲಿ ನಡೆಯುವ ಸಂಕಲ್ಪ ಮಾಡುವ ದಿನವಾಗಿದೆ.

"ಗುರುವಿನ ಆಶೀರ್ವಾದವೇ ಯಶಸ್ಸಿನ ಶಕ್ತಿ, ಗುರುವಿನ ಮಾರ್ಗದರ್ಶನವೇ ಜೀವನದ ದಿಕ್ಕು, ಗುರುವಿನ ಸಂಸ್ಕಾರವೇ ವ್ಯಕ್ತಿತ್ವದ ಶ್ರೀಮಂತಿಕೆ."

ಈ ಗುರುಪೂರ್ಣಿಮೆಯ ಸಂದರ್ಭದಲ್ಲಿ ಎಲ್ಲ ಗುರುಗಳಿಗೆ ಹೃತ್ಪೂರ್ವಕ ನಮನ ಸಲ್ಲಿಸೋಣ. ಅವರು ಬಿತ್ತಿದ ಜ್ಞಾನದ ಬೀಜವನ್ನು ಸೇವೆ, ಸಂಸ್ಕಾರ ಮತ್ತು ಸದ್ಗುಣಗಳ ಫಲವತ್ತಾದ ವೃಕ್ಷವನ್ನಾಗಿ ಬೆಳೆಸೋಣ. ಇದೇ ಗುರುಗಳಿಗೆ ಸಲ್ಲಿಸುವ ಅತ್ಯುನ್ನತ ಗೌರವ, ಇದೇ ಗುರುಪೂರ್ಣಿಮೆಯ ನಿಜವಾದ ಅರ್ಥ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200222

PRGI NO. (RNINO:KARKAN/2011/48371)